ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಸಂಪುಟ: 21, ಸಂಚಿಕೆ: 202, ಪುಟಗಳು: 8, ಬುಧವಾರ, 1 ಮೇ 2024 RNI NO. KARKAN/2002/08054

epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ



ನೇತೃ ಸಾರಥ್ಯದಲ್ಲಿ...

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ; ಇನ್ನೂ ಬೇಕೆನ್ನುವವನು ಬಡವ

। ಸೆನೆಕಾ

**ಪಂಚಾಂಗ**

(ಬುಧವಾರ 1, ಮೇ-2024)

- ಶ್ರೀಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು,
- ಚೈತ್ರ ಮಾಸ, ಕೃಷ್ಣ ಪಕ್ಷ,
- ವಾರ: ಬುಧವಾರ, ತಿಥಿ : ಅಷ್ಟಮಿ
- ನಕ್ಷತ್ರ: ಶ್ರವಣ
- ರಾಹುಕಾಲ: 12.20 ರಿಂದ 1.54
- ಗುಳಿಕಕಾಲ: 10.46 ರಿಂದ 12.20
- ಯಮಗಂಡಕಾಲ: 7.38 ರಿಂದ 9.12



# ಟಿಡಿಪಿ ಗೆದ್ದರೆ ಫ್ರೀ ಸೈಟ್

**ಅಮರಾವತಿ:** ಲೋಕಸಭಾ ಚುನಾವಣೆ ಹತ್ತಿರ ಬರುತ್ತಿದ್ದಂತೆ ಎಲ್ಲಾ ಪಕ್ಷಗಳೂ ಜನರನ್ನ ತಮ್ಮತ್ತಾ ಸೆಳೆಯಲು ಪ್ರಯತ್ನಿಸುತ್ತಿವೆ. ಮನೆ-ಮನೆ ಪ್ರಚಾರ ಕೈಗೊಂಡು ಮತಯಾಚನೆ ಮಾಡುತ್ತಿದ್ದಾರೆ. ಈ ನಡುವೆ ಆಂಧ್ರಪ್ರದೇಶದಲ್ಲಿ ಲೋಕಸಭೆ ಜೊತೆಗೆ ವಿಧಾನಸಭೆ ಚುನಾವಣೆ ಕೂಡ ನಡೆಯುತ್ತಿದ್ದು, ಆಡಳಿತಾರೂಢ ವೈಎಸ್ಆರ್ ಪಕ್ಷವು ಈಗಾಗಲೇ ತನ್ನ ಪ್ರಣಾಳಿಕೆ ಪ್ರಕಟಿಸಿದೆ. ಈ ಬೆನ್ನಲ್ಲೇ ಟಿಡಿಪಿ ನಾಯಕ ಚಂದ್ರಬಾಬು ನಾಯ್ಡು, ಜನಸೇನಾ ಪಕ್ಷದ ನಾಯಕ, ನಟ ಪವನ್ ಕಲ್ಯಾಣ್ ಮಂಗಳವಾರ ಎನ್‌ಡಿಎ ಮೈತ್ರಿ ಕೂಟದ ಪ್ರಣಾಳಿಕೆ ಬಿಡುಗಡೆಗೊಳಿಸಿದ್ದು, ಹಲವು ಉಚಿತ ಗ್ಯಾರಂಟಿಗಳನ್ನ ಘೋಷಣೆ ಮಾಡಿದ್ದಾರೆ. ಇದನ್ನು ಕೆಲವರು ಕರ್ನಾಟಕ ಕಾಂಗ್ರೆಸ್ ಪಕ್ಷದ ಕಾಪಿ ಎಂದು ಟೀಕಿಸಿದ್ದಾರೆ.

## ಎನ್‌ಡಿಎ ಪ್ರಣಾಳಿಕೆಯಲ್ಲಿ ಏನಿದೆ?

**ಮೈತ್ರಿಕೂಟದ ಪ್ರಣಾಳಿಕೆಯಲ್ಲಿ ಮುಂದಿನ 5 ವರ್ಷಗಳಲ್ಲಿ ರಾಜ್ಯದಲ್ಲಿ 20 ಲಕ್ಷ ಜನರಿಗೆ ಉದ್ಯೋಗ ನೀಡುವುದಾಗಿ ಭರವಸೆ ನೀಡಿದ್ದಾರೆ. ಇದರೊಂದಿಗೆ ಪಕ್ಷ ಅಧಿಕಾರಕ್ಕೆ ಬಂದರೆ ಬಡವರಿಗೆ 900 ಚದರ ಅಡಿಯ ನಿವೇಶನವನ್ನು ಉಚಿತವಾಗಿ ನೀಡಲಾಗುತ್ತದೆ, ಮಾಸಿಕ 3,000 ರೂ. ನಿರುದ್ಯೋಗ ಭತ್ಯೆಯನ್ನೂ ನೀಡಲಾಗುತ್ತದೆ ಎಂದು ಘೋಷಿಸಿದ್ದಾರೆ.**

## ಬೆಟ್ಟದಷ್ಟು ಭರವಸೆ

ಪುಟ 2



## ಸಂಕ್ಷಿಪ್ತ ಸುದ್ದಿ

### ದೆಹಲಿ ಪಬ್ಲಿಕ್ ಸ್ಕೂಲ್‌ಗೆ ಬಾಂಬ್ ಬೆದರಿಕೆ

**ನವದೆಹಲಿ:** ರಾಷ್ಟ್ರ ರಾಜಧಾನಿ ದೆಹಲಿಯ ದ್ವಾರಕದಲ್ಲಿರುವ ಪಬ್ಲಿಕ್ ಸ್ಕೂಲ್‌ಗೆ ಬಾಂಬ್ ಬೆದರಿಕೆ ಹಾಕಲಾಗಿದೆ. ಬಾಂಬ್ ಬೆದರಿಕೆ ಹಿನ್ನೆಲೆ ದೆಹಲಿ ಪೊಲೀಸ್ ಬಾಂಬ್ ನಿಷ್ಕ್ರಿಯ ದಳ ಮತ್ತು ಅಗ್ನಿಶಾಮಕ ದಳದ ತಂಡ ಸ್ಥಳಕ್ಕೆ ಆಗಮಿಸಿದ್ದು, ಶಾಲಾ ಆವರಣದಲ್ಲಿ ಪರಿಶೀಲನೆ ನಡೆಸುತ್ತಿದೆ. ಬಾಂಬ್ ನಿಷ್ಕ್ರಿಯ ತಂಡ ಶಾಲೆಯ ಸಂಪೂರ್ಣ ತಪಾಸಣೆ ನಡೆಸುತ್ತಿದೆ. ಈ ಸಂಬಂಧ ದೆಹಲಿ ಪೊಲೀಸರು ಪ್ರತಿಕ್ರಿಯಿಸಿ, ದ್ವಾರಕಾದ ದೆಹಲಿ ಪಬ್ಲಿಕ್ ಸ್ಕೂಲ್‌ನಲ್ಲಿ ಬಾಂಬ್ ಇರುವ ಬಗ್ಗೆ ಮಾಹಿತಿ ಲಭಿಸಿದೆ. ದೆಹಲಿ ಪೊಲೀಸರು, ಬಾಂಬ್ ನಿಷ್ಕ್ರಿಯ ದಳ ಮತ್ತು ಅಗ್ನಿಶಾಮಕ ದಳಗಳು ಸ್ಥಳಕ್ಕೆ ದೌಡಾಯಿಸಿದ್ದು, ಶೋಧಕಾರ್ಯ ನಡೆಯುತ್ತಿದೆ ಎಂದು ತಿಳಿಸಿದ್ದಾರೆ.




### ವಾಣಿಜ್ಯ ಬಳಕೆ ಸಿಲಿಂಡರ್ ದರದಲ್ಲಿ ₹19 ಇಳಿಕೆ

**ನವದೆಹಲಿ:** ವಾಣಿಜ್ಯ ಎಲ್‌ಪಿಜಿ ಗ್ಯಾಸ್ ಸಿಲಿಂಡರ್‌ಗಳ ಬೆಲೆ ಪರಿಷ್ಕರಣೆ ಮಾಡಲಾಗಿದ್ದು, ದರದಲ್ಲಿ 19 ರೂ. ಇಳಿಕೆ ಮಾಡಲಾಗಿದೆ. ಮೆಟ್ರೋ ನಗರಗಳಾದ ನವದೆಹಲಿ, ಮುಂಬೈ, ಕೋಲ್ಕತ್ತಾ ಮತ್ತು ಚೆನ್ನೈ ಸೇರಿದಂತೆ ದೇಶದಾದ್ಯಂತ 19 ಕೆ.ಗ್ರಾಂಗಳಷ್ಟು ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ಗಳ ಬೆಲೆಯನ್ನು ತೈಲ ಮಾರುಕಟ್ಟೆ ಕಂಪನಿಗಳು ಬುಧವಾರ ಕಡಿತಗೊಳಿಸಿವೆ. ಪರಿಷ್ಕೃತ ದರಗಳು ತಕ್ಷಣದಿಂದಲೇ ಜಾರಿಗೆ ಬರಲಿದೆ. ನವದೆಹಲಿಯಲ್ಲಿ ಇಂದಿನಿಂದ ವಾಣಿಜ್ಯ ಸಿಲಿಂಡರ್ ಬೆಲೆ 1,745.50 ರೂ. ಆಗಿದೆ. ಮುಂಬೈನಲ್ಲಿ 1,74917.50 ರೂ. ನಿಂದ 1,698.50 ಕ್ಕೆ ಇಳಿಕೆಯಾಗಿದೆ. ಚೆನ್ನೈನಲ್ಲೂ 19 ರೂ. ಇಳಿಕೆಯಾಗಿದೆ. ಈಗಿನ ಬೆಲೆ 1,930 ರೂ. ಗಳಾಗಿದ್ದು, 1,911 ರೂಪಾಯಿಗೆ ಇಳಿಕೆಯಾಗಿದೆ. ಈ ನಡುವೆ ಕೋಲ್ಕತ್ತಾದಲ್ಲಿ ವಾಣಿಜ್ಯ ಸಿಲಿಂಡರ್ ಬೆಲೆ 1,860 ರೂ.ನಿಂದ ಕುಸಿತ ಕಂಡಿದೆ.



# ತಕ್ಷಣ ವಿಚಾರಣೆಗೆ ಬನ್ನಿ

## ಪ್ರಜ್ವಲ್, ಹೆಚ್.ಡಿ.ರೇವಣ್ಣಗೆ ಎಸ್‌ಐಟಿ ನೋಟಿಸ್








**ಬೆಂಗಳೂರು:** ದೇಶಾದ್ಯಂತ ಹಲ್‌ಚಲ್ ಎಬ್ಬಿಸಿರುವ ಸಂಸದ ಪ್ರಜ್ವಲ್ ರೇವಣ್ಣ ಪೆನ್ ಡ್ರೈವ್ ಪ್ರಕರಣವು ಇದೀಗ ಎಸ್ ಐಟಿ ಅಂಗಳದಲ್ಲಿದೆ. ಸದ್ಯ ಪ್ರಕರಣದ ತನಿಖೆಗೆ ಇಳಿದಿರುವ ವಿಶೇಷ ತನಿಖಾ ತಂಡದ ಅಧಿಕಾರಿಗಳು ಪ್ರಜ್ವಲ್ ರೇವಣ್ಣ, ರೇವಣ್ಣಗೆ ಶಾಕ್ ಕೊಟ್ಟಿದ್ದಾರೆ. ಅಪ್ಪ- ಮಗನಿಗೆ ನೋಟಿಸ್ ಕೊಟ್ಟಿರುವ ಅಧಿಕಾರಿಗಳು ಕಾನೂನು ಕ್ರಮದ ಎಚ್ಚರಿಕೆಯನ್ನು ನೀಡಿದ್ದಾರೆ.

ನೋಟಿಸ್ ಸಿಕ್ಕ ತಕ್ಷಣ ಹಾಜರಾಗಿ ವಿಚಾರಣೆಗೆ ಸಹಕರಿಸಬೇಕು. ಇಲ್ಲದೇ ಹೋದರೆ ಕಾನೂನು ಕ್ರಮವನ್ನು ಎದುರಿಸಬೇಕಾಗುತ್ತದೆ ಎಂದು ನೋಟಿಸ್‌ನಲ್ಲಿಯೇ ಕಾನೂನು ಕ್ರಮದ ಎಚ್ಚರಿಕೆ ಉಲ್ಲೇಖ ಮಾಡಲಾಗಿದೆ. ಈ ಹಿನ್ನೆಲೆಯಲ್ಲಿ ರೇವಣ್ಣ ಹಾಗೂ ಪ್ರಜ್ವಲ್ ಇಂದು ವಿಚಾರಣೆಗೆ ಹಾಜರಾಗ್ತಾರಾ ಎಂಬ ಕುತೂಹಲ ಹುಟ್ಟಿದೆ. ಯಾಕೆಂದರೆ ಪ್ರಜ್ವಲ್ ಈಗಾಗಲೇ ಜರ್ಮನಿಯಲ್ಲಿದ್ದಾರೆ. ಇತ್ತ ರೇವಣ್ಣ ಕೂಡ ವಿಚಾರಣೆಗೆ ಗೈರಾಗುವ ಸಾಧ್ಯತೆಗಳಿವೆ ಎಂಬುದಾಗಿ ಮೂಲಗಳಿಂದ ತಿಳಿದುಬಂದಿದೆ.

ಈ ನಡುವೆ ಪ್ರಕರಣಕ್ಕೆ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಎಂಟ್ರಿ ಕೊಟ್ಟಿದೆ. ಪ್ರಕರಣ ಸಂಬಂಧ ವಿಶೇಷ ತನಿಖಾ ತಂಡ ಮುಖ್ಯಸ್ಥ ಬಿಜಯ್ ಕುಮಾರ್ ಸಿಂಗ್‌ಗೆ ಮಕ್ಕಳ ರಕ್ಷಣಾ ಆಯೋಗದ ಅಧ್ಯಕ್ಷ ಕೆ.ನಾಗಣ್ಣಗೌಡ ಪತ್ರ ಬರೆದಿದ್ದಾರೆ.

ಸಂತ್ರಸ್ತೆ ಒಬ್ಬರು ತನ್ನ ಮಗಳ ಜೊತೆ ಕೂಡ ಅಸಭ್ಯವಾಗಿ ವರ್ತಿಸಿರುವ ಬಗ್ಗೆ ಮಾಧ್ಯಮದಲ್ಲಿ ಹೇಳಿಕೆ ನೀಡಿದ್ದಾರೆ. ಪ್ರಕರಣದಲ್ಲಿ ಆರೋಪಿ ಅಪ್ರಾಪ್ತ ಹೆಣ್ಣು ಮಕ್ಕಳನ್ನ ಬಳಸಿಕೊಂಡಿರುವ ಬಗ್ಗೆ ಮೇಲ್ನೋಟಕ್ಕೆ ಅನುಮಾನ ಇದೆ. ಹಾಗಾಗಿ ಪ್ರಕರಣದಲ್ಲಿ ಆರೋಪಿಯಿಂದ ಅಪ್ರಾಪ್ತ ಹೆಣ್ಣು ಮಕ್ಕಳ ಬಳಕೆ ಪತ್ತೆಯಾದಲ್ಲಿ ಈ ಬಗ್ಗೆ ವರದಿ ನೀಡುವಂತೆ ಎಸ್‌ಐಟಿಗೆ ಪತ್ರ ಬರೆದಿದ್ದಾರೆ.

### ಈಶ್ವರಪ್ಪ ಪುತ್ರ ಕಾಂತೇಶ್ ವಿರುದ್ಧ ಅಶ್ಲೀಲ ಫೋಟೊ, ವೀಡಿಯೊ ಪ್ರಸಾರ ಮಾಡದಂತೆ

## ನ್ಯಾಯಾಲಯ ಆದೇಶ

**ಬೆಂಗಳೂರು:** ಶಿವಮೊಗ್ಗ ಲೋಕಸಭಾ ಕ್ಷೇತ್ರದಿಂದ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ಉಚ್ಚಾಟಿತ ಬಿಜೆಪಿ ನಾಯಕ ಕೆ ಎಸ್ ಈಶ್ವರಪ್ಪನವರ ಪುತ್ರ, ಕೆ ಇ ಕಾಂತೇಶ್ ಅವರ ವಿರುದ್ಧ ಯಾವುದೇ ಅಶ್ಲೀಲ ಫೋಟೊ, ವಿಡಿಯೋ, ಸ್ಕ್ರೀನ್ ಶಾಟ್ ಅಥವಾ ಅಶ್ಲೀಲ ಆಡಿಯೊಗಳನ್ನು ಪ್ರಸಾರ ಮಾಡದಂತೆ ಬೆಂಗಳೂರಿನ ನ್ಯಾಯಾಲಯವು ಮಾಧ್ಯಮಗಳ ವಿರುದ್ಧ ಏಕಪಕ್ಷೀಯ ಮಧ್ಯಂತರ ಪ್ರತಿಬಂಧಕಾದೇಶ ಮಾಡಿದೆ. ಕೆ ಇ ಕಾಂತೇಶ್ ಸಲ್ಲಿಸಿರುವ ಮೂಲ ದಾವೆಯ ವಿಚಾರಣೆ ನಡೆಸಿದ 6ನೇ ಹೆಚ್ಚುವರಿ ಸಿಟಿ ಸಿವಿಲ್ ಮತ್ತು ಸತ್ರ ನ್ಯಾಯಾಧೀಶರಾದ ಡಿ ಪಿ ಕುಮಾರಸ್ವಾಮಿ ಈ ಆದೇಶ ಮಾಡಿದ್ದಾರೆ. 1ರಿಂದ 50ನೇ ಪ್ರತಿವಾದಿಗಳು, ಅವರ ಪ್ರತಿನಿಧಿಗಳು, ಸೇವಕರು, ಏಜೆಂಟರು, ಆಡಳಿತಗಾರರು, ಅವರು ನಿಯೋಜಿಸಿದವರು ಇತ್ಯಾದಿ ಯಾರೇ ಆದರೂ ದೂರಿನಲ್ಲಿ ಉಲ್ಲೇಖಿಸಿರುವಂತೆ ಯಾವುದೇ ತೆರನಾದ ಅಶ್ಲೀಲ ವಿಡಿಯೊ ಪ್ರಸಾರ/ಮದ್ರಣ/ಹಂಚಿಕೆ ಮಾಡದಂತೆ ಪ್ರತಿವಾದಿಗಳ ವಿರುದ್ಧ ಮಧ್ಯಂತರ ಏಕಪಕ್ಷೀಯ ತಾತ್ಕಾಲಿಕ ಪ್ರತಿಬಂಧಕಾದೇಶ ಮಾಡಲಾಗಿದೆ''.



## ಪ್ರಜ್ವಲ್, ರೇವಣ್ಣ ಏಕೆ ಬಂಧಿಸಿಲ್ಲ ಗೊತ್ತಾ?

**ಬೆಂಗಳೂರು:** ಅಶ್ಲೀಲ ವಿಡಿಯೋ ಪ್ರಕರಣದಲ್ಲಿ ಹಾಸನ ಸಂಸದ ಪ್ರಜ್ವಲ್ ರೇವಣ್ಣ ಹಾಗೂ ಶಾಸಕ ಹೆಚ್.ಡಿ.ರೇವಣ್ಣ ಅವರನ್ನು ಇನ್ನೂ ಯಾಕೆ ಬಂಧಿಸಿಲ್ಲ ಎಂಬ ಪ್ರಶ್ನೆಗೆ ಗೃಹ ಸಚಿವ ಜಿ ಪರಮೇಶ್ವರ ಉತ್ತರ ನೀಡಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿ ಬೆಂಗಳೂರಿನಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಯಾರನ್ನೇ ಆದರೂ ಏಕಾಏಕಿ ಬಂಧಿಸುವುದಿಲ್ಲ. ಅದಕ್ಕೆ ಪುರಾವೆಗಳು, ದೂರಿನಲ್ಲಿ ಏನು ಹೇಳಿರುತ್ತಾರೆ ಎಂಬುದೆಲ್ಲ ಮುಖ್ಯವಾಗುತ್ತವೆ. ಪ್ರಕರಣ ಯಾವ ಸೆಕ್ಷನ್ ಅಡಿಯಲ್ಲಿ ಬರುತ್ತದೆ? ಅದರಲ್ಲಿ ಬಂಧಿಸಲು ಅವಕಾಶ ಇದೆಯೇ? ಜಾಮೀನು ಪಡೆಯುವಂಥ ಪ್ರಕರಣವೇ? ಈ ಅಂಶಗಳನ್ನೆಲ್ಲ ಪರಿಗಣಿಸಬೇಕಾಗುತ್ತದೆ ಎಂದು ಹೇಳಿದರು. ನೋಟೀಸ್ ಕೊಟ್ಟಿದ್ದಾರೆ. ಅದರಂತೆ, ಆರೋಪಿಗಳು 24 ಗಂಟೆಯ ಒಳಗೆ ಬಂದು ವಿಚಾರಣೆಗೆ ಹಾಜರಾಗಬೇಕು. ವಿಚಾರಣೆಗೆ ಹಾಜರಾಗದೇ ಹೋದರೆ ಎಸ್‌ಐಟಿ ತಂಡ ಮುಂದಿನ ಪ್ರಕ್ರಿಯೆ ಮಾಡಲಿದೆ. ನಾವು ಎಸ್‌ಐಟಿ ರಚನೆ ಮಾಡಿ ತನಿಖೆಗೆ ವಹಿಸಿದ್ದೇವೆ ಎಂದು ಅವರು ಹೇಳಿದರು.

ರಾಜ್ಯ ಸರ್ಕಾರ ಏನೂ ಕ್ರಮ ಕೈಗೊಂಡಿಲ್ಲ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಆರೋಪಿಸಿದ್ದಾರೆ. ಇದರಲ್ಲಿ ಯಾರನ್ನೂ ರಕ್ಷಣೆ ಮಾಡುವಂತಹದ್ದು ಏನೂ ಇಲ್ಲ. ಕಾನೂನಿನ ಚೌಕಟ್ಟಿನಲ್ಲಿ ಏನು ಮಾಡಬೇಕೋ ಅದನ್ನು ಮಾಡುತ್ತೇವೆ. ಇದರಲ್ಲಿ ಬಹಳ ಜನರ ಜೀವನದ ಪ್ರಶ್ನೆ ಇದೆ. ಇಷ್ಟ ಬಂದ ಹಾಗೆ ತನಿಖೆ ಮಾಡಲು ಆಗುವುದಿಲ್ಲ. ಹಾಗಾಗಿಯೇ ಎಸ್‌ಐಟಿ ರಚನೆ ಮಾಡಿದ್ದೇವೆ ಎಂದು ಪರಮೇಶ್ವರ ಹೇಳಿದರು.



ಎಸ್‌ಐಟಿ ರಚನೆ ಬಳಿಕವೂ ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಲೀಕ್ ಆದ ಬಗ್ಗೆ ಕೇಳಲಾದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಅದೆಲ್ಲವನ್ನು ಎಸ್ ಐಟಿ ಗಮನಿಸುತ್ತದೆ. ಅದಕ್ಕೆ ನಾವೇನೂ ಹೇಳಲು ಬರುವುದಿಲ್ಲ ಎಂದರು. ಹೆಚ್.ಡಿ.ಕುಮಾರಸ್ವಾಮಿ ಮತ್ತು ಡಿಕೆ ಶಿವಕುಮಾರ್ ನಡುವಣ ಆರೋಪ ಪ್ರತ್ಯಾರೋಪಗಳನ್ನು ಮಾಧ್ಯಮಗಳಲ್ಲಿ ಗಮನಿಸಿದ್ದೇನೆ. ಬಹಳ ಜನ ಅದರ ಬಗ್ಗೆ ಹೇಳಿಕೆ ಕೊಡ್ತಿದ್ದಾರೆ. ಅದಕ್ಕೆಲ್ಲ ನಾನು ಉತ್ತರ ಕೊಡಲು ಸಾಧ್ಯವಿಲ್ಲ. ತನಿಖಾ ವರದಿ ಬಂದ ಮೇಲೆ ಏನು ಸತ್ಯಾಸತ್ಯತೆ ಇದೆ ಎಂಬುದರ ಮೇಲೆ ಕ್ರಮ ಆಗುತ್ತದೆ. ತನಿಖಾ ವರದಿ ಬರುವ ವರೆಗೂ ಯಾರೂ ಹೇಳಿಕೆ ಕೊಡಬಾರದು ಎಂದರು.

ವಿದೇಶದಲ್ಲಿರೋ ಪ್ರಜ್ವಲ್ ಕರೆ ತರುವ ವಿಚಾರವಾಗಿ ಮಾತನಾಡಿ, ಎಸ್‌ಐಟಿ ಈಗಾಗಲೇ ನೋಟೀಸ್ ಜಾರಿ ಮಾಡಿದೆ. ಪ್ರಜ್ವಲ್ ವಿದೇಶಕ್ಕೆ ಹೋಗಿರುವ ಬಗ್ಗೆ ಎಲ್ಲ ಮಾಹಿತಿ ಇದೆ. ವಾಪಸ್ ಕರೆದುಕೊಂಡು ಬರಲು ಏನು ಕ್ರಮ ಕೈಗೊಳ್ಳಬೇಕೋ ಅದನ್ನು ಎಸಐಟಿ ಮಾಡಲಿದೆ. ಇದಕ್ಕೆ ಕೇಂದ್ರ ಸರ್ಕಾರದ ಸಹಕಾರವೂ ಬೇಕಾಗಬಹುದು. ಅಥವಾ ಎಸ್‌ಐಟಿ ತಂಡದವರೇ ಕರೆದುಕೊಂಡು ಬರಬಹುದು ಎಂದರು. ಪ್ರಕರಣದಲ್ಲಿ ಬಿಜೆಪಿ, ಜೆಡಿಎಸ್ ಅಂತರ ಕಾಯ್ದುಕೊಳ್ಳುತ್ತಿರುವ ವಿಚಾರವಾಗಿ ಪ್ರತಿಕ್ರಿಯಿಸಿದ ಪರಮೇಶ್ವರ, ಅದು ಅವರ ಪಕ್ಷದ ಆಂತರಿಕ ವಿಚಾರ. ಯಾವ ನಿಲುವನ್ನಾದ್ರೂ ತೆಗೆದುಕೊಳ್ಳಲಿ ಇದು ಅವರಿಗೆ ಬಿಟ್ಟಿದ್ದು. ಅಂತರ ಕಾಯ್ದುಕೊಳ್ಳುತ್ತಾರಾ, ತಬ್ಬಿಕೊಳ್ತಾರಾ ಅವರಿಗೆ ಬಿಟ್ಟಿದ್ದು ಎಂದು ವ್ಯಂಗ್ಯವಾಡಿದರು. ಜತೆಗೆ, ಈ ಪ್ರಕರಣದಲ್ಲಿ ನಾವು ಹಸ್ತಕ್ಷೇಪ ಮಾಡಲ್ಲ ಎಂದೂ ಹೇಳಿದರು.

## ಮಹಿಳೆಗೆ ಕಿರುಕುಳ

**ಬೆಂಗಳೂರು:** ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಅಪರಾಧ ಚಟುವಟಿಕೆಗಳು ಕಳೆದ ಕೆಲವು ದಿನಗಳಿಂದ ಹೆಚ್ಚಾಗುತ್ತಿದ್ದು, ಪತಿಯ ಜೊತೆ ನಡೆದುಕೊಂಡು ಹೋಗುತ್ತಿದ್ದ ಮಹಿಳೆಗೆ ಪುಂಡರು ಲೈಂಗಿಕ ಕಿರುಕುಳ ನೀಡಿದ ಘಟನೆ ಕೊಡಿಗೇಹಳ್ಳಿಯ ವಿರೂಪಾಕ್ಷಪುರದಲ್ಲಿ ಮಂಗಳವಾರ ರಾತ್ರಿ ನಡೆದಿದೆ.

ರಾತ್ರಿ 10.30 ರ ವೇಳೆಗೆ ನಡೆದುಕೊಂಡು ಹೋಗುತ್ತಿದ್ದ ಬಿಹಾರ ಮೂಲದ ದಂಪತಿಗೆ ಪುಂಡರು ಕಿರುಕುಳ ನೀಡಿದ್ದಾರೆ. ಲೈಂಗಿಕ ಕ್ರಿಯೆಗೆ ಸಹಕರಿಸುವಂತೆ ಕಿರುಕುಳ ನೀಡಿದ್ದಾರೆ. ಒಪ್ಪದಿದ್ದಾಗ ಕಿಡ್ನ್ಯಾಪ್ ಮಾಡುವುದಾಗಿ ಮಹಿಳೆಗೆ ಬೆದರಿಕೆ ಹಾಕಿದ್ದಾರೆ. ನಂತರ ದಂಪತಿ ಅಲ್ಲಿಂದ ಓಡಿಹೋಗಲು ಮುಂದಾಗಿದ್ದಾರೆ. ಅಷ್ಟರಲ್ಲಿ ಅವರನ್ನು ಅಟ್ಟಾಡಿಸಿಕೊಂಡು ಹೋದ ಪುಂಡರು, ಹೆಂಡತಿಯನ್ನು ಕಳುಹಿಸಿಕೊಡುವಂತೆ ಗಂಡನಿಗೆ ಬೆದರಿಕೆ ಹಾಕಿದ್ದಾರೆ. ತಕ್ಷಣವೇ ದಂಪತಿ ಸಹಾಯ ಕೋರಿ ಪೊಲೀಸರಿಗೆ ಫೋನ್ ಮಾಡಿದ್ದಾರೆ. ಇತ್ತೀಚೆಗಷ್ಟೇ ಬೆಂಗಳೂರಿನ ಹೈಗ್ರೌಂಡ್ಸ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಯುವತಿಯನ್ನು ಅಪಹರಿಸಿ ಸಾಮೂಹಿಕ ಅತ್ಯಾಚಾರ ಎಸಗಲಾಗಿತ್ತು. ನಂತರ ಘಟನೆ ಸಂಬಂಧ ಐವರು ಆರೋಪಿಗಳನ್ನು ಹೈಗ್ರೌಂಡ್ಸ್ ಠಾಣಾ ಪೊಲೀಸರು ಬಂಧಿಸಿದ್ದರು.



## ರಾಯಚೂರಿನಲ್ಲಿ 15 ವರ್ಷದಲ್ಲೇ ಗರಿಷ್ಠ ತಾಪಮಾನ

**ರಾಯಚೂರು:** ಬಿಸಿಲನಾಡು ರಾಯಚೂರಿನಲ್ಲಿ ಕಳೆದ 15 ವರ್ಷಗಳಲ್ಲೇ ಈ ಬಾರಿ ದಾಖಲೆಯ ಅತೀ ಹೆಚ್ಚು ತಾಪಮಾನ ದಾಖಲಾಗಿದೆ.

ರಾಯಚೂರು ತಾಲೂಕಿನಲ್ಲಿ 45 ಡಿಗ್ರಿ ಸೆಲ್ಸಿಯಸ್ ಗರಿಷ್ಠ ತಾಪಮಾನ ದಾಖಲಾಗಿದ್ದು, ಮುಂದಿನ ಮೂರು ದಿನಗಳಲ್ಲಿ 43 ರಿಂದ 45 ಡಿಗ್ರಿ ಸೆಲ್ಸಿಯಸ್ ತಾಪಮಾನ ಮುಂದುವರಿಯುವ ಮುನ್ಸೂಚನೆಯಿದೆ. ತಾಪಮಾನದಲ್ಲಿ ಕಲಬುರಗಿಯನ್ನೂ ರಾಯಚೂರು ಹಿಂದಿಕ್ಕಿದ್ದು, ರಾಜ್ಯದಲ್ಲೇ ಅತೀ ಹೆಚ್ಚು ತಾಪಮಾನ ದಾಖಲಾಗುತ್ತಿದೆ.

ಇನ್ನು ಉತ್ತರ ಕರ್ನಾಟಕದ ಭಾಗದ ಬಹುತೇಕ ಎಲ್ಲ ಜಿಲ್ಲೆ ಸೇರಿದಂತೆ ರಾಜ್ಯದ 17 ಜಿಲ್ಲೆಗಳಲ್ಲಿ ಮುಂದಿನ 5 ದಿನ ಬಿಸಿ ಗಾಳಿ ಬೀಸಲಿದೆ ಎಂಬ ಮುನಸೂಚನೆಯನ್ನು ಕೂಡ ಇಲಾಖೆ ಕೊಟ್ಟಿದೆ. ಒಟ್ಟಿನಲ್ಲಿ ಬಿಸಿಗಾಳಿ ಹೆಚ್ಚಳದಿಂದ ತಾಪಮಾನದಲ್ಲಿ ಹೆಚ್ಚಳವಾಗಿದೆ. ಹೀಗಾಗಿ ಬೆಳಗ್ಗೆ 11:30 ರಿಂದ ಮಧ್ಯಾಹ್ನ 3 ರ ವರೆಗೆ ಅನಗತ್ಯವಾಗಿ ಮನೆಯಿಂದ ಹೊರಬರದಂತೆ ಹವಾಮಾನ ಇಲಾಖೆ ಹಾಗೂ ರಾಯಚೂರು ಕೃಷಿ ವಿವಿ ಅಧಿಕಾರಿಗಳು ಮುನ್ನೆಚ್ಚರಿಕೆ ನೀಡಿದ್ದಾರೆ.





### ತಾನು ಪ್ರೀತಿಸುತ್ತಿದ್ದ ಯುವತಿಗೆ ಮೆಸೇಜ್ ಮಾಡಿದ್ದಕ್ಕೆ

## ಸ್ನೇಹಿತನ ಮೇಲೆ ಮಾರಣಾಂತಿಕ ಹಲ್ಲೆ!



**ಬೆಂಗಳೂರು:** ಪ್ರೀತಿ ಮಾಡುತ್ತಿದ್ದ ಯುವತಿಗೆ ಮೆಸೇಜ್ ಮಾಡುತ್ತಿದ್ದ ಎಂಬ ಕಾರಣಕ್ಕೆ ಯುವಕನ ಮೇಲೆ ಮಾರಕಾಸ್ತ್ರಗಳಿಂದ ದಾಳಿ ಮಾಡಿ ತಲೆಮರೆಸಿಕೊಂಡಿದ್ದ ಪುಡಿ ರೌಡಿಗಳನ್ನ ಪೊಲೀಸರು ಬಂಧಿಸಿದ್ದಾರೆ. ಶಶಾಂಕ್ ಹಾಗೂ ನಂದನ್ ಬಂಧಿತ ಇಬ್ಬರು ಆರೋಪಿಗಳು.

ಪುಟ 2

### ರಾಜಧಾನಿಯಲ್ಲಿ ಬಿಸಿಲ ಬೇಗೆ

## ಜ್ಯೂಸ್, ಎಳನೀರು ದುಬಾರಿ

**ಬೆಂಗಳೂರು:** ಬೆಂಗಳೂರಿನಲ್ಲಿ ದಾಖಲೆಯ ತಾಪಮಾನ ಹೆಚ್ಚಳದೊಂದಿಗೆ ನಗರವಾಸಿಗಳು ಹೈರಾಣಾಗಿದ್ದಾರೆ. ನಗರದಲ್ಲಿ ಬಿಸಿಲಿನ ಬೇಗೆ ಹೆಚ್ಚಾಗುತ್ತಿದ್ದು, ದಗೆ ತಡೆಯಲಾರದೇ ಜನರು ತಂಪು ಪಾನೀಯಗಳತ್ತ ಮುಖ ಮಾಡುತ್ತಿದ್ದಾರೆ. ಮಧ್ಯಾಹ್ನ, ಸಂಜೆಯಾದರೆ ಸಾಕು ಜ್ಯೂಸ್ ಹಾಗೂ ಎಳನೀರಿನ ಅಂಗಡಿಗಳ ಮುಂದೆ ಗ್ರಾಹಕರು ಸರದಿ ನಿಲ್ಲುತ್ತಿದ್ದಾರೆ. ಬೇಡಿಕೆ ಹೆಚ್ಚಾಗಿರುವಂತೆಯೇ ಹಣ್ಣಿನ ಜ್ಯೂಸ್, ಎಳನೀರಿನ ಬೆಲೆ ಗಗನಕ್ಕೆ ಏರಿಕೆಯಾಗಿದೆ. ಕಳೆದ ಎರಡು ಮೂರು ತಿಂಗಳುಗಳಿಗೆ ಹೋಲಿಕೆ ಮಾಡಿದರೆ ಈಗ ಎಳನೀರು ಹಾಗೂ ಜ್ಯೂಸ್ ಬೆಲೆ ಜಾಸ್ತಿಯಾಗಿದೆ.

ಮೊದಲೇ ಹಣ್ಣು ತರಕಾರಿಗಳ ಬೆಲೆ ಗಗನಕ್ಕೇರಿದೆ. ಬಿಸಿಲ ಬೇಗೆಯ ಕಾರಣ ದಿನದಿಂದ ದಿನಕ್ಕೆ ಗ್ರಾಹಕರು ಎಳನೀರು ಹಾಗೂ ಜ್ಯೂಸ್‌ಗೆ ಹೆಚ್ಚು ಬೇಡಿಕೆ ಇಡುತ್ತಿರುವುದರಿಂದ ಜ್ಯೂಸ್ ಬೆಲೆ ಜಾಸ್ತಿಯಾಗಿದೆ. ಕಳೆದ ತಿಂಗಳುಗಳಿಗೆ ಹೋಲಿಕೆ ಮಾಡಿದರೆ ಈಗ ಜ್ಯೂಸ್‌ಗಳ ಬೆಲೆಯಲ್ಲಿ 10 ರಿಂದ 20 ರೂ ರೂ ಏರಿಕೆಯಾಗಿದೆ. ಪ್ರತಿದಿನ ಒಂದೊಂದು ಅಂಗಡಿಗಳಲ್ಲಿಯೂ 500 ರಿಂದ 600 ಗ್ಲಾಸ್ ಜ್ಯೂಸ್ ಮಾರಾಟ ಆಗುತ್ತಿವೆ ಎಂದು ಮಾರುಕಟ್ಟೆ ಮೂಲಗಳು ತಿಳಿಸಿವೆ.



### ಎಷ್ಟಿದೆ ಹಣ್ಣಿನ ಜ್ಯೂಸ್ ಬೆಲೆ?

ಪುಟ 2

## ಪ್ರಜ್ವಲ್ ರೇವಣ್ಣ ಮಾಜಿ ಡ್ರೈವರ್ ಕಾರ್ತಿಕ್ ಹೇಳಿಕೆಯ ವೀಡಿಯೋ ಬಿಡುಗಡೆ

# ಕಾಂಗ್ರೆಸ್ ಮುಖಂಡರಿಗೆ ವೀಡಿಯೋ ಕೊಟ್ಟಿಲ್ಲ



**ಬೆಂಗಳೂರು:** ರಾಜ್ಯದಲ್ಲಿ ಪೆನ್ ಡ್ರೈವ್ ಪಾಲಿಟಿಕ್ಸ್ ಜೋರಾಗುತ್ತಿದೆ. ಪ್ರಜ್ವಲ್ ರೇವಣ್ಣ ಅವರದ್ದು ಎನ್ನಲಾದ ಅಶ್ಲೀಲ ವೀಡಿಯೋ ಪ್ರಕರಣ ಸಂಬಂಧ ಇಂದು ಎಸ್ಐಟಿ ಅಧಿಕಾರಿಗಳು ತನಿಖೆಗೆ ಇಳಿದಿದ್ದಾರೆ. ಈ ನಡುವೆ ಪ್ರಜ್ವಲ್ ರೇವಣ್ಣ ಮಾಜಿ ಡ್ರೈವರ್ ಕಾರ್ತಿಕ್ ಹೇಳಿಕೆಯ ವೀಡಿಯೋವೊಂದು ಬಿಡುಗಡೆ ಮಾಡಿದ್ದಾರೆ.

ನಾನು ಯಾರಿಗೂ ಫೋಟೋ ಹಾಗೂ ವೀಡಿಯೋಗಳನ್ನು ನೀಡಿಲ್ಲ. ಬಿಜೆಪಿ ಮುಖಂಡ ಹಾಗೂ ವಕೀಲರಾಗಿರುವ ದೇವರಾಜೇ ಗೌಡ ಅವರು ನ್ಯಾಯ ಕೊಡಿಸುತ್ತಾರೆ ಎಂದು ನಂಬಿ ಅವರಲ್ಲಿ ಎಲ್ಲಾ ವಿಚಾರಗಳನ್ನು ಶೇರ್ ಮಾಡಿಕೊಂಡಿದ್ದೇನೆ. ಆದರೆ ಈಗ ಅವರು ನನ್ನ ಮೇಲೆಯೇ ಸುಳ್ಳು ಆಪಾದನೆಗಳನ್ನು ಮಾಡುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

**ಕಾರ್ತಿಕ್ ಹೇಳಿದ್ದೇನು..?:** ಪ್ರಜ್ವಲ್ ರೇವಣ್ಣ ಅವರ ಕುಟುಂಬಕ್ಕೆ 15 ವರ್ಷಗಳಿಂದ ಚಾಲಕನಾಗಿ ಕೆಲಸ ಮಾಡುತ್ತಿದ್ದೆ. ವರ್ಷದ ಹಿಂದೆ ಅಲ್ಲಿ ಕೆಲಸ ಬಿಟ್ಟಿದ್ದೇನೆ. ನನ್ನ ಜಮೀನು ಬರೆಸಿಕೊಂಡು, ಪತ್ನಿಗೆ ಹೊಡೆದಿದ್ದಾರೆ.ನನಗೂ ನನ್ನ ಪತ್ನಿಗೂ ಮಾನಸಿಕ ಹಿಂಸೆ ಕೊಟ್ಟಿದ್ದಾರೆ.ಹೀಗಾಗಿ ನಾನು ಅವರ ಮನೆಯಿಂದ ಹೊರಗೆ ಬಂದೆ.ಹೀಗೆ ಹೊರಗಡೆ ಬಂದ ಬಳಿಕ ಕೇಸ್ ಹಾಕಬೇಕು ಎಂದು ಹೋರಾಟ ಮಾಡುತ್ತಿದ್ದೆ.ಇದೇ ಸಂದರ್ಭದಲ್ಲಿ ಬಿಜೆಪಿ ಮುಖಂಡ ದೇವರಾಜೇ ಗೌಡರ ಪರಿಚಯವಾಗುತ್ತೆ.ಅವರು ಕೂಡ ಪ್ರಜ್ವಲ್ ಕುಟುಂಬದ ವಿರುದ್ಧ ಹೋರಾಟ ಮಾಡುತ್ತಿದ್ದರು. ಹೀಗಾಗಿ ನನಗೆ ಬೇರೆ ಯಾರಿಂದಲೂ ನ್ಯಾಯ ಸಿಗಲ್ಲ ಎಂದು ಗೊತ್ತಾಗಿ ದೇವರಾಜೇಗೌಡರ ಬಳಿ ಹೋದೆ ಎಂದು ಹೇಳಿದರು.

ನನ್ನ ಕಷ್ಟ ಎಲ್ಲವನ್ನೂ ಅವರ ಮುಂದೆ ಹೇಳಿಕೊಂಡೆ.ಆಗ ಅವರು ನ್ಯಾಯ ದೊರಕಿಸಿ ಕೊಡುವ ಭರವಸೆ ನೀಡಿದರು.ಬಳಿಕ ನಾನು ಬೇರೆ ಲಾಯರ್ ಮುಖಾಂತರ ಕೇಸ್ ಹಾಕ್ತೀನಿ.ಆಗ ಇವರು ಮತ್ತೆ ನನ್ನ ಕರೆದು ನಿನಗೆ ಕೋರ್ಟ್ ನಲ್ಲಿ ಹೋರಾಟ ಮಾಡಿದರೆ ನ್ಯಾಯ ಸಿಗಲ್ಲ. ಜನರಿಗೆ ತಿಳಿಸಬೇಕು ಎಂದು ಹೇಳಿ ಮೀಡಿಯಾ ಮುಂದೆ ಹೇಳಿಕೆಗಳನ್ನು ಕೊಡಿಸಿದ್ರು.ಅಲ್ಲದೇ ನನ್ನ ಜೊತೆ ನಿಂತುಕೊಂಡು ಅವರು ಕೂಡ ಒಂದಷ್ಟು ಹೇಳಿಕೆಗಳನ್ನು ಕೊಡುತ್ತಾರೆ.ಇ?ಟೆಲ್ಲಾ ಬೆಳವಣಿಗೆಗಳ ಬಳಿಕ ಪ್ರಜ್ವಲ್ ರೇವಣ್ಣ ಅವರೇ ನನ್ನ ಮೇಲೆ ಸ್ಟೇ ಆರ್ಡರ್ ತಂದರು.ಈ ಮೂಲಕ ಯಾವುದೇ ರೀತಿಯ ಅಶ್ಲೀಲವಾಗಿರು ಫೋಟೋ ಹಾಗೂ ವೀಡಿಯೋಗಳನ್ನು ರಿಲೀಸ್ ಮಾಡದಂತೆ ತಡೆಯುತ್ತಾರೆ ಎಂದರು. ಇತ್ತ ಸ್ಟೇ ಕಾಪಿ ತೆಗೆದುಕೊಂಡು ದೇವರಾಜೇಗೌಡರಿಗೆ ಕೊಟ್ಟಿದ್ದೇನೆ. ಆಗ ಅವರು ನನಗೆ ಸ್ಟೇ ಕಾಪಿಯಲ್ಲಿರುವ ವಿ?ಯಗಳ ಬಗ್ಗೆ ತಿಳಿಸಿದ್ದಾರೆ.ನಾನು ಮುಂದೆ ಏನು ಮಾಡ್ಲಿ ಅಂತ ಕೇಳಿದೆ. ಆಗ ದೇವರಾಜೇ ಗೌಡರು ನಿನ್ನಲ್ಲಿರುವ ಫೋಟೋ ಹಾಗೂ ವೀಡಿಯೋಗಳು ಏನಿವೆ ಅವುಗಳನ್ನು ನನಗೆ ಕೊಡು ಅದನ್ನು ನಾನು ಜಡ್ಜ್ ಮುಂದೆ ಸಬ್‌ಮಿಟ್ ಮಾಡ್ತೀನಿ. ಬಳಿಕ ನಾನು ನೋಡಿಕೊಳ್ಳುತ್ತೇನೆ. ನೀನಗೇನು ತೊಂದರೆ ಆಗಲ್ಲ ಅಂದ್ರು.ದೇವೇರಾಜೇಗೌಡರನ್ನು ನಂಬಿ ನನ್ನಲ್ಲಿದ್ದ ಒಂದು ಕಾಪಿಯನ್ನು ಕೊಟ್ಟು ಕೇಸ್ ಮೂವ್ ಮಾಡುವಂತೆ ಹೇಳಿ ಬಂದಿದ್ದೇನೆ. ಅವರು ಅದನ್ನು ತಮ್ಮ ಸ್ವಾರ್ಥಕ್ಕೆ ಬಳಕೆ ಮಾಡಿಕೊಂಡರೋ ಗೊತ್ತಿಲ್ಲ. ಆದರೆ ಅವರು ಕೇಸ್ ಮೂವ್ ಮಾಡಿರಲಿಲ್ಲ. ಹೀಗಾಗಿ ತಿಂಗಳ ಬಳಿಕ ಮತ್ತೆ ಹೋಗಿ ಕೇಳಿದ್ದೀನಿ. ಆಗ ಅವರು ಸ್ವಲ್ಪ ದಿನ ಇರು ಅಂತ ಹೇಳಿದರು.ಹೀಗಾಗಿ ನಾನು ಸುಮ್ಮನಿದ್ದೆ ಎಂದು ಕಾರ್ತಿಕ್ ತಿಳಿಸಿದರು.

ಇದೀಗ ಸುಮಾರು 6 ತಿಂಗಳ ಬಳಿಕ ಅವರೇ ಸುದ್ದಿಗೋಷ್ಠಿಯನ್ನು ಕರೆದು, ಅಲ್ಲಿ ರೇವಣ್ಣ ಫ್ಯಾಮಿಲಿಗೆ ಎಲ್ಇಡಿ ಟಿವಿಯಲ್ಲಿ ನಿಮ್ಮದೆಲ್ಲ ಎಕ್ಸ್ ಪೋಸ್ ಮಾಡುವುದಾಗಿ ಹೇಳುತ್ತಾರೆ.ಕೂಡಲೇ ನಾನು ದೇವರಾಜೇಗೌರ ಬಳಿ, ಯಾಕೆ ಅಣ್ಣ ನೀವು ಹೀಗೆ ಮಾಡ್ತೀರಿ ಅಂತಾ ಕೇಳಿದೆ.ಆಗ ಅವರು, ನೀನು ಸುಮ್ಮನಿರು.ನಿನಗೂ ಅದಕ್ಕೂ ಏನು ಸಂಬಂಧವಿಲ್ಲ ಅಂತ ಹೇಳಿದ್ದಾರೆ.ಇದಾದ ಬಳಿಕ ಪ್ರಜ್ವಲ್ ರೇವಣ್ಣಗೆ ಟಿಕೆಟ್ ಕೊಡಬಾರದು ಎಂದು ಬಿಜೆಪಿ ಹೈಕಮಾಂಡ್‌ಗೆ ಪತ್ರ ಬರೆಯುತ್ತಾರೆ.ಅಲ್ಲದೇ ಅದರ ಕಾಪಿ ಕೂಡ ನನಗೆ ಕಳಿಸಿದ್ದಾರೆ. ಹೆಂಗಾದರೂ ಸರಿ ನನಗೆ ನದಯಾ ಸಿಕ್ಕರೆ ಸಾಕು ಎಂದು ಹೇಳಿ ಅವಾಗ್ಲೂ ನಾನು ಸುಮ್ಮನಾದೆ ಎಂದು ಹೇಳಿದರು.

ಇತ್ತ ಪೆನ್‌ಡ್ರೈವ್ ವಿಚಾರ ಸುದ್ದಿಯಾಗ್ತಿದ್ದಂತೆಯೇ ಮತ್ತೆ ಪ್ರೆಸ್ ಮೀಟ್ ಮಾಡಿ, ಈ ಪೆನ್‌ಡ್ರೈವ್ ಕಾರ್ತಿಕ್ ಕೊಟ್ಟಿರುವುದಾಗಿ ಹೇಳಿದ್ದಾರೆ.ಅಲ್ಲದೇ ಕಾಂಗ್ರೆಸ್ ಮುಖಂಡರಿಗೆಲ್ಲ ಕೊಟ್ಟಿರುವುದಾಗಿ ಸುಳ್ಳು ಆಪಾದನೆಗಳನ್ನು ಮಾಡಿದ್ದಾರೆ.ಆದರೆ ನಾನು ದೇವೇರಾಜೇ ಗೌಡ ಅವರಿಗೆ ಬಿಟ್ಟರೆ ಬೇರೆ ಯಾರಿಗೂ ಪೆನ್‌ಡ್ರೈವ್ ಕೊಟ್ಟಿಲ್ಲ ಎಂದು ಕಾರ್ತಿಕ್ ಸ್ಪಷ್ಟಪಡಿಸಿದರು.

## ಪ್ರಜ್ವಲ್‌ಗೆ ಟಿಕೆಟ್ ಕೊಡಬೇಡಿ ಅಂತಾ ಮೊದಲೇ ಹೇಳಿದ್ದೆ



**ಬೆಂಗಳೂರು:** ಪ್ರಜ್ವಲ್ ರೇವಣ್ಣಗೆ ಟಿಕೆಟ್ ಕೊಡಬೇಡಿ ಅಂತ ಮೊದಲೇ ಹೇಳಿದ್ದೆ. ಅವರಿಂದ ಹೆಣ್ಣು ಮಕ್ಕಳ ಶೋಷಣೆ ಆಗಿದೆ. ಅದನ್ನ ನೋಡಿದ್ದೀನಿ.ಮುಂದೊಂದು ದಿನ ಸಮಸ್ಯೆಯಲ್ಲಿ ಸಿಲುಕಿ ಮುಜುಗರಕ್ಕೆ ಸಿಲುಕುತ್ತೇವೆ ಎಂದಿದ್ದೆ ಅಂತಾ ಬಿಜೆಪಿ ಮುಖಂಡ ಮತ್ತು ವಕೀಲ ದೇವರಾಜೇ ಗೌಡ ಸ್ಫೋಟಕ ಹೇಳಿಕೆಯೊಂದನ್ನು ನೀಡಿದ್ದಾರೆ.

ಮಾಧ್ಯಮದ ಜೊತೆ ಮಾತನಾಡಿದ ಅವರು, ಪ್ರಜ್ವಲ್ ರೇವಣ್ಣಗೆ ಟಿಕೆಟ್ ನೀಡಬೇಡಿ ಅಂತ ಪತ್ರ ಬರೆದಿದ್ದೆ.ನಮ್ಮ ನಾಯಕರು ಅದನ್ನು ಅಷ್ಟೊಂದು ಸೀರಿಯಸ್ ಆಗಿ ತೆಗೆದುಕೊಳ್ಳಲಿಲ್ಲ. ಅವರ ಗಮನಕ್ಕೆ ತರಲು ಸಾಕಷ್ಟು ಪ್ರಯತ್ನಗಳನ್ನು ನಾನು ಮಾಡಿದ್ದೇನೆ. ಇ-ಮೇಲ್ ಮೂಲಕ ಅವರಿಗೆ ಮಾಹಿತಿ ನೀಡಲು ಪ್ರಯತ್ನವನ್ನು ಮಾಡಿದ್ದೀನಿ ಎಂದರು.

ವಿಜಯೇಂದ್ರ ಅವರಿಗೂ ವಾಟ್ಸಾಪ್ ಮೂಲಕ ಮಾಹಿತಿ ನೀಡಿದ್ದೆ. ಅವರು ಬ್ಯುಸಿಯಲ್ಲಿ ಇದನ್ನ ಗಮನಿಸಿದ್ರಾ..? ಇಲ್ಲವಾ..? ಗೊತ್ತಿಲ್ಲ. ಅಷ್ಟರೊಳಗೆ ಪಕ್ಷದ ವರಿಷ್ಠರು ತೀರ್ಮಾನಕ್ಕೆ ಬಂದು ಟಿಕೆಟ್ ನೀಡಿದ್ರು.ಎಸ್ಐಟಿ ತನಿಖೆ ಮಾಡೋವಾಗ ಪೆನ್ ಡ್ರೈವ್ ಎಲ್ಲಿಂದ ಬಂತು. ಇದನ್ನು ಯಾರು ಬಿಸಾಡಿದ್ರು..? ಅದರ ಬಗ್ಗೆ ತನಿಖೆ ಮಾಡಬೇಕು ಎಂದು ಒತ್ತಾಯಿಸಿದರು. ನನ್ನ ಬಳಿಯೂ ವೀಡಿಯೋಗಳು ಇದ್ದಾವೆ. ಅದನ್ನು ವೈರಲ್ ಮಾಡಬೇಕು ಅಂದಿದ್ರೆ ಯಾವಾಗಲೋ ಮಾಡಬಹುದಿತ್ತು. ಅಥವಾ ಎಲೆಕ್ಷನ್ ಪಿಟಿಷನ್ ಟೈಂ ಅಲ್ಲಿ ಕೋರ್ಟ್ ಗಮನಕ್ಕೆ ತರಬಹುದಿತ್ತು.ಈ ವೀಡಿಯೋ ಇರೋದ್ರಿಂದ ಪ್ರಜ್ವಲ್ ಗೆ ಟಿಕೆಟ್ ಕೊಡಬೇಡಿ ಅಂತ ವಿರೋಧಿಸಿದ್ದೆ.ರಾಜ್ಯ, ರಾಷ್ಟ್ರದ ಬಿಜೆಪಿ ನಾಯಕರಿಗೂ ಮಾಹಿತಿಯನ್ನು ನೀಡಿದ್ದೆ. ನಾನೇ ವೀಡಿಯೋ ರಿಲೀಸ್ ಮಾಡಬೇಕು ಅಂದಿದ್ರೆ ಟಿಕೆಟ್ ನೀಡುವ ಮೊದಲೇ ಲೀಕ್ ಮಾಡಬಹುದಿತ್ತು.ಟಿಕೆಟ್ ಅನ್ನು ಅವಾಗಲೇ ತಪ್ಪಿಸೋದು ಸುಲಭ ಇತ್ತು. ಚುನಾವಣೆ ಒಂದು ವಾರ ಇದೆ ಅಂದಾಗ ಹೀಗೆ ಮಾಡಿದ್ದು ತಪ್ಪು.ಎಸ್ಐಟಿ ಅಲ್ಲ ಸಿಬಿಐಯಿಂದ ಈ ಪ್ರಕರಣದ ತನಿಖೆ ಆಗಬೇಕು ಎಂದು ದೇವರಾಜೇ ಗೌಡ ಆಗ್ರಹಿಸಿದರು.

### ಅಮಿತ್ ಷಾ ಪ್ರತಿಕ್ರಿಯೆ

**ಪ್ರಜ್ವಲ್ ರೇವಣ್ಣ ಅವರದ್ದು ಎನ್ನಲಾದ 'ಅಶ್ಲೀಲ ವಿಡಿಯೋ' ಪ್ರಕರಣ ಸಂಬಂಧ ಗುವಾಹಟಿಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಪ್ರತಿಕ್ರಿಯೆ ನೀಡಿದ್ದಾರೆ. ಇದೊಂದು ಬಹಳ ಆಘಾತಕಾರಿ ಘಟನೆಯಾಗಿದೆ.ಯಾವುದೇ ಕಾರಣಕ್ಕೂ ಇದನ್ನು ಸಹಿಸಲು ಸಾಧ್ಯವಿಲ್ಲ. ನಾವು ದೇಶದ 'ಮಾತೃಶಕ್ತಿ' ಜೊತೆ ನಿಲ್ಲುತ್ತೇವೆ. ಈ ವಿಚಾರದಲ್ಲಿ ಬಿಜೆಪಿಯ ನಿಲುವು ಸ್ಪಷ್ಟವಾಗಿದೆ.ನಾನು ಕಾಂಗ್ರೆಸ್ ಸರ್ಕಾರವನ್ನು ಕೇಳಲು ಬಯಸುತ್ತೇನೆ. ಕರ್ನಾಟಕದಲ್ಲಿ ಯಾರ ಸರ್ಕಾರವಿದೆ? ಅವರ್ಯಾಕೆ ಇದುವರೆಗೆ ಕ್ರಮ ಕೈಗೊಂಡಿಲ್ಲ?.ಇದು ರಾಜ್ಯದ ಕಾನೂನು ಮತ್ತು ಸುವ್ಯವಸ್ಥೆಯ ಸಮಸ್ಯೆಯಾಗಿದೆ ಎಂದರು. ನಾವು ತನಿಖೆಯ ಪರವಾಗಿದ್ದೇವೆ, ತನಿಖೆ ನಡೆಯಲಿ.ಇದು ಕಾನೂನು ಸುವ್ಯವಸ್ಥೆಗೆ ಸಂಬಂಧಿಸಿದ ವಿಷಯ, ಹೀಗಾಗಿ ನಾವು ಈ ಬಗ್ಗೆ ಕ್ರಮ ಕೈಗೊಳ್ಳಲು ಆಗಲ್ಲ. ನಮ್ಮ ಮೈತ್ರಿ ಪಕ್ಷ ಜೆಡಿಎಸ್ ಕೂಡ ಇದರ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಘೋಷಿಸಿದೆ. ಇಂದು ಅವರ ಕೋರ್ ಕಮಿಟಿ ಸಭೆ ಇದ್ದು, ಕ್ರಮಕ್ಕೈಗೊಳ್ಳಲಿದ್ದಾರೆ ಎಂದು ಅಮಿತ್ ಶಾ ತಿಳಿಸಿದ್ದಾರೆ.**

## ಪೆನ್‌ಡ್ರೈವ್ ಹಿಂದೆ ಮಹಾನಾಯಕ ಇದ್ದಾರೆ- ಡಿಕೆಶಿ ವಿರುದ್ಧ ಹೆಚ್‌ಡಿಕೆ ಗರಂ

ಹುಬ್ಬಳ್ಳಿ: ಸಂಸದ ಪ್ರಜ್ವಲ್ ರೇವಣ್ಣ ಪೆನ್‌ಡ್ರೈವ್ ಪ್ರಕರಣಕ್ಕೆ ಸಂಬಂಧಿಸಿದಂತೆ ಡಿಸಿಎಂ ಡಿ.ಕೆ ಶಿವಕುಮಾರ್ ವಿರುದ್ಧ ಮಾಜಿ ಸಿಎಂ ಕುಮಾರಸ್ವಾಮಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪೆನ್‌ಡ್ರೈವ್ ಕೇಸ್ ಹಿಂದೆ ಮಹಾನಾಯಕ ಇದ್ದಾರೆ.ಆ ಮಹಾ ನಾಯಕನನ್ನು ಭೇಟಿ ಮಾಡಿದ್ಯಾರು?ಈ ಪ್ರಕರಣದ ವಿರುದ್ಧ ಕಾಂಗ್ರೆಸ್ ಮಹಾನಾಯಕರು ಪ್ರತಿಭಟನೆ ಮಾಡಿಸಿದ್ರು, ಇದನ್ನು ಇಷ್ಟಕ್ಕೆ ಬಿಡುವುದಿಲ್ಲ ಎಂದು ಅವರು ಕೆಂಡಾಮಂಡಲರಾಗಿದ್ದಾರೆ.

ನಾವು ಯಾರನ್ನೂ ರಕ್ಷಿಸುವ ಕೆಲಸ ಮಾಡುವುದಿಲ್ಲ. ಈ ವಿಚಾರವಾಗಿ ಕಠಿಣ ಕ್ರಮ ಕೈಗೊಳ್ಳುತ್ತೇವೆ. ಈ ಮಾತನ್ನು ಚಿಕ್ಕಪ್ಪನಾಗಿ ಹೇಳುತ್ತಿಲ್ಲ. ಸಾಮಾನ್ಯ ವ್ಯಕ್ತಿಯಾಗಿ ಹೇಳುತ್ತಿದ್ದೇನೆ. ಇದು ನಾಚಿಕೆಗೇಡಿನ ವಿಷಯ.ಉಪ್ಪು ತಿಂದವರು ನೀರು ಕುಡಿಯಲೇಬೇಕು ಎಂದು ಅವರು ಕಿಡಿಕಾರಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಲು ಸರ್ಕಾರ, ಬೆಂಗಳೂರಿನ ಎಡಿಜಿಪಿ ಬಿಜಯಕುಮಾರ್ ಸಿಂಗ್ ನೇತೃತ್ವದಲ್ಲಿ, ಸಹಾಯಕ ಪೊಲೀಸ್ ಮಹಾ ನಿರೀಕ್ಷಕರಾದ ಸುಮನ್ ಡಿ. ಪನ್ನೇಕರ್ ಹಾಗೂ ಮೈಸೂರು ಎಸ್ಪಿ ಸೀಮಾ ಲಾಟ್ಕರ್ ಅವರನ್ನೊಳಗೊಂಡ ವಿಶೇಷ ತನಿಖಾ ತಂಡವನ್ನು ರಚಿಸಿದೆ.ಈ ಸಂಬಂಧ ಎಸ್‌ಐಟಿ ತನಿಖೆ ನಡೆಸುತ್ತಿದೆ.



## ಪೆನ್‌ಡ್ರೈವ್ ನಡುವೆ ನೇಹಾ ಹತ್ಯೆ ಪ್ರಕರಣದ ದಿಕ್ಕು ತಪ್ಪದಿರಲಿ

**ಬೆಂಗಳೂರು:** ಪ್ರಜ್ವಲ್ ರೇವಣ್ಣ ಪೆನ್‌ಡ್ರೈವ್ ಪ್ರಕರಣದ ನಡುವೆ ಹುಬ್ಬಳ್ಳಿಯ ನೇಹಾ ಹತ್ಯೆ ಪ್ರಕರಣ ದಿಕ್ಕು ತಪ್ಪದಿರಲಿ ಎಂದು ಪೆನ್‌ಡ್ರೈವ್ ಜಟಾಪಟಿಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಟಕ್ಕರ್ ಕೊಟ್ಟಿದ್ದಾರೆ. ಮಹಿಳೆಯರ ಮೇಲಿನ ದೌರ್ಜನ್ಯಗಳನ್ನು ಖಂಡಿಸುವ, ಪ್ರತಿಭಟಿಸುವ ನಿಟ್ಟಿನಲ್ಲಿ ಕಾಳಜಿ ವಹಿಸುವಲ್ಲಿ ಎಂದಿಗೂ ರಾಜೀಯಾಗದ ದಾಖಲೆ ಇದ್ದರೆ ಅದು ಬಿಜೆಪಿಯಲ್ಲಿ ಮಾತ್ರ.ನಾರಿಯರನ್ನು ಮಾತೆಯರು ಎಂದು ಗೌರವಿಸುವ ಸಂಸ್ಕೃತಿ ಇದ್ದರೆ, ರಾಷ್ಟ್ರವನ್ನು ಭಾರತಮಾತೆ ಎಂದು ಪೂಜಿಸುವ ಸಂಸ್ಕಾರವಿದ್ದರೆ ಅದು ಬಿಜೆಪಿಯ ಧ್ಯೇಯದ ಮಡಿಲಿನಲ್ಲಿ ಮಾತ್ರ.ಮಹಿಳಾ ಶೋಷಣೆಯ ಕುರಿತು ಡಿ.ಕೆ ಶಿವಕುಮಾರ್ ಅಂಥವರಿಂದ ಹೇಳಿಸಿಕೊಳ್ಳಬೇಕಾದ ದುರ್ಗತಿ ಬಿಜೆಪಿಗೆ ಎಂದೂ ಬರುವುದಿಲ್ಲ ಎಂದು ಅವರು ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿದ್ದಾರೆ. ಹಾಸನದ ಪೆನ್ ಡ್ರೈವ್ ಪ್ರಕರಣ ಸೇರಿದಂತೆ ನಾರಿಕುಲದ ಯಾವ ಬಗೆಯ ಶೋಷಣೆಯನ್ನೂ ನೋಡಿಕೊಂಡು ನಾವು ಮೌನವಹಿಸಿ ಕೂರುವ ಪ್ರಶ್ನೆ ಉದ್ಭವಿಸುವುದಿಲ್ಲ. ಈ ಪ್ರಕರಣದ ಕುರಿತು ಸದ್ಯ ನೇಮಕವಾಗಿರುವ ಎಸ್‌ಐಟಿ ಶೀಘ್ರದಲ್ಲಿ ಸತ್ಯಾಸತ್ಯತೆಯನ್ನು ಹೊರತಂದು ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ಕೊಡಿಸಲಿ ಎಂದು ಅವರು ಆಗ್ರಹಿಸಿದ್ದಾರೆ. ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬಂದಾಗಿನಿಂದಲೂ ಅಭಿವೃದ್ಧಿಯ ಹೆಜ್ಜೆಯನ್ನಂತೂ ಇಟ್ಟಿಲ್ಲ. ಮಹಿಳೆಯರ ರಕ್ಷಣೆಗಾದರೂ ಆದ್ಯತೆ ನೀಡುವ ಯೋಗ್ಯತೆಯೂ ಅವರಿಗೆ ಇಲ್ಲವಾಗಿದೆ. ಬೆಳಗಾವಿಯಲ್ಲಿ ಹಾಡುಹಗಲೇ ಮಹಿಳೆಯನ್ನು ಕಂಬಕ್ಕೆ ಕಟ್ಟಿ ಬೆತ್ತಲೆಗೊಳಿಸಿ ದೌರ್ಜನ್ಯವೆಸಗಿದ ಸಂದರ್ಭದಲ್ಲಿ ಬೆಳಗಾವಿಯಲ್ಲೇ (ಅಧಿವೇಶನದಲ್ಲಿ) ಇದ್ದ ಮುಖ್ಯಮಂತ್ರಿ, ಸಂತ್ರಸ್ತ ಮಹಿಳೆಗೆ ಸಾಂತ್ವನ ಹೇಳಲೂ ಭೇಟಿ ನೀಡದೇ ಕನಿಷ್ಠ ಸೌಜನ್ಯವನ್ನು ತೋರಿಸಿಲ್ಲ. ಹುಬ್ಬಳ್ಳಿಯಲ್ಲಿ ಅನ್ಯಕೋಮಿನ ಯುವಕನಿಂದ ಹಾಡಹಗಲೇ ಅಮಾಯಕ ವಿದ್ಯಾರ್ಥಿನಿ ನೇಹಾ ಹಿರೇಮಠ ಬರ್ಬರವಾಗಿ ಹತ್ಯೆಯಾದಾಗ ಹೇಗೆ ನಡೆದುಕೊಂಡರು ಎಂಬುದನ್ನು ಈ ರಾಜ್ಯದ ಜನತೆ ಗಮನಿಸಿದ್ದಾರೆ. ಈ ಸರ್ಕಾರದ ಆಡಳಿತದಲ್ಲಿ ಸರಣಿ ರೂಪದಲ್ಲಿ ಸ್ತ್ರೀಕುಲದ ಮೇಲೆ ನಿರಂತರ ಶೋಷಣೆ, ದೌರ್ಜನ್ಯ ನಡೆಯುತ್ತಿದ್ದರೂ ಉಡಾಫೆತನ ಪ್ರದರ್ಶಿಸುವ ಕಾಂಗ್ರೆಸ್‌ಗೆ ಬಿಜೆಪಿಯತ್ತ ಬೊಟ್ಟುಮಾಡುವ ಯಾವ ನೈತಿಕತೆಯೂ ಇಲ್ಲ. ನಾಗರಿಕ ಸಮಾಜ ತಲೆತಗ್ಗಿಸುವ ಹಾಸನದ ಪೆನ್ ಡ್ರೈವ್ ಪ್ರಕರಣದಲ್ಲಿ ಪ್ರಜ್ವಲ್ ರೇವಣ್ಣ ಸೇರಿದಂತೆ ಯಾರೇ ತಪ್ಪಿತಸ್ಥರಿದ್ದರೂ ಅವರ ವಿರುದ್ಧ ನಿಷ್ಪಕ್ಷಪಾತ ತನಿಖೆ ನಡೆದು ಕ್ರಮ ಜರುಗಲಿ. ಇದರ ನಡುವೆ ನೇಹಾ ಹಿರೇಮಠ ಕಗ್ಗೊಲೆ ಪ್ರಕರಣದ ತನಿಖೆ ದಿಕ್ಕುತಪ್ಪದಿರಲಿ ಎಂದು ಅವರು ಆಗ್ರಹಿಸಿದ್ದಾರೆ.



# ವೀಡಿಯೋ ನೋಡೋಕೆ ಆಗಲ್ಲ

## ವಯಸ್ಸಾದ ತಾಯಿಯನ್ನು ಆ ರೀತಿ ಬಳಸಿಕೊಂಡಿದ್ದಾರೆ

**ಬೆಂಗಳೂರು:** ನಾನು ನಿಜವಾಗಿ ಹೇಳ್ತೀನಿ.ಆ ವೀಡಿಯೋ ನೋಡದಕ್ಕೇ ಆಗಲಿಲ್ಲ. ಅದು ಎರಡು ನಿಮಿಷದ್ದು, ವಯಸ್ಸಾದ ತಾಯಿಯನ್ನ ಆ ರೀತಿ ಬಳಸಿಕೊಂಡಿದ್ದಾರೆ ಎಂದು ಸಂಸದ ಡಿಕೆ ಸುರೇಶ್ ಅವರು ಪ್ರಜ್ವಲ್ ರೇವಣ್ಣ ವಿರುದ್ಧ ಕಿಡಿಕಾರಿದ್ದಾರೆ.



ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಇದು ಇಡೀ ದೇಶವೇ ಅಸಹ್ಯ ಪಡುವಂತಹ ಘಟನೆಯಾಗಿದೆ.ಈ ಪ್ರಕರಣದ ಬಗ್ಗೆ ಪ್ರಧಾನಿ ಮೋದಿ ಮಾತನಾಡಬೇಕು. ಹುಬ್ಬಳ್ಳಿ ಘಟನೆ ಬಗ್ಗೆ ಮೋದಿ ಪ್ರಸ್ತಾಪ ಮಾಡಬೇಕು. ಇದರಲ್ಲಿ ಯಾವುದೇ ರಾಜಕೀಯ ಇಲ್ಲ, ರಾಜಕೀಯ ಮಾಡಿದ್ರೆ ಅದು ಕುಮಾರಸ್ವಾಮಿನೇ ಮಾಡಿರಬೇಕು. ಅವರಿಗೆ ಈ ಬಗ್ಗೆ ಮೊದಲೇ ಗೊತ್ತಿತ್ತು ಅಂತಾರೇ.ದೇವೇಗೌಡರ ಮೊಮ್ಮಗ, ಸಿಎಂ ಅವರ ಮಗ ಈ ರೀತಿ ಮಾಡಿದ್ದಾರೆ.ಅವರ ರಕ್ಷಣೆಗೆ ಕುಟುಂಬವೇ ನಿಂತಿದೆ ಎಂದರು.

ಯಾವ ರಾಜಕೀಯ ಕೂಡ ಇದರಲ್ಲಿ ಇಲ್ಲ, ನಾನು ಸರ್ಕಾರಕ್ಕೆ ಹೇಳ್ತಿನಿ, ಇದರಲ್ಲಿರೋ ಸಂತ್ರಸ್ತರ ಪರವಾಗಿ ಸರ್ಕಾರ ನಿಲ್ಲಬೇಕು.ಸರ್ಕಾರ ಸಂತ್ರಸ್ತರಿಗೆ ರಕ್ಷಣೆ ನೀಡಬೇಕು.ಒಳ್ಳೆಯ ವಿಚಾರ ಆದಾಗ ಕುಟುಂಬ ಈಗ ಕುಟುಂಬದ ಹೆಸರು ಹೇಳಬಾರದಾ?ಕುಟುಂಬದವರೇ ಅವರ ರಕ್ಷಣೆಗೆ ನಿಂತಿದ್ದಾರೆ. ಬೇರೆ ಯಾರಾದ್ರೂ ಹೀಗೆ ಮಾಡಿದ್ರೆ, ದೇವೇಗೌಡರು, ಕುಮಾರಸ್ವಾಮಿ ಸುಮ್ನೇ ಇರ್ತಿದ್ರಾ?.ತಾಯಂದರ ರಕ್ಷಣೆ ಮಾಡಬೇಕು, ಇದು ಅತ್ಯಂತ ಅಸಹ್ಯಕರ ವಿಚಾರವಾಗಿದೆ. ದೇವೇಗೌಡರ ಕುಟುಂಬ ಈ ರೀತಿ ಅನೇಕ ಸಲ ಮಾಡಿಕೊಂಡೇ ಬಂದಿದೆ. ಯಾರು ಏನೂ ಮಾಡಲು ಆಗಲ್ಲ ಅನ್ನೋ ಮನೋಭಾವ ಅವರದ್ದಾಗಿದೆ.ರೇವಣ್ಣ ರಾಜಕೀಯ ಷಡ್ಯಂತ್ರ ಅಂದ್ರೇ, ಅದು ಕುಮಾರಸ್ವಾಮಿ ಮಾಡಿರೋದೇ ಆಗಿರಬೇಕು ಎಂದು ಹೇಳಿದರು.

ಇದು ನಮ್ಮ ಗಮನಕ್ಕೆ ಬಂದಿದ್ದರೆ ಇದು ಮುಂಚೆನೇ ಹೊರಕ್ಕೆ ಬರುತ್ತಿತ್ತು.ಇದನ್ನ ಬೇರೆ ರೀತಿ ತಿರುಗಿಸಲು ಹೀಗೆ ನಮ್ಮ ಹೆಸರನ್ನ ತರ್ತಿದ್ದಾರೆ. ಹಾಸನದಲ್ಲಿ ಇದು ಗುಸು ಗುಸು ಇತ್ತು. ಬಿಜೆಪಿ ನಾಯಕರು ಸಹ ಇದು ನಮಗೆ ಗೊತ್ತಿತ್ತು, ಅಂತಾ ಹೇಳಿದ್ದಾರೆ.ರೇವಣ್ಣ ಅವರು ಕೂಡ ಇದು ಹಳೆಯ ವಿಚಾರ ಅಂತಿದ್ದಾರೆ. ಆದರೆ ಅವರಿಗೆಲ್ಲ ಇದು ಮೊದಲೇ ಗೊತ್ತಿದ್ದ ವಿಚಾರ ಎಂದು ವಾಗ್ದಾಳಿ ನಡೆಸಿದರು.

ಇದು ಒಂದೆರಡು ಪ್ರಕರಣ ಅಲ್ಲ, 500ಕ್ಕೂ ಹೆಚ್ಚು ಇದೆ ಅಂತಿದ್ದಾರೆ.ಇದು ಇಡೀ ದೇಶದಲ್ಲೇ ಅತ್ಯಂತ ದೊಡ್ಡ ಪ್ರಕರಣ. ಇದು ಕುಟುಂಬದ ಹೊಣೆ ಅಲ್ಲಾ ಅಂತಾರೆ..ಮತ್ತೇನು?ಈ ಪೆನ್ ಡ್ರೈವ್ ವಿಚಾರ ಪ್ರಧಾನಿ ಕಚೇರಿಗೂ ತಲುಪಿದೆ.ಪ್ರಧಾನಿ ಅವರ ಗಮನಕ್ಕೂ ಬಂದಿದೆ. ಇದು ದೊಡ್ಡ ರಾಕೆಟ್.ಇದರಲ್ಲಿ ಯಾರೆಲ್ಲಾ ಇದ್ದಾರೆ.ಅವರಿಗೆ ಶಿಕ್ಷೆ ಆಗಬೇಕು.ಜೊತೆಗೆ ಆ ಹೆಣ್ಣು ಮಕ್ಕಳ ರಕ್ಷಣೆ ಆಗಬೇಕು ಎಂದು ಡಿಕೆ ಸುರೇಶ್ ಆಗ್ರಹಿಸಿದರು.

ಎನ್‌ಡಿಎ ಇಂತಹ ಅಭ್ಯರ್ಥಿ ಪರ ಪ್ರಚಾರ ಮಾಡಿದ್ದು ಯಾಕೇ..? ತಪ್ಪು ಮಾಡಿದವರ ಪರವಾಗಿ ನನ್ನ ಮಗನಿಗೆ ವೋಟ್ ಕೊಡಿ ಎಂದು ಕೇಳಿದ್ದು ಇಡೀ ದೇಶಕ್ಕೆ ಮಾಡಿದ ಅವಮಾನ. ಬಿಜೆಪಿಯವರು ಇತಂಹ ಘಟನೆಯನ್ನ ಮುಚ್ಚಿಡೋದ್ರಲ್ಲಿ ಮುಂದು. ಪ್ರಧಾನಿ ಕಾರ್ಯಾಲಯ ಪ್ರಕರಣವನ್ನ ತೀರಿಸುವ ಕೆಲಸ ಮಾಡಿದೆ.ಈ ಹಿಂದೆ ಬಾಂಬೆ ಬಾಯ್ಸ್ ಪ್ರಕರಣದಲ್ಲೂ ಹೀಗೆ ಮಾಡಿದೆ ಎಂದರು.

ರೇವಣ್ಣ ಅವರೇ ಇದು ನಾಲ್ಕು ವರ್ಷದ ಹಳೆಯ ವೀಡಿಯೋ ಅಂತಾ ಹೇಳಿದ್ದಾರೆ. ಇದು ಹೇಗೆ ರಾಜಕೀಯ ಷಡ್ಯಂತ್ರ.ಅವರೇ ಹೇಳಬೇಕು.500ಕ್ಕೂ ಹೆಚ್ಚು ಮಹಿಳೆಯರ ಮನಹಾನಿ ಪ್ರಕರಣ ಆಗಿದೆ.ಇದು ಇಡೀ ದೇಶದಲ್ಲೇ ಅತ್ಯಂತ ದೊಡ್ಡ ಮಾನಹಾನಿ ಪ್ರಕರಣ.ಸರ್ಕಾರ ಈ ಪ್ರಕರಣದಲ್ಲಿರೋ ಮಹಿಳೆಯರ ರಕ್ಷಣೆ ನೀಡಬೇಕು.ಸರ್ಕಾರದ ಜವಾಬ್ದಾರಿ ಇದಾಗಿದೆ.ಬಿಜೆಪಿ ಅವರು ಡಬಲ್ ಸ್ಟ್ಯಾಂಡ್.ಎಂಪಿ ಆದ್ಮೇಲೆ ನಡೆದಿರೋ ಘಟನೆ ಇದಾಗಿದೆ.ಜೆಡಿಎಸ್ ಕಾಂಗ್ರೆಸ್ ಇದ್ದಾಗ ಗೆದ್ದ ನಂತ್ರ ನಡೆದಿರೋದು ಎಂದು ವಾಗ್ದಾಳಿ ನಡೆಸಿದರು.

# ಪೆನ್ ಡ್ರೈವ್ ಹೊರ ಬಿಡುವ ಚಿಲ್ಲರೆ ಕೆಲಸ ಮಾಡಲ್ಲ

**ಬೆಂಗಳೂರು:** ಹಾಸನ ಸಂಸದ, ಜೆಡಿಎಸ್ ಮುಖಂಡ, ಮಾಜಿ ಸಚಿವ ಎಚ್.ಡಿ. ರೇವಣ್ಣ ಪುತ್ರ ಪ್ರಜ್ವಲ್ ರೇವಣ್ಣ ಅವರ ಅಶ್ಲೀಲ ವಿಡಿಯೊ ಎನ್ನಲಾದ ಪೆನ್‌ಡ್ರೈವ್ ಪ್ರಕರಣಕ್ಕೆ ಸಂಬಂಧಪಟ್ಟಂತೆ ತಮ್ಮ ಮೇಲೆ ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಮಾಡಿರುವ ಆರೋಪವನ್ನು ಡಿಸಿಎಂ ಡಿ.ಕೆ. ಶಿವಕುಮಾರ್ ನಿರಾಕರಣೆ ಮಾಡಿದ್ದಾರೆ.ಪೆನ್‌ಡ್ರೈವ್ ಹೊರಬಿಡುವಂತಹ ಚಿಲ್ಲರೆ ಕೆಲಸವನ್ನು ನಾನಂತೂ ಮಾಡಲ್ಲ. ಚುನಾವಣೆಯಲ್ಲಿ ಫೇಸ್ ಮಾಡುತ್ತೇನೆ. ನಾನು ಪೆನ್ ಡ್ರೈವ್ ಇದೆ ಎಂದು ಹೆಸರಿಸುವುದಿಲ್ಲ. ಅಸೆಂಬ್ಲಿಗೆ ಬನ್ನಿ ಎಂದು ಕರೆದಿದ್ದೇನೆ ಎಂದು ಸವಾಲು ಹಾಕಿದರು. ಬೆಂಗಳೂರಿನಲ್ಲಿ ದಿಢೀರ್ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಡಿಸಿಎಂ ಡಿ.ಕೆ.ಶಿವಕುಮಾರ್, ನಾವು ನಮ್ಮ ಪೊಲಿಟಿಕಲ್ ಟೂರ್ ಬಗ್ಗೆ ಮೀಟಿಂಗ್ ಮಾಡಿದ್ದೇವೆ. ಯಾರು ಎಲ್ಲಿ ಪ್ರಚಾರ ಮಾಡಬೇಕು ಎಂದು ಚರ್ಚೆ ಮಾಡಿದ್ದೇವೆ. ಕಾಂಗ್ರೆಸ್ ನಾಯಕರಾದ ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ ರಾಜ್ಯಕ್ಕೆ ಮತ್ತೊಮ್ಮೆ ಆಗಮಿಸಲಿದ್ದಾರೆ.ಈ ವೇಳೆ ಸಿಎಂ ಸಿದ್ದರಾಮಯ್ಯ ಎಲ್ಲಿ ಭಾಗಿಯಾಗಬೇಕು, ನಾನು ಎಲ್ಲಿ ಭಾಗಿಯಾಗಬೇಕು ಎಂದು ಚರ್ಚೆ ಮಾಡಿದ್ದೇವೆಯೇ ವಿನಃ ಪೆನ್ ಡ್ರೈವ್ ವಿಚಾರದ ಬಗ್ಗೆ ಚರ್ಚೆ ಮಾಡಿಲ್ಲ ಎಂದು ಹೇಳಿದರು.



ಎಚ್.ಡಿ. ಕುಮಾರಸ್ವಾಮಿ ಅವರಿಗೆ ಮತ್ತು ಅವರ ಕುಟುಂಬಕ್ಕೆ ನನ್ನ ನೆನಸಿಕೊಳ್ಳದೆ ಸ್ಫೂರ್ತಿ ಇರಲ್ಲ. ಕುಮಾರಸ್ವಾಮಿ ಅವರ ಭಾಷಣ ಕೇಳಿದ್ದೇನೆ. ಪ್ರಜ್ವಲ್‌ನನ್ನು ನನ್ನ ಮಗ ಎಂದು ಹೇಳಿದ್ದಾರೆ.ಅದರಲ್ಲಿ ತಪ್ಪೇನೂ ಇಲ್ಲ. ಅವರ ಕುಟುಂಬದ ಕುಡಿ.ನೂಲಿನಂತೆ ಸೀರೆ ಎಂದು ಡಿಕೆಶಿ ವ್ಯಂಗ್ಯವಾಡಿದರು. ಹಳೆ ವಿಡಿಯೋ ಎಂದು ಪ್ರಜ್ವಲ್ ತಂದೆ ಎಚ್.ಡಿ. ರೇವಣ್ಣ ಹೇಳಿದ್ದಾರೆ. ಅಂದರೆ ಅವರು ಒಪ್ಪಿಕೊಂಡಿದ್ದಾರೆ.ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ತೀರ್ಮಾನ ಮಾಡುತ್ತಾರೆ ಎಂದು ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಅವರು ಹೇಳಿದ್ದಾರೆ.ಈ ಸಂಬಂಧ ದೇವರಾಜೇಗೌಡ ಅಮಿತ್ ಶಾಗೆ ಪತ್ರ ಬರೆದಿದ್ದಾರೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

10 ದಿನದ ಮುಂಚೆ ದೂರು ಕೊಡಬೇಕಿತ್ತು. ಕೇಂದ್ರ ಗೃಹ ಸಚಿವ ಅಮಿತ್ ಶಾ ಈಗ ಮಾತನಾಡಿದ್ದಾರೆ.ಕರ್ನಾಟಕದಲ್ಲಿ ಮಹಿಳೆಯರ ರಕ್ಷಣೆ ಬಗ್ಗೆ ಮಾತನಾಡುತ್ತಾರೆ.ಉಡುಪಿಯಲ್ಲಿ ಫೋಟೊ ಹಿಡಿದು ಅಂತಾರಾಷ್ಟ್ರೀಯ ಮಹಿಳಾ ಆಯೋಗ ಕಳುಹಿಸಿದರು.ಬಿಜೆಪಿಯವರು ಯಾಕೆ ಮಾತನಾಡುತ್ತಿಲ್ಲ. ಅವರ ಕುಟುಂಬದವರು ಹೌದೋ ಇಲ್ಲವೋ ನೀವು ಹೇಳಬೇಕು.ವಾರ ಹತ್ತು ದಿನದ ಮುಂಚೆ ದೂರು ಕೊಟ್ಟಿದ್ದರೆ ಕ್ರಮ ತೆಗೆದುಕೊಳ್ಳುತ್ತಿದ್ದೆವು.ಮಹಿಳಾ ಆಯೋಗಕ್ಕೆ ದೂರು ಕೊಟ್ಟಿದ್ದಾರೆ.ಅವರು ಸಿಎಂ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದರು.ಬಳಿಕ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು. ಅಮಿತ್ ಶಾ ಅವರು ಮೈಸೂರಿಗೆ ಬಂದಾಗ ಪ್ರಜ್ವಲ್ ರೇವಣ್ಣ ಅವರಿಗೆ ಟಿಕೆಟ್ ಕೊಡಬೇಡಿ ಎಂದು ಹೇಳಿದ್ದರು.ಆದರೆ, ಕೊನೆಗೆ ಏಕೆ ಕೊಟ್ಟರು ಅಮಿತ್ ಶಾ ಬೇಡವನ್ನಲು ಏನು ಕಾರಣ ಎಂದು ಡಿ.ಕೆ.ಶಿವಕುಮಾರ್ ಪ್ರಶ್ನೆ ಮಾಡಿದರು. ಪಕ್ಷದಿಂದ ವಜಾ ಮಾಡಲಿ, ಒಳಗೆ ಇಟ್ಟುಕೊಳ್ಳಲಿ. ಅದೆಲ್ಲ ಕಣ್ಣು ಒರೆಸುವ ನಾಟಕ.ಈ ಅಮಾನತಿನ ಬಗ್ಗೆ ರಾಜಕಾರಣದಲ್ಲಿ ನನಗೂ ಗೊತ್ತಿದೆ.ನನ್ನ ವಿರುದ್ಧ ಮೊದಲು ಪ್ರತಿಭಟನೆ ಮಾಡಲಿ.ಕುಮಾರಸ್ವಾಮಿ ಯಾವ ಕರೆ ಕೊಡುತ್ತೀಯೋ ಕೊಡು.ಕರೆ ಕೊಡಬೇಕು ನೀನು.ನೀನು ಕೊಡಲಿ ಅಂತನೇ ಹೇಳುತ್ತಿದ್ದೇನೆ ಎಂದು ಡಿ.ಕೆ.ಶಿವಕುಮಾರ್ ಹೇಳಿದರು.

ಮೊದಲನೇ ಪುಟದಿಂದ...

## ಎಷ್ಟಿದೆ ಹಣ್ಣಿನ ಜ್ಯೂಸ್ ಬೆಲೆ?

ಸದ್ಯ ಬೆಂಗಳೂರಿನ ಅಂಗಡಿಗಳಲ್ಲಿ ಆಪಲ್ ಜ್ಯೂಸ್ ದರ 60 ರೂ. ಇದ್ದುದು 65ಕ್ಕೆ ಏರಿಕೆಯಾಗಿದೆ. ಪ್ರೊಮೋಗ್ರನೇಟ್ 60 ರೂ. ಇದ್ದುದು 65ಕ್ಕೆ, ಮುಸಂಬಿ ಜ್ಯೂಸ್ 45 ರಿಂದ 50, ಆರೆಂಜ್ 45 ರಿಂದ 55, ಬಾನಾನ ಮಿಲ್ಕ್ ಶೇಕ್ 50 ರಿಂದ 60, ಕ್ಯಾರೆಟ್ ಜ್ಯೂಸ್ 60 ರಿಂದ 65, ವಾಟರ್ ಮೆಲನ್ 45 ರಿಂದ 50, ಫೈನಾಪಲ್ 45 ರಿಂದ 50, ಮಸ್ಕ್ ಮೆಲನ್ 45 ರಿಂದ 50, ಮಿಕ್ಸ್ ಜ್ಯೂಸ್ 45 ರಿಂದ 50, ಡ್ರೈ ಫ್ರೂಟ್ಸ್ ಶೇಕ್ 75 ರಿಂದ 80, ಸಪೋಟ 50 ರಿಂದ 55, ಪಪ್ಪಾಯ ಜ್ಯೂಸ್ 50 ರಿಂದ 55, ಗ್ರೇಫ್ಸ್ ಜ್ಯೂಸ್ 45 ರಿಂದ 50, ಪಲ್ಲಿ ಗ್ರೇಪ್ ಜ್ಯೂಸ್ 40 ರಿಂದ 50, ಕಬ್ಬಿನ ಜ್ಯೂಸ್ 35 ರಿಂದ 40 ಹಾಗೂ ಟೆಂಡರ್ ಕೊಕನಟ್ ಮಿಲ್ಕ್ ಶೇಕ್ 80 ರೂ.ಗೆ ಏರಿಕೆಯಾಗಿದೆ.

ಮತ್ತೊಂದೆಡೆ, ನಗರದ ಹಲವು ಕಡೆಗಳಲ್ಲಿ ಎಳನೀರು 50 ರಿಂದ 70 ರೂ. ವರೆಗೂ ಮಾರಾಟವಾಗುತ್ತಿದೆ. ಬೆಲೆ ಏರಿಕೆಯಾದರೂ ಗ್ರಾಹಕರ ಸಂಖ್ಯೆ ಮಾತ್ರ ಕಡಿಮೆಯಾಗುತ್ತಿಲ್ಲ ಎನ್ನುತ್ತಿದ್ದಾರೆ ಅಂಗಡಿಗಳ ಮಾಲೀಕರು.

## ಸ್ನೇಹಿತನ ಮೇಲೆ ಮಾರಣಾಂತಿಕ ಹಲ್ಲೆ!

ಶಶಾಂಕ್, ಯುವತಿಯೊಬ್ಬಳನ್ನು ಪ್ರೀತಿ ಮಾಡುತ್ತಿರುತ್ತಾನೆ. ಈತನ ಸ್ನೇಹಿತ ಹರ್ಷಿತ್ ಕುಮಾರ್ ಬುಲ್ ಟೆಂಪಲ್ ರಸ್ತೆಯಲ್ಲಿ ಬರುವ ಉಮಾ ಟಾಕೀಸ್ ಬಳಿ ಫ್ಲವರ್ ಡೆಕೊರೇಷನ್ ಅಂಗಡಿ ಇಟ್ಟುಕೊಂಡಿರುತ್ತಾನೆ.

ಶಶಾಂಕ್ ಲವರ್ ಹರ್ಷಿತ್ ಕುಮಾರ್ ಗೆ ಪರಿಚಯವಾಗಿರುತ್ತಾರೆ. ಹರ್ಷಿತ್ ಕುಮಾರ್ ಪರಿಚಯ ಸ್ನೇಹಕ್ಕೆ ತಿರುಗಿ ಯುವತಿ ಹಾಗೂ ಹರ್ಷಿತ್ ಇಬ್ಬರು ಚಾಟ್ ಮಾಡಿಕೊಂಡಿರುತ್ತಾರೆ. ಇದು ಶಶಾಂಕ್ ಗಮನಕ್ಕೆ ಬಂದು ಪ್ರಶ್ನೆ ಮಾಡಿದ್ದಾನೆ. ಯುವತಿ ಮುಂದೆ ಹರ್ಷಿತ್ ಫೋನ್ ಕೇಳಿದಾಗ ಆತ ಕೊಡಲು ನಿರಾಕರಿಸಿದ್ದಾನೆ. ಯುವತಿ ಮೊಬೈಲ್ ಕೊಡಲು ಸೂಚಿಸಿದಾಗ ಹರ್ಷಿತ್, ಶಶಾಂಕ್ ಕೈಯಲ್ಲಿ ಮೊಬೈಲ್ ಕೊಟ್ಟಿದ್ದಾರೆ.

ಆರೋಪಿ ಮೊಬೈಲ್ ಪರಿಶೀಲನೆ ಮಾಡಿ ನೋಡಿದಾಗ ಹರ್ಷಿತ್ ಮತ್ತೆ ಶಶಾಂಕ್ ಲವರ್ ಚಾಟ್ ಮಾಡಿರುವು ಬೆಳಕಿಗೆ ಬರುತ್ತಿದ್ದಂತೆ ಸ್ನೇಹಿತ ನಂದನ್ ಜೊತೆ ಸೇರಿಕೊಂಡು ಹರ್ಷಿತ್ ಮಾರಕಾಸ್ತ್ರಗಳಿಂದ ಮಾರಣಾಂತಿಕವಾಗಿ ಹಲ್ಲೆ ಮಾಡಿ ಅಲ್ಲಿಂದ ಎಸ್ಕೇಪ್ ಆಗಿರುತ್ತಾರೆ. ಸ್ಥಳೀಯರು ಹಲ್ಲೆಗೆ ಒಳಗಾಗಿದ್ದ ಹರ್ಷಿತ್ ಗೆ ಆಸ್ಪತ್ರೆಗೆ ಸೇರಿಸಿ ಚಿಕಿತ್ಸೆ ಕೊಡಿಸಿದ್ದಾರೆ. ಬಳಿಕ ಘಟನೆ ಸಂಬಂಧ ಶಂಕರಪುರ ಪೊಲೀಸ್ ಠಾಣೆಯಲ್ಲಿ ಹರ್ಷಿತ್ ಪೋಷಕರು ದೂರು ದಾಖಲಿಸುತ್ತಾರೆ. ಪ್ರಕರಣ ಸಂಬಂಧ ಕೇಸ್ ದಾಖಲಿಸಿಕೊಂಡ ಪೊಲೀಸರು ಆರೋಪಿ ಶಶಾಂಕ್ ಹಾಗೂ ನಂದನ್ ಬಂಧಿಸಿ ಜೈಲಿಗೆ ಕಳಿಸಿದ್ದಾರೆ.

### ಬೆಟ್ಟದಷ್ಟು ಭರವಸೆ

- » ವಾರ್ಷಿಕ ಮೂರು ಉಚಿತ ಎಲ್‌ಪಿಜಿ ಸಿಲಿಂಡರ್
- » ಮಹಿಳೆಯರಿಗೆ ರಾಜ್ಯಾದ್ಯಂತ ಉಚಿತ ಬಸ್ ಪ್ರಯಾಣ
- » ತಲ್ಲಿಕಿ ವಂದನಂ ಯೋಜನೆಯಡಿ ಎಲ್ಲಾ ಶಾಲಾ ಮಕ್ಕಳಿಗೆ ವಾರ್ಷಿಕ 15,000 ರೂ.
- » ಆರ್ಥಿಕವಾಗಿ ಹಿಂದುಳಿದ ವರ್ಗಗಳಿಗೆ ಶೇ.10ರಷ್ಟು ಮೀಸಲಾತಿ ಜಾರಿ
- » 18 ವರ್ಷ ತುಂಬಿದ ಪ್ರತಿಯೊಬ್ಬ ಮಹಿಳೆಗೆ ತಿಂಗಳಿಗೆ 1,500 ರೂ.ನಂತೆ ವಾರ್ಷಿಕ 18,000 ಸಾವಿರ ರೂ. ಭತ್ಯೆ
- » 50 ವರ್ಷ ತುಂಬಿದ ಬಿಸಿ ಸಮುದಾಯದವರಿಗೆ ಪಿಂಚಣಿ ಮತ್ತು ಬಿ.ಸಿ.ಗಳ ಸ್ವಯಂ ಉದ್ಯೋಗಕ್ಕೆ 10,000 ಕೋಟಿ ರೂ.
- » ಪ್ರತಿ ಮನೆಗೆ ಉಚಿತ ನೀರು ಸೌಲಭ್ಯ, ವೃದ್ಧಾಪ್ಯ ವೇತನವನ್ನ 4,000 ರೂ.ಗಳಿಗೆ ಹೆಚ್ಚಳ
- » ಅಂಗವಿಕಲರ ವೇತನವನ್ನ 6,000 ರೂ.ಗೆ ಹೆಚ್ಚಳ, ಮೀನುಗಾರರಿಗೆ ವಾರ್ಷಿಕ 20,000 ರೂ. ನೆರವು

## ಈಶ್ವರಪ್ಪ ಪುತ್ರ ಕಾಂತೇಶ್ ವಿರುದ್ಧ ಅಶ್ಲೀಲ ಫೋಟೊ, ವೀಡಿಯೊ ಪ್ರಸಾರ ಮಾಡದಂತೆ ನ್ಯಾಯಾಲಯ ಆದೇಶ

ಎಂದು ನ್ಯಾಯಾಲಯವು ಆದೇಶದಲ್ಲಿ ಹೇಳಿದ್ದು, ಪ್ರತಿವಾದಿ ಮಾಧ್ಯಮಗಳಿಗೆ ನೋಟಿಸ್, ಸಮನ್ಸ್ ಜಾರಿ ಮಾಡಿ ವಿಚಾರಣೆಯನ್ನು ಆಗಸ್ಟ್ 3ಕ್ಕೆ ಮುಂದೂಡಿದೆ. ಫಿರ್ಯಾದಿ ಕಾಂತೇಶ್ ಪರ ವಕೀಲ ಎಂ ವಿನೋದ್ ಕುಮಾರ್ ಅವರು ''ಪ್ರತಿವಾದಿಗಳು ಇಂಟರ್‌ನೆಟ್, ಟಿವಿ ಮಾಧ್ಯಮ, ಪತ್ರಿಕೆಗಳಲ್ಲಿ ಫಿರ್ಯಾದಿ ವಿರುದ್ಧ ಆಕ್ಷೇಪಾರ್ಹವಾದ ಸುದ್ದಿ ಪ್ರಸಾರ/ಮುದ್ರಣ ಮಾಡುತ್ತಿದ್ದಾರೆ. ಮಾಧ್ಯಮಗಳು ಫಿರ್ಯಾದಿಯ ವರ್ಚಸ್ಸಿಗೆ ಹಾನಿ ಮಾಡಲು ಯತ್ನಿಸುತ್ತಿವೆ. ಲೋಕಸಭಾ ಚುನಾವಣೆಯಂಥ ಈ ಮಹತ್ವದ ಸಂದರ್ಭದಲ್ಲಿ ಹೆಸರು ಕೆಡಿಸುವ ಪ್ರಯತ್ನ ಮಾಡಲಾಗುತ್ತಿದೆ. ಫಿರ್ಯಾದಿಗೆ ಮಾನಹಾನಿಯಿಂದ ರಕ್ಷಣೆ ಅಗತ್ಯವಾಗಿದೆ. ಹೀಗಾಗಿ, ದಾವೆ ಇತ್ಯರ್ಥವಾಗುವವರೆಗೆ ಸಂಬಂಧಿತ ಮಾಧ್ಯಮಗಳ ವಿರುದ್ಧ ತಾತ್ಕಾಲಿಕ ಪ್ರತಿಬಂಧಕಾದೇಶ ಮಾಡಬೇಕು ಎಂದು ಕೋರಿದ್ದರು.

# ಪ್ರಜ್ವಲ್ ರೇವಣ್ಣ ಪೆನ್‌ಡ್ರೈವ್ ಕೇಸ್: ಎಸ್‌ಐಟಿ ತಂಡಕ್ಕೆ 18 ಅಧಿಕಾರಿ, ಸಿಬ್ಬಂದಿಗಳ ನೇಮಕ

**ಬೆಂಗಳೂರು:** ರಾಜ್ಯದಲ್ಲಿ ತೀವ್ರ ಸಂಚಲನ ಮೂಡಿಸಿರುವ ಪ್ರಜ್ವಲ್ ರೇವಣ್ಣ ಪೆನ್?ಡ್ರೈವ್ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಶೇಷ ತನಿಖಾ ತಂಡಕ್ಕೆ(ಎಸ್‌ಐಟಿ) ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನ ಪೊಲೀಸ್ ಇಲಾಖೆ ನಿಯೋಜಿಸಿ ಆದೇಶಿಸಿದೆ.

ಪ್ರಕರಣದ ಕೂಲಂಕಷ ತನಿಖೆಗಾಗಿ ರಾಜ್ಯ ಸರ್ಕಾರವು ಎಸ್‌ಐಟಿ ಮುಖ್ಯಸ್ಥ ಬಿ.ಕೆ.ಸಿಂಗ್ ನೇತೃತ್ವದಲ್ಲಿ ಮೈಸೂರು ಎಸ್ಪಿ ಸೀಮಾ ಲಾಟ್ಕರ್, ಹೆಚ್ಚುವರಿ ಎಸ್ಪಿ ಸುಮನ್ ಪನ್ನೇಕರ್ ಅವರನ್ನ ನಿಯೋಜಿಸಿತ್ತು. ಇದೀಗ ರಾಜ್ಯ ಸರ್ಕಾರ 18 ಮಂದಿ ಅಧಿಕಾರಿ ಹಾಗೂ ಸಿಬ್ಬಂದಿಯನ್ನ ನಿಯೋಜಿಸಿದೆ. ಇದರಿಂದ ಎಸ್‌ಐಟಿ ತನಿಖೆ ಇನ್ನಷ್ಟು ಚುರುಕುಗೊಳ್ಳಲಿದೆ.

ಪ್ರಕರಣ ಸಂಬಂಧ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಪೊಲೀಸರನ್ನೂ ಒಳಗೊಂಡಂತೆ 18 ಮಂದಿ ಪರಿಣಿತರನ್ನ ನಿಯೋಜಿಸಲಾಗಿದೆ,

ಪೊಲೀಸ್ ಮಹಾ ನಿರ್ದೇಶಕರ ಸೂಚನೆಯಂತೆ ಬೆಂಗಳೂರು ನಗರದ ಮಾರತ್ ಹಳ್ಳಿ ಉಪ ವಿಭಾಗದ ಎಸಿಪಿ ಪ್ರಿಯದರ್ಶಿನಿ ಈಶ್ವರ್ ಸಾನಿಕೊಪ್ಪ, ಬೆಂಗಳೂರು ನಗರ ಸಿಸಿಬಿ ಎಸಿಪಿ ಸತ್ಯನಾರಾಯಣ ಸಿಂಗ್ ಎಸ್.ಬಿ., ಮಂಗಳೂರು ದಕ್ಷಿಣ ಉಪ ವಿಭಾಗದ ಎಸಿಪಿ ಧನ್ಯಾ ಎನ್. ನಾಯ್ಕ್, ಮಂಗಳೂರು ಉರ್ವಾ ಠಾಣೆಯ ಪೊಲೀಸ್ ಇನ್ ಸ್ಪೆಕ್ಟರ್ ಭಾರತಿ ಜಿ., ಕೆ.ಆರ್. ಪೇಟೆ ಟೌನ್ ಪೊಲೀಸ್ ಠಾಣೆಯ ಪೊಲೀಸ್ ಇನ್ ಸ್ಪೆಕ್ಟರ್ ಸುಮರಾಣಿ ಬಿ.ಎಸ್., ಆಲನಹಳ್ಳಿ ಠಾಣೆಯ ಪೊಲೀಸ್ ಇನ್ ಸ್ಪೆಕ್ಟರ್ ಸ್ವರ್ಣಾ ಜಿ.ಎಸ್., ವೈಟ್ ಫೀಲ್ಡ್ ನ ಸೆನ್ ಠಾಣೆ ಪೊಲೀಸ್ ಇನ್ ಸ್ಪೆಕ್ಟರ್ ಹೇಮಂತ್ ಕುಮಾರ್ ಎಂ., ಬೆಂಗಳೂರು ನಗರ ಸಿಸಿಬಿ ಪೊಲೀಸ್ ಇನ್ ಸ್ಪೆಕ್ಟರ್ ರಾಜಾ ಜಿ.ಸಿ., ಉಡುಪಿ ಮಲ್ಪೆ ಸಿಎಸ್ಪಿ ಪಿಎಸ್ಸೈ ವೈಲೆಟ್ ಫ್ಲೆಮಿನಾ ಸೇರಿದಂತೆ 18 ಮಂದಿಯನ್ನು ಓಓಡಿ ಆಧಾರದಲ್ಲಿ ತಕ್ಷಣದಿಂದ ಜಾರಿಗೆ ಬರುವಂತೆ ನಿಯೋಜಿಸಿ ಆದೇಶ ಹೊರಡಿಸಿದ್ದಾರೆ.

## ಬರದ ನಡುವೆ ಕಾವೇರಿ ನೀರಿಗಾಗಿ ಕ್ಯಾತೆ ತೆಗೆದ ತಮಿಳುನಾಡು!

**ನವದೆಹಲಿ:** ರಾಜ್ಯದಲ್ಲಿ ಬೇಸಿಗೆ ತೀವ್ರಗೊಂಡು ಬರ ಎದುರಾಗಿರುವಾಗ ಕಾವೇರಿ ನೀರಿಗಾಗಿ ತಮಿಳುನಾಡು ಮತ್ತೆ ಕ್ಯಾತೆ ತೆಗೆದಿದೆ.

2.5 ಟಿಎಂಸಿ ನೀರು ಹರಿಸುವಂತೆ ತಮಿಳುನಾಡು ಆಗ್ರಹಿಸಿದೆ. ನಮಗೆ ಈ ತಿಂಗಳು ಬರಬೇಕಿರುವ 2.5 ಟಿಎಂಸಿ ನೀರನ್ನು ಬಿಡುಗಡೆ ಮಾಡುವಂತೆ ತಮಿಳುನಾಡು ಕಾವೇರಿ ನೀರು ನಿಯಂತ್ರಣ ಸಮಿತಿ (ಸಿಡಬ್ಲ್ಯುಸಿ) ಸಭೆಯಲ್ಲಿ ಒತ್ತಾಯಿಸಿದೆ. ಅಷ್ಟೇ ಅಲ್ಲದೇ ಕರ್ನಾಟಕಕ್ಕೆ ಕುಡಿಯುವುದಕ್ಕೆ 0.5 ಟಿಎಂಸಿ ನೀರು ಸಾಕು, ಕುಡಿಯುವ ನೀರಿನ ನೆಪ ಹೇಳಿ ನೀರು ಬಿಡುಗಡೆಗೆ ನಿರಾಕರಿಸಬಾರದೆಂದು ಸಭೆಯಲ್ಲಿ ವಾದಿಸಿದೆ. 'ಮಳೆಯ ಕೊರತೆ ಕಾರಣ ನೀಡಿ ಕರ್ನಾಟಕ ಸುಪ್ರೀಂಕೋರ್ಟ್ ಆದೇಶ ಪಾಲನೆ ಮಾಡಿಲ್ಲ, ನಿಗಧಿತ ಪ್ರಮಾಣದ ನೀರು ಹರಿಸಿಲ್ಲ. ಫೆ.1 ರಿಂದ ಏಪ್ರಿಲ್ 28 ವರೆಗೂ ಪರಿಸರಕ್ಕೆ 7.33 ಟಿಎಂಸಿ ನೀರು ಹರಿಸಬೇಕಿತ್ತು. ಆದರೆ, ಕರ್ನಾಟಕ 5.31 ಟಿಎಂಸಿ ನೀರು ಮಾತ್ರ ಹರಿಸಿದೆ ಇದರಲ್ಲೂ 2.016 ಟಿಎಂಸಿ ಬಾಕಿ ಉಳಿಸಿಕೊಂಡಿದೆ. ಮೆಟ್ಟೂರಿನಲ್ಲಿ 20 ಟಿಎಂಸಿಯಷ್ಟು ನೀರಿದೆ. ಕುಡಿಯಲು ಮತ್ತು ಪರಿಸರಕ್ಕೆ ಬಳಸಲಾಗುತ್ತಿದೆ. ಬಾಕಿ ಉಳಿಸಿಕೊಂಡ ಪರಿಸರ ಬಳಕೆ ನೀರು ಬಿಡುಗಡೆ ಮಾಡಬೇಕು ಎಂದು ತಮಿಳುನಾಡು ಅಧಿಕಾರಿಗಳು ಬೇಡಿಕೆ ಮುಂದಿಟ್ಟಿದ್ದಾರೆ. ತಮಿಳುನಾಡಿನ ವಾದಕ್ಕೆ ಕರ್ನಾಟಕ ತೀವ್ರ ವಿರೋಧ ವ್ಯಕ್ತಪಡಿಸಿದೆ. 'ರಾಜ್ಯದಲ್ಲಿ ಭೀಕರ ಬರದಿಂದ ಕುಡಿಯುವ ನೀರಿನ ಸಮಸ್ಯೆಯಾಗಿದೆ. ನೀರು ಹರಿಸಲು ರಾಜ್ಯದ ಜಲಾಶಯಗಳಲ್ಲಿ ನೀರಿಲ್ಲವೆಂದು ವಾದ ಮಂಡಿಸಿದೆ. ರಾಜ್ಯಗಳ ವಾದ ಆಲಿಸಿದ ಕಾವೇರಿ ನೀರು ನಿಯಂತ್ರಣ ಸಮಿತಿ, ಮೇ 16ಕ್ಕೆ ಮತ್ತೊಂದು ಸುತ್ತಿನ ಸಭೆ ನಡೆಸಲು ತೀರ್ಮಾನ ಮಾಡಿದೆ.



# ನನಗೆ ಗೆಲ್ಲುವ ವಿಶ್ವಾಸವಿದೆ: ಡಾ.ಸಿ.ಎನ್. ಮಂಜುನಾಥ್

**ಮೈಸೂರು:** ಬಿ.ಜೆ.ಪಿ. ಮತ್ತು ಜೆ.ಡಿ.ಎಸ್. ಪಕ್ಷದ ಎಲ್ಲಾ ಮುಖಂಡರು, ಕಾರ್ಯಕರ್ತರು ಒಗ್ಗಟ್ಟಾಗಿ ಕೆಲಸ ಮಾಡಿರುವುದರಿಂದ ಈ ಬಾರಿ ನಾನು ಗೆಲ್ಲುವ ವಿಶ್ವಾಸವಿದೆ ಎಂದು ಜಯದೇವ ಹೃದ್ರೋಗ ಸಂಸ್ಥೆಯ ಮಾಜಿ ನಿರ್ದೇಶಕ ಹಾಗೂ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಪದ್ಮಶ್ರೀ ಡಾ. ಸಿ.ಎನ್. ಮಂಜುನಾಥ್ ಹೇಳಿದರು. ಮೈಸೂರು ಜಯದೇವ ಆಸ್ಪತ್ರೆಗೆ ಮಂಗಳವಾರ ಭೇಟಿ ನೀಡಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಲೋಕಸಭಾ ಚುನಾವಣೆಗೂ ವಿಧಾನಸಭಾ ಚುನಾವಣೆಗೂ ವ್ಯತ್ಯಾಸವಿದ್ದು ದೇಶದ ಹಿತಕಾಯುವ ದೃಷ್ಟಿಯಿಂದ ಜನ ಬೇರೆ ಬೇರೆ ಯೋಚನೆ ಮಾಡುತ್ತಾರೆ. ರಾಷ್ಟ್ರಮಟ್ಟದಲ್ಲಿ ಸ್ಥಿರ, ಸುಭದ್ರ ಸರ್ಕಾರ ಬೇಕೆಂದು ನೋಡುತ್ತಾರೆ. ದೂರಾಲೋಚನೆ ಇರುವ ಸಮರ್ಥ ನಾಯಕ ಬೇಕು ಎಂದು ಚಿಂತಿಸಿ ಮತ ಚಲಾಯಿಸುತ್ತಾರೆ. ಕೇಂದ್ರ ಸರ್ಕಾರದ ಜನಪರ ಯೋಜನೆಗಳನ್ನು ನೋಡುತ್ತಾರೆ. ಒಟ್ಟಾರೆ ಜನರು ಈ ಭಾರಿ ಬದಲಾವಣೆ ಬಯಸಿರುವುದರಿಂದ ಎಲ್ಲಾ 8 ವಿಧಾನಸಭಾ ಕ್ಷೇತ್ರಗಳಲ್ಲಿಯೂ ಉತ್ತಮ ಜನಸ್ಪಂದನೆ ಇರುವುದರಿಂದ ಹಾಗೂ ಕಳೆದ 35 ವರ್ಷ ಜಯದೇವ ಆಸ್ಪತ್ರೆಯಲ್ಲಿ ನಿರಂತರ ಸೇವೆ ಮಾಡಿರುವುದರಿಂದ ಪ್ರತಿಯೊಂದು ಊರಿನಲ್ಲೂ ನಮ್ಮ ಹೃದ್ರೋಗಿಗಳಿದ್ದಾರೆ. ಹೋದ ಕಡೆಯಲೆಲ್ಲಾ ಅವರೇ ಬಂದು ಮಾತನಾಡಿಸಿ ಬೆಂಬಲ ಸೂಚಿಸಿದ್ದಾರೆ. ನೀವು ಗೆಲ್ಲಬೇಕು ಸರ್ ಎಂದು ಆಶೀರ್ವದಿಸಿದ್ದಾರೆ. ಆದ್ದರಿಂದ ನನಗೆ ಗೆಲುವಿನ ವಿಶ್ವಾಸವಿದೆ. ರಾಜ್ಯದಲ್ಲೂ ಬಿಜೆಪಿ ಸಹ 20ಕ್ಕೂ ಹೆಚ್ಚು ಸ್ಥಾನಗಳನ್ನು ಗೆಲ್ಲಲಿದ್ದು ಮೋದಿಯವರು ಮತ್ತೆ 3ನೇ ಬಾರಿಗೆ ಈ ದೇಶದ ಪ್ರಧಾನಿಯಾಗಲಿದ್ದಾರೆ ಎಂದ ಅವರು ನಾನು ಗೆದ್ದರೂ ಸಹ ಪ್ರತಿದಿನ 2 ಗಂಟೆ ಜನರ ಸೇವೆ ಮಾಡುತ್ತೇನೆ ಎಂದರು. ಈ ಸಂದರ್ಭದಲ್ಲಿ ವೈದ್ಯಕೀಯ ಅಧೀಕ್ಷಕ ಡಾ. ಕೆ.ಎಸ್. ಸದಾನಂದ, ಡಾ. ಸಂತೋಷ್, ಡಾ. ಜಯಪ್ರಕಾಶ್, ಡಾ. ವಿಶ್ವನಾಥ್, ಡಾ. ಕುಮಾರ್, ಡಾ. ಶಿಸಿರ್ ಮಿರ್ಜಾ, ಡಾ. ಸೌಜನ್ಯ, ಹಿರಿಯ ಶುಶ್ರೂಷಾಧಿಕಾರಿ ಹರೀಶ್‌ಕುಮಾರ್, ವಾಣಿ, ಚಂಪಕಮಾಲ ಹಾಜರಿದ್ದರು.



# ಡಾ.ರಾಜ್‌ಕುಮಾರ್ ಜಯಂತಿ

**ಮೈಸೂರು:** ನಗರದ ಡಾ.ರಾಜ್‌ಕುಮಾರ್ ಕಲಾಸೇವಾ ಟ್ರಸ್ಟ್ ವತಿಯಿಂದ ಕೊಡುಗೈ ದಾನಿ, ಬಡವರ ಬಂಧು, ಕಲಾಪೋಷಕ ಮೈಸೂರು ಜಯರಾಂ ಅವರ ನೇತೃತ್ವದಲ್ಲಿ ನಿರಂತರವಾಗಿ ಒಂದು ವಾರಗಳ ಕಾಲ ನಾದಬ್ರಹ್ಮ ಸಭಾಂಗಣದಲ್ಲಿ ಆಯೋಜಿಸಿದ್ದ ಡಾ.ರಾಜ್‌ಕುಮಾರ್ 96ನೇ ಜಯಂತ್ಯೋತ್ಸವ ಇಂದು ವಿಜೃಂಬಣೆಯಿಂದ ಸಂಪನ್ನಗೊಂಡಿತು.

ಏ.23ರಂದು ಡಾ.ಪಿ.ಬಿ.ಶ್ರೀನಿವಾಸ್ ಅಣ್ಣಾವ್ರಿಗಾಗಿ ಹಾಡಿರುವ ಗೀತೆಗಳು, ಏ.24ರಂದು ಅಣ್ಣಾವ್ರು ಹಾಡಿರುವ ಏಕವ್ಯಕ್ತಿ (ಸೋಲೋ) ಗೀತೆಗಳು. ಏ.25ರಂದು ಅಣ್ಣಾವ್ರು ಸಹನಟರುಗಳಿಗೆ ಹಾಡಿರುವ ಗೀತೆಗಳು, ಏ.26ರಂದು ಅಣ್ಣಾವ್ರ ಚಿತ್ರಗಳ ಮಹಿಳಾ ಪ್ರಧಾನ ಗೀತೆಗಳು ಮತ್ತು ಅಣ್ಣಾವ್ರು ಹಾಡಿರುವ ವಿರಸ ಗೀತೆಗಳು, ಏ.28 ಹಾಗೂ ಏ.29ರಂದು ರಂದು ಅಣ್ಣಾವ್ರು ಹಾಡಿರುವ ಯುಗಳ ಗೀತೆಗಳು, ಏ.30ರಂದು ಇತರೆ ಗಾಯಕರುಗಳು ಅಣ್ಣಾವ್ರಿಗಾಗಿ ಹಾಡಿರುವ ಗೀತೆಗಳು ಮತ್ತು ಅಣ್ಣಾವ್ರು ಹಾಡಿರುವ ಭಕ್ತಿಗೀತೆಗಳನ್ನು ನಗರದ ನುರಿತ ಕಲಾವಿದರಿಂದ ಸುಶ್ರಾವ್ಯವಾಗಿ ಪ್ರಸ್ತುತಪಡಿಸಲಾಯಿತು. ಮೈಸೂರು ಜಯರಾಂ ಯುವ ಕಲಾವಿದರುಗಳಿಗೆ ಅವಕಾಶ ಕಲಿಸಿ, ಅವರನ್ನು ಮುಖ್ಯವಾಹಿನಿಗೆ ತರಬೇಕೆಂದು ಅವಿರತ ಪ್ರಯತ್ನ ನಡೆಸುತ್ತಿದ್ದಾರೆ.

ಮೈಸೂರಿನ ನಾದಬ್ರಹ್ಮ ಸಭಾಂಗಣದಲ್ಲಿ ಕುಳಿತು ಡಾ.ರಾಜ್‌ರವರ ಹಾಡುಗಳನ್ನು ಕೇಳುವಾಗ ಸುಮಾರು 45 ವರ್ಷಗಳ ಹಿಂದೆ ಕೇಳಿ ಹೋದ ಅನುಭವವಾಯಿತು. ಡಾ.ರಾಜ್ ಧ್ವನಿ ಗಾಯಕರು ಹಾಗೂ ಟ್ರಸ್ಟ್‌ನ ಅಧ್ಯಕ್ಷರೂ ಆದ ಮೈಸೂರು ಜಯರಾಂ ಅವರ ಪರಿಕಲ್ಪನೆ, ಯೋಚನೆ, ಆಲೋಚನೆ ಹಾಗೂ ಗಾಯನಕ್ಕೆ ಪ್ರೇಕ್ಷಕರು ಮನಸೋತು ಕೊಂಡಾಡಿ ಹೊಗಳಿದರು. 7 ದಿನಗಳ ಕಾರ್ಯಕ್ರಮ ಮಾಡುವುದಕ್ಕೆ ಜಯರಾಂ ಅವರಿಗೆ ಜಯರಾಂ ಅವರೇ ಸರಿ ಸಾಟಿ. ಅವರ ಧೈರ್ಯ ಮತ್ತು ಅವರು ಅಣ್ಣಾವ್ರ ಬಗ್ಗೆ ಇಟ್ಟಿರುವ ಅಗಾಧವಾದ ಭಕ್ತಿ ಅಭಿಮಾನಕ್ಕೆ ಕನ್ನಡಿಗರಾಗಿ ನಾವು ಹೆಮ್ಮೆ ಪಡಬೇಕು. ಲಕ್ಷ್ಮೀಪುರಂ, ಚಾಮುಂಡಿಪುರಂ ಮತ್ತು ಕೃಷ್ಣಮೂರ್ತಿಪುರಂಗೆ ಹೊಂದಿಕೊಂಡಿಕೊಂಡಿರುವ ಈ ಸಭಾಂಗಣ ವಿಶೇಷ ಅನುಭವ ನೀಡುತ್ತದೆ. ಎಂದು ಸಂತೋಷ ವ್ಯಕ್ತಪಡಿಸಿ ಹರಸಿದ ಹಿರಿಯ ನಾಗರೀಕರು. ಇಡೀ ಸಭಾಂಗಣ ಒಂದು ವಾರಗಳ ಕಾಲ ತುಂಬಿ ತುಳುಕಿತ್ತು. ಕಿರಿಯರು, ಹಿರಿಯರು ಎನ್ನದೇ ಎಲ್ಲ ವಯಸ್ಸಿನ ಪ್ರೇಕ್ಷಕರು ಆಗಮಿಸಿ ಅಣ್ಣಾವ್ರ ಹಾಡುಗಳನ್ನು ಹೃನ್ಮನಸಿನಿಂದ ಸವಿದರು.



## ಪ್ರಜ್ವಲ್ ಪ್ರಕರಣದಲ್ಲಿ ದೇವೇಗೌಡರ ಹೆಸರನ್ನು ತರಬಾರದು

**ಚನ್ನಪಟ್ಟಣ:** ಜವಾಬ್ದಾರಿಯುತ ಸ್ಥಾನದಲ್ಲಿರುವ ಸಂಸದ ಪ್ರಜ್ವಲ್ ರೇವಣ್ಣ ಅವರು ನೂರಾರು ಮಹಿಳೆಯರ ಜೊತೆ ಅಸಭ್ಯವಾಗಿ ನಡೆದುಕೊಂಡು ಅದನ್ನು ಚಿತ್ರೀಕರಣ ಮಾಡಿಕೊಂಡಿರುವ ಪೆನ್‌ಡ್ರೈವ್ ಇಂದು ರಾಜ್ಯದಲ್ಲಿ ದೊಡ್ಡ ಸದ್ದು ಮಾಡಿದ್ದು ಅವರು ಯಾವುದೇ ದೇಶದಲ್ಲಿದ್ದರು ಅವರನ್ನು ಬಂಧಿಸಿ ಅವರ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳಬೇಕು. ಜೊತೆಗೆ ಸಂತ್ರಸ್ಥೆಯರಿಗೆ ಈ ಪ್ರಕರಣದಿಂದ ದೊಡ್ಡ ಆಘಾತವಾಗಿದ್ದು ಸರ್ಕಾರವು ಈ ಸಂತ್ರಸ್ಥೆಯರಿಗೆ ಆತ್ಮಸ್ಥೈರ್ಯ ತುಂಬುವ ಕೆಲಸ ಮಾಡಬೇಕು, ಅವರಿಗೆ ಆರ್ಥಿಕವಾಗಿ, ಸಾಮಾಜಿಕವಾಗಿ ನೈತಿಕ ಬಲ ತುಂಬಬೇಕಿದೆ ಎಂದು ರಮೇಶ್‌ಗೌಡ ಒತ್ತಾಯಿಸಿದರು. ಪ್ರಧಾನಿ ದೇವೇಗೌಡರು ರಾಜ್ಯದ ಮಹನೀಯರಲ್ಲಿ ಒಬ್ಬರಾಗಿದ್ದಾರೆ. ರೈತಾಪಿ ವರ್ಗದಲ್ಲಿ ಹುಟ್ಟಿ ಗುತ್ತಿಗೆದಾರರಾಗಿ, ರಾಜಕಾರಣಿಯಾಗಿ, ವಿರೋಧ ಪಕ್ಷದ ನಾಯಕರಾಗಿ, ಮುಖ್ಯಮಂತ್ರಿಯಾಗಿ, ಪ್ರಧಾನಿಯಾಗಿ ರಾಜ್ಯ ಮತ್ತು ದೇಶದ ನೀರಾವರಿ ಯೋಜನೆಗಳಿಗೆ ತಮ್ಮದೇ ಕೊಡುಗೆ ನೀಡಿದ್ದಾರೆ. ಇಂತಹ ಮಹಾನ್ ನಾಯಕರ ಮೊಮ್ಮಗ ಇಂದು ರಾಜ್ಯವೇ ತಲೆತಗ್ಗಿಸುವಂತೆ ದೊಡ್ಡ ಕರ್ಮಕಾಂಡದಲ್ಲಿ ಸಿಲುಕಿರುವುದು ಖಂಡನೀಯವಾಗಿದೆ. ಆದರೆ ಈ ಪ್ರಕರಣದಲ್ಲಿ ದೇವೇಗೌಡರಿಗೆ ಅಪಮಾನ ಮಾಡುವಂತೆ ಅವರ ಹೆಸರನ್ನು ಬಳಕೆ ಮಾಡುವುದು ಸರಿಯಲ್ಲ. ದೇವೇಗೌಡರು ಎಂದೂ ವ್ಯಕ್ತಿತ್ವವನ್ನು ಕಳೆದುಕೊಂಡವರಲ್ಲ ಎಂದು ರಮೇಶ್‌ಗೌಡರು ಅಭಿಪ್ರಾಯಿಸಿದರು.

# ಶರಣರ ಬದುಕು ಎಲ್ಲರಿಗೂ ಆದರ್ಶ

## ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ಸಿ. ಸೋಮಶೇಖರ್ ಅನಿಸಿಕೆ

**ಮೈಸೂರು:** ಶರಣರ ಬದುಕು ಸರ್ವಕಾಲಕ್ಕೂ ಆದರ್ಶವಾದುದುದಾಗಿದೆ ಎಂದು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಡಾ. ಸಿ. ಸೋಮಶೇಖರ್ ರವರು ಊಟಿಯ ತೀಟಕಲ್‌ನ ಜೆಎಸ್‌ಎಸ್ ಪಬ್ಲಿಕ್ ಶಾಲಾಆವರಣದಲ್ಲಿ ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ ಶ್ರೀ ಸುತ್ತೂರು ಕ್ಷೇತ್ರ, ಜೆಎಸ್ ಎಸ್ ಮಹಾವಿದ್ಯಾಪೀಠ ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಗಳ ಸಂಯುಕ್ತಾಶ್ರಯದಲ್ಲಿ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯಸಾನ್ನಿಧ್ಯದಲ್ಲಿ ಮೇ 4 ರವರೆಗೆ ಸಾರ್ವಜನಿಕರಿಗಾಗಿ ಆಯೋಜಿಸಿರುವ ಜೀವನೋತ್ಸಾಹ ಶಿಬಿರವನ್ನು ಉದ್ಘಾಟಿಸಿ ಶರಣ ಸಂಸ್ಕೃತಿ ಕುರಿತು ಮಾತನಾಡುತ್ತ ತಿಳಿಸಿದರು.

ನಡೆ-ನುಡಿಗಳಲ್ಲಿ ಅಂತರವಿರದ ಜೀವನ ಶರಣರದಾಗಿತ್ತು. ಶರಣರು ಕರ್ಮ ಸಿದ್ಧಾಂತವನ್ನು ಕಾಯಕ ಸಿದ್ಧಾಂತವಾಗಿಸಿದವರು. ಅವರ ನಡೆನುಡಿಗಳಲ್ಲಿ ಸಮನ್ವಯವಿತ್ತು. ಅರಿವು ಆಚಾರದ ಬದುಕು ಅವರದಾಗಿತ್ತು. ಅವರ ವಚನಗಳು ಅಂತರಂಗದ ಅನುಭಾವದ ನುಡಿಗಳಾಗಿವೆ. ಜನವಾಣಿಯನ್ನು ದೇವವಾಣಿಯನ್ನಾಗಿಸಿದುದು ಶರಣ ಸಂಸ್ಕೃತಿ. ಕಾಯಕದಲ್ಲಿ ನಿರತನಾದಡೆ ಗುರುದರ್ಶನವಾದರು ಮರೆಯಬೇಕು, ಲಿಂಗ ಪೂಜೆಯಾದರೂ ಮರೆಯಬೇಕು ಎಂದು ಹೇಳುವ ಶರಣರ ಮಾತುಗಳು ಕಾಯಕಕ್ಕೆ ಅವರು ನೀಡಿದ ಪ್ರಾಶಸ್ತ್ಯವನ್ನು ಸಾರಿ ಹೇಳುತ್ತದೆ ಎಂದು ಹೇಳಿದರು.

ಪ್ರಜಾವಾಣಿ ಪತ್ರಿಕೆಯ



ಕಾರ್ಯನಿರ್ವಾಹಕ ಸಂಪಾದಕ ರವೀಂದ್ರ ಭಟ್ಟರವರು ಪತ್ರಕರ್ತರಾದವರು ಸಾಮಾಜಿಕ ಬದ್ಧತೆಯನ್ನು ಹೊಂದಿರಬೇಕು. ಹಿಂದೆ ಪತ್ರಕರ್ತರ ಜವಾಬ್ದಾರಿ ಬಹಳ ಹೆಚ್ಚಾಗಿತ್ತು, ಅದನ್ನೆ ಧರ್ಮವನ್ನಾಗಿಸಿಕೊಂಡಿದ್ದರು, ಆದರೆ ಈಗ ಉದ್ಯಮವಾಗಿದೆ. ಸಾಮಾಜಿಕ ಜಾಲತಾಣಗಳು ಬಂದ ಮೇಲೆ ಜನರ ಮನೋಭಾವ ಮತ್ತು ಜೀವನ ಪದ್ಧತಿಯು ಬದಲಾಗಿದೆ. ಮುದ್ರಣ ಮಾಧ್ಯಮಕ್ಕಿಂತ ದೃಶ್ಯ ಮಾಧ್ಯಮ ಬಹಳ ಪರಿಣಾಮಕಾರಿಯಾಗಿ ಬೆಳೆದಿದೆ. ಪತ್ರಕರ್ತರಾದವರು ಸಕಾರಾತ್ಮಕ ಲೇಖನಗಳಿಗೆ ಹೆಚ್ಚು ಪ್ರಾಮುಖ್ಯತೆ ಕೊಡಬೇಕು. ಗ್ರಂಥಗಳನ್ನು ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು. ಪತ್ರಿಕಾ ಧರ್ಮವನ್ನು ಪತ್ರಕರ್ತರಾದವರು ಯಾವಾಗಲೂ ಪಾಲಿಸಬೇಕು ಎಂದು ತಿಳಿಸಿದರು. ಬೆಳಗಾವಿ ಜಿಲ್ಲೆ ಅಥಣಿ ತಾಲ್ಲೂಕಿನ ಶೇಗುಣಸಿಯ ವಿರಕ್ತಮಠದ ಡಾ. ಶ್ರೀ ಮಹಾಂತ ಪ್ರಭುಸ್ವಾಮಿಗಳು ಮನಸ್ಸನ್ನು ಪರಿಶುದ್ಧಗೊಳಿಸಿಕೊಂಡಲ್ಲಿ ನಿಶ್ಚಿಂತ ಬದುಕು ಸಾಧ್ಯ ಎಂದು ತಿಳಿಸಿದರು.

ಮಾನವನು ನೆಮ್ಮದಿಯ ಜೀವನವನ್ನು ನಡೆಸಲು ಚಿಂತೆಯಿಂದ ವಿಮುಕ್ತನಾಗಬೇಕು. ಸದಾ ಪರಮಾತ್ಮನನ್ನು ಕುರಿತು ಆಲೋಚನೆ ಮಾಡುತ್ತಿದ್ದಲ್ಲಿ ಸಂತೋಷವನ್ನು ಕಾಣಲು ಸಾಧ್ಯವಾಗುತ್ತದೆ. ನಾವು ಜಗತ್ತಿನಲ್ಲಿರುವ ಸಕಲ ಜೀವ ರಾಶಿಗಳ ಮೇಲೆ ಪ್ರೇಮವನ್ನಿಟ್ಟುಕೊಳ್ಳುವುದೆ ತಪಸ್ಸಾಗಿದೆ. ನಿರ್ಮಲ ಮನಸ್ಸು ನಿಶ್ಚಿಂತ ಜೀವನಕ್ಕೆ ಕಾರಣವಾಗಿದೆ ಎಂದು ಹೇಳಿದರು.

ಬೆಳಗ್ಗೆ ಸಾಮೂಹಿಕ ಪ್ರಾರ್ಥನೆ, ಯೋಗಾಭ್ಯಾಸ-ಧ್ಯಾನದಲ್ಲಿ ಉತ್ಸಾಹದಿಂದ ಪಾಲ್ಗೊಂಡರು. ಸಂಜೆ ದೇಸಿ ಆಟಗಳನ್ನು ಆಡಿದರು. ಸಾಮೂಹಿಕ ಪ್ರಾರ್ಥನೆ ನಂತರ ಶಿಬಿರಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮ ನೀಡಿದರು ಶಿಬಿರದಲ್ಲಿ ಸಾಂಗ್ಲಿ ಜಿಲ್ಲೆ, (ಮಹಾರಾಷ್ಟ್ರ) ಕಲಬುರಗಿ, ವಿಜಯಪುರ, ಬೆಳಗಾವಿ, ಬಾಗಲಕೋಟೆ, ಧಾರಾವಾಡ, ದಾವಣಗೆರೆ, ಶಿವಮೊಗ್ಗ, ಚಿಕ್ಕಮಗಳೂರು, ತುಮಕೂರು, ಬೆಂಗಳೂರು, ಹಾಸನ ಹಾಗೂ ಮೈಸೂರು ಜಿಲ್ಲೆಗಳಿಂದ 230ಕ್ಕೂ ಹೆಚ್ಚು ಶಿಬಿರಾರ್ಥಿಗಳು ಪಾಲ್ಗೊಂಡಿದ್ದಾರೆ.

# ಶ್ರೀನಿವಾಸ ಪ್ರಸಾದ್‌ಗೆ ಶ್ರದ್ಧಾಂಜಲಿ

**ಮೈಸೂರು:** ನಗರದ ಕಂಸಾಳೆ ಮಾದೇವಯ್ಯ ವೃತ್ತದಲ್ಲಿ ಅನಾರೋಗ್ಯದಿಂದ ಮೃತಪಟ್ಟ ಸಂಸದ ವಿ ಶ್ರೀನಿವಾಸ ಪ್ರಸಾದ್ ಅವರಿಗೆ ಡಾಕ್ಟರ್ ಯತೀಂದ್ರ ಯುವ ಬ್ರಿಗೇಡ್ ವತಿಯಿಂದ ಮೇಣದ ಬತ್ತಿ ಬೆಳಗಿಸಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಸಂತಪ್ಪ ಸಲ್ಲಿಸಲಾಯಿತು. ಸಂತಾಪ ಸಭೆಯಲ್ಲಿ ಮಾಜಿನಗರಪಾಲಿಕ ಸದಸ್ಯರಾದ ಸುನಿಲ್, ವಿ. ಮಂಜುನಾಥ್, ಕೆಆರ್ ಬ್ಯಾಂಕ್ ಉಪಾಧ್ಯಕ್ಷರಾದ ಬಸವರಾಜ ಬಸಪ್ಪ, ಕೆಪಿಸಿಸಿ ಸದಸ್ಯರಾದ ನಜರ್ಬಾದ್ ನಟರಾಜ್, ಡಾಕ್ಟರ್ ಯತೀಂದ್ರ ಯುವ ಬ್ರಿಗೇಡ್ ಅಧ್ಯಕ್ಷರಾದ ಕಂಸಾಳೆ ರವಿ, ರವಿತೇಜ, ನವೀನ್ ಕೆಂಪಿ, ಗೌರಿಶಂಕರ ನಗರದ ಶಿವು, ಮೈಲಾರಿ, ಲೋಕೇಶ್ ಇನ್ನಿತರರು ಸಂತಾಪ ಸಭೆಯಲ್ಲಿ ಹಾಜರಿದ್ದರು.



# ರಾಜಕಾರಣಿಗಳು ಇಚ್ಛಾಶಕ್ತಿಯಿಂದ ಕೆಲಸ ಮಾಡಲಿ: ನಿಂಗೇಗೌಡ

**ಚನ್ನಪಟ್ಟಣ:** ಮೇಕೆದಾಟು ಅಣೆಕಟ್ಟೆ ನಿರ್ಮಾಣದ ಬಗ್ಗೆ ರಾಜಕಾರಣಿಗಳು ಇಚ್ಛಾಶಕ್ತಿಯಿಂದ ಕೆಲಸ ಮಾಡಬೇಕು ಎಂದು ನಿವೃತ್ತ ಪ್ರಾಂಶುಪಾಲರಾದ ನಿಂಗೇಗೌಡ (ಎನ್‌ಜಿ) ಅವರು ಆಗ್ರಹಿಸಿದರು.

ಕಾವೇರಿ ನದಿ ನೀರಿನ ಹಂಚಿಕೆಯಲ್ಲಿ ಸಂಕಷ್ಟ ಸೂತ್ರ ರಚಿಸುವ ಜೊತೆಗೆ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಆಗ್ರಹಿಸಿ ಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷರಾದ ರಮೇಶ್ ಗೌಡರ ನೇತೃತ್ವದಲ್ಲಿ 2023ರ ಅಕ್ಟೋಬರ್ 5 ರಿಂದ ನಿರಂತರವಾಗಿ ಹೋರಾಟ ಮಾಡುತ್ತಿದ್ದು ಮಂಗಳವಾರ ನಡೆದ 209 ನೇ ದಿನದ ಹೋರಾಟದಲ್ಲಿ ಮಾತನಾಡಿದ ಅವರು ಇಂದು ಬರ ಮತ್ತು ಬಿಸಿಲಿನ ತಾಪದಿಂದ ಜಲಕ್ಷಾಮ ಯಾವ ಮಟ್ಟಕ್ಕೆ ಎದುರಾಗಿದೆ ಎಂದರೆ ಸೂರ್ಯನ ಕಿರಣಗಳು ಬೀಳದ ಸುಳಿಗಳಲ್ಲಿ ಸಹ ನೀರು ಸಂಪೂರ್ಣ ಬತ್ತಿಹೋಗಿದ್ದು, ಸದಾ ನೀರಿನಲ್ಲೇ ಇರುವ ಮೊಸಳೆ, ಮೀನು, ಜಲಚರ ಸಂಕುಲ ಸಾವನ್ನಪ್ಪಿರುವ ದೃಶ್ಯ ಮನಕಲಕುವಂತಾಗಿದೆ. ಅದರಲ್ಲೂ ಕಾವೇರಿ ನದಿ ಹುಟ್ಟಿ ಹರಿಯುವ ಕೊಡಗು ಜಿಲ್ಲೆಯ ದುಬಾರೆ ಪ್ರವಾಸಿ ತಾಣದಲ್ಲಿ ಕಾವೇರಿ ಸಂಪೂರ್ಣ ಬರಿದಾಗಿದ್ದು, ಬೇಸಿಗೆಯಲ್ಲಿ ಪ್ರವಾಸಿಗರನ್ನು ಸೆಳೆಯುತ್ತಿದ್ದ ಈ ತಾಣ ನೀರು ಇಲ್ಲದೆ, ಪ್ರವಾಸಿಗರೂ ಇಲ್ಲದೆ ಬಿಕೋ ಎನ್ನುತ್ತಿದ್ದು, ಇಲ್ಲಿನ ಸಾಕಾನೆಗಳಿಗೆ ಕೊಳವೆ ಬಾವಿಯ ನೀರನ್ನು ಕುಡಿಸುವಂತಾಗಿದ್ದು ಆನೆಗಳ ಮೈ ತೊಳೆಯಲೂ ಸಹ ನೀರಿಲ್ಲವಾಗಿದೆ. ಈ ಎಲ್ಲವೂ ಕಾವೇರಿ ನೀರನ್ನು ಉಳಿಸಿಕೊಳ್ಳುವಲ್ಲಿ ರಾಜಕಾರಣಿಗಳ ಇಚ್ಛಾಶಕ್ತಿಯ ಕೊರತೆಯೇ ಕಾರಣವಾಗಿದೆ ಎಂದು ವಿಷಾಧಿಸಿದರು. ನಮ್ಮ ಹೋರಾಟ ಮಳೆ ಹೆಚ್ಚಾಗಿ ಬಂದಾಗ ಕಾವೇರಿಯಿಂದ ಸಮುದ್ರದ ಪಾಲಾಗುವ ನೀರನ್ನು ಮೇಕೆದಾಟು ಅಣೆಕಟ್ಟೆಯಲ್ಲಿ ಸಂಗ್ರಹ ಮಾಡಿಕೊಂಡು ಕಷ್ಟದ ಸಮಯದಲ್ಲಿ ಬಳಕೆ ಮಾಡಿಕೊಳ್ಳುವುದಾಗಿದೆ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಮಲತಾಯಿ ಧೋರಣೆ ಮಾಡದೆ ಚುನಾವಣೆ ಬಳಿಕ ಮೇಕೆದಾಟು ಯೋಜನೆಗೆ ಅನುಮತಿ ನೀಡಬೇಕು ಎಂದು ಮನವಿ ಮಾಡಿದರು. ವೇದಿಕೆ ರಾಜ್ಯಾಧ್ಯಕ್ಷ ರಮೇಶ್‌ಗೌಡರು ಮಾತನಾಡಿ, ಇಂದು ಬಿಸಿಲಿನ ತಾಪಮಾನ 43 ಡಿಗ್ರಿಗೆ ಏರಿಕೆಯಾಗಿದ್ದು ಪ್ರಾಣಿ, ಪಕ್ಷಿಗಳಿಗೆ ಮನೆಯ ಮೇಲೆ ಇಡುತ್ತಿರುವ ನೀರಿನಲ್ಲಿ ಇಂದು ಪಕ್ಷಿಗಳು ಈಜಾಡಿ ಬಿಸಿಲಿನ ತಾಪ ತಣಿಸಿಕೊಳ್ಳುತ್ತಿವೆ ಎಂದರೆ ಮುಂದಿನ ದಿನ ತಾಪಕ್ಕೆ ಪಕ್ಷಿಗಳು ಸುಟ್ಟು ಬೂದಿಯಾಗುವ ಪರಿಸ್ಥಿತಿ ಬಂದರೂ ಅಚ್ಚರಿ ಇಲ್ಲ. ಈ ನಿಟ್ಟಿನಲ್ಲಿ ಮುಂದಿನ ದಿನಗಳಲ್ಲಿ ಈ ಪರಿಸ್ಥಿತಿ ಬಾರದಂತೆ ಕಾವೇರಿ ನದಿ ನೀರು ಹಂಚಿಕೆಯಲ್ಲಿ ಕೊಡಗಿನ ಮಳೆ ಆಧಾರದ ಮೇಲೆ ಕಾವೇರಿ ನದಿ ನೀರು ಹಂಚಿಕೆ ಸಂಕಷ್ಟ ಸೂತ್ರ ರಚಿಸಲು ಮುಂದಾಗಲು ಹಾಗೂ ಮೇಕೆದಾಟು ಅಣೆಕಟ್ಟೆ ನಿರ್ಮಾಣ ಮಾಡಬೇಕು ಎಂದು ಆಗ್ರಹಿಸಿದರು. ಸಂದರ್ಭದಲ್ಲಿ ವೇದಿಕೆ ಜಿಲ್ಲಾಧ್ಯಕ್ಷ ಬೇವೂರು ಯೋಗೀಶ್‌ಗೌಡ, ಚಿಕ್ಕಣಪ್ಪ, ಪುಟ್ಟಪ್ಪಾಜಿ, ರಾಮಕೃಷ್ಣಪ್ಪ, ರಾಜು ಇದ್ದರು.



## ಉಚಿತ ಮೊಬೈಲ್ ರಿಪೇರಿ ಸೇವೆ ತರಬೇತಿಗೆ 8 ರಂದು ಸಂದರ್ಶನ

**ರಾಮನಗರ:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಮೊಬೈಲ್ ರಿಪೇರಿ ಸೇವೆ ಕುರಿತ 30 ದಿನಗಳ ಉಚಿತ ತರಬೇತಿಯು ಮೇ 8 ರಂದು ನೇರ ಸಂದರ್ಶನ ನಡೆಯಲಿದ್ದು, ರಾಜ್ಯದ ವಿವಿಧ ಜಿಲ್ಲೆಗಳ ಗ್ರಾಮೀಣ ಭಾಗದ ಆಸಕ್ತ ನಿರುದ್ಯೋಗಿ ಯುವಕ-ಯುವತಿಯರು ನೇರ ಸಂದರ್ಶನದಲ್ಲಿ ಭಾಗವಹಿಸಬಹುದಾಗಿದೆ. ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್ ಅಥವಾ ಜಾಬ್ ಕಾರ್ಡ್ ಹಾಗೂ ಆಧಾರ್ ಕಾರ್ಡ್ನ್ನು ಕಡ್ಡಾಯವಾಗಿ ಹೊಂದಿರುವ ಗ್ರಾಮೀಣ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9740982585, 9380162042, 9113880324 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸ್ಟ್ರಾಂಗ್ ರೂಂ ಪರಿಶೀಲನೆ

**ಮಂಡ್ಯ:** ಜಿಲ್ಲಾಧಿಕಾರಿ ಡಾ: ಕುಮಾರ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್ ಯತೀಶ್ ಅವರು ಇಂದು ಮಂಡ್ಯ ವಿಶ್ವವಿದ್ಯಾಲಯದಲ್ಲಿ ತೆರೆಯಲಾಗಿರುವ ಸ್ಟ್ರಾಂಗ್ ರೂಂಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

## ವಾರ್ತಾ ಇಲಾಖೆ ವಾಹನ ಚಾಲಕ ಮಂಜುನಾಥ್ ವಯೋನಿವೃತ್ತಿ

**ಮಂಡ್ಯ:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ 30 ವರ್ಷಗಳ ಸುದೀರ್ಘ ಕಾಲ ಸೇವೆ ಸಲ್ಲಿಸಿದ ಮಂಜುನಾಥ ಅವರು ಇಂದು ವಯೋನಿವೃತ್ತರಾಗಿದ್ದು, ಅವರನ್ನು ಇಲಾಖೆಯಿಂದ ಆತ್ಮೀಯವಾಗಿ ಬೀಳ್ಕೊಡಲಾಯಿತು. ಇದೇ ಸಂದರ್ಭದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕಿ ನಿರ್ಮಲ ಎಸ್.ಹೆಚ್ ಅವರು ಮಾತನಾಡಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಸಮನ್ವಯದಿಂದ ಕಾರ್ಯನಿರ್ವಹಿಸಿ ಮಂಜಣ್ಣ ಎಂದು ಹೆಸರುವಾಸಿಯಾಗಿದ್ದರು. ಇವರ ನಿವೃತ್ತಿ ಜೀವನ ಸುಖಕರ, ಆರೋಗ್ಯಕರವಾಗಿರಲಿ ಎಂದು ಶುಭಹಾರೈಸಿದರು. ಇದೇ ಸಂದರ್ಭದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಇಲಾಖೆಯ ಸಿಬ್ಬಂದಿಗಳಾದ ಪುಷ್ಪಲತಾ, ಚಲುವರಾಜು, ಸಿದ್ದೇಗೌಡ, ನಯನ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

## ಪ್ರಜ್ವಲ್ ರೇವಣ್ಣ ವಿರುದ್ಧ ಮಹಿಳೆಯರ ಆಕ್ರೋಶ



**ಹುಬ್ಬಳ್ಳಿ :** ಪ್ರಜ್ವಲ್ ರೇವಣ್ಣ ವಿರುದ್ಧ ಹುಬ್ಬಳ್ಳಿ ಧಾರವಾಡ ಮಹಾನಗರ ಮಹಿಳಾ ಕಾಂಗ್ರೆಸ್ ಅಧ್ಯಕ್ಷರಾದ ದೀಪಾ ನಾಗರಾಜ ಗೌರಿ ನೇತೃತ್ವದಲ್ಲಿ ಬಿಜೆಪಿ ವಿರುದ್ಧ ಮಹಿಳೆಯರ ಆಕ್ರೋಶ ಬ್ರಹತ್ ಪ್ರತಿಭಟನೆ ನಡೆಸಿದರು. ಪ್ರತಿಭಟನೆಯಲ್ಲಿ ಆರೋಗ್ಯ ಸಚಿವರು ದಿನೇಶ್ ಗುಂಡೂರಾವ್ ಶಾಸಕರಾದ ಪ್ರಸಾದ ಅಬ್ಬಯ್ಯ, ಶ್ರೀಮತಿ ಶಿವಲೀಲಾ ವಿನಯ್ ಕುಲಕರ್ಣಿ ಕೆಪಿಸಿಸಿ ಪ್ರಧಾನ್ ಕಾರ್ಯದರ್ಶಿ ಕವಿತಾ ರೆಡ್ಡಿ, ನಾಗರಾಜ ಗೌರಿ, ಸುಜಾತಾ ಮುನಿರಾಜ, ರಾಜೇಶ್ವರಿ ಪಾಟೀಲ್ , ಸುವರ್ಣ ಕಳಕುಂಟಲ್, ದೇವಕಿ ಬಾಳಮ್ಮ, ಜಂಗಿನವರ ಚೇತನಾ ಲಿಂಗದಳ ಕಲಾವತಿ ದತ್ತವಾಡ ಸಾವಿರಾರು ಮಹಿಳೆಯರು ಉಪಸ್ಥಿತರಿದ್ದರು.

## ನೇಹಾ ಹತ್ಯೆಗೈದ ಆರೋಪಿಯನ್ನು ಅವತ್ತೇ ಗಲ್ಲಿಗೇರಿಸಬೇಕಿತ್ತು: ಸಿ.ಎಂ. ಇಬ್ರಾಹಿಂ

**ಹುಬ್ಬಳ್ಳಿ:** ಹುಬ್ಬಳ್ಳಿಯಲ್ಲಿ ಎಂಸಿಎ ವಿದ್ಯಾರ್ಥಿನಿ ನೇಹಾರನ್ನು ಬರ್ಬರವಾಗಿ ಕೊಲೆ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ



ಮಾಜಿ ಕೇಂದ್ರ ಸಚಿವ ಸಿ.ಎಂ. ಇಬ್ರಾಹಿಂ ಪ್ರತಿಕ್ರಿಯೆ ನೀಡಿದ್ದಾರೆ.ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ನೇಹಾ ಕೊಲೆ ಮಾಡಿದ ಫಯಾಕ್ ನನ್ನು ಅವತ್ತೇ ಗಲ್ಲಿಗೇರಿಸಬೇಕಿತ್ತು ಎಂದು ಹೇಳಿದ್ದಾರೆ. ನೇಹಾ ಹೆಸರಿನಲ್ಲಿ ಬಿಜೆಪಿಯವರು ಮತ ಕೇಳುತ್ತಿದ್ದಾರೆ. ಪ್ರಜ್ವಲ್ 600 ಹುಡುಗಿಯರ ಸೀರೆ ಎಳೆದಿದ್ದಾನೆ. ಯಡಿಯೂರಪ್ಪ, ಪ್ರಹ್ಲಾದ್ ಜೋಶಿ ಏಕೆ ಮಾತನಾಡುತ್ತಿಲ್ಲ. ಪ್ರಧಾನಿ ಮೋದಿಯವರೇ ಇದೇನಾ ಅಚ್ಚೇ ದಿನ್ ಎಂದು ಪ್ರಶ್ನಿಸಿದ್ದಾರೆ.

# ಶ್ರೀನಿವಾಸ್ ಪ್ರಸಾದ್‌ಗೆ ಶ್ರದ್ಧಾಂಜಲಿ

**ಮೈಸೂರು:** ಅನಾರೋಗ್ಯದಿಂದ ಮೃತಪಟ್ಟ ಸಂಸದ ವಿ ಶ್ರೀನಿವಾಸ್ ಪ್ರಸಾದ್ ಅವರಿಗೆ ಕೃಷ್ಣಮೂರ್ತಿ ಪುರಂನಲ್ಲಿರುವ ಅಗಸ್ತ್ಯ ಕ್ರೆಡಿಟ್ ಕೋ ಆಪರೇಟಿವ್ ಸೊಸೈಟಿ ವತಿಯಿಂದ ಶ್ರದ್ಧಾಂಜಲಿ ಸಲ್ಲಿಸಲಾಯಿತು ಶ್ರದ್ಧಾಂಜಲಿ ಸಭೆಯಲ್ಲಿ ಸದ್ವಿದ್ಯಾ ಶಿಕ್ಷಣ ಸಂಸ್ಥೆಯ ನಿರ್ದೇಶಕರು ಹಾಗೂ ಅಗಸ್ತ್ಯ ಕ್ರೆಡಿಟ್ ಕೋ ಆಪರೇಟಿವ್ ಸೊಸೈಟಿಯ ಅಧ್ಯಕ್ಷರಾದ ಎಂ ಡಿ ಗೋಪಿನಾಥ್, ಉಪಾಧ್ಯಕ್ಷರಾದ ಎಂ ಎನ್ ಸೌಮ್ಯ, ನಿರ್ದೇಶಕರಾದ ಎಂ ಆರ್ ಬಾಲಕೃಷ್ಣ, ವಿಕ್ರಮ ಅಯ್ಯಂಗಾರ್, ನಾಗಶ್ರೀ. ಎನ್, ಕೆ ಎನ್ ಅರುಣ್, ಎಸ್ ರಾಜಮ್ಮ, ಪ್ರಭಾರ ಕಾರ್ಯದರ್ಶಿ ವೀಣಾ ಎನ್, ಹಾಗೂ ಸಿಬ್ಬಂದಿ ವರ್ಗದವರು ಸಂತಾಪ ಸಲ್ಲಿಸಿದರು



# ಬೌದ್ಧ ಧರ್ಮದ ಅನುಸಾರ ಶ್ರೀನಿವಾಸ ಪ್ರಸಾದ್ ಅಂತ್ಯಕ್ರಿಯೆ

**ಮೈಸೂರು:** ವಯೋಸಹಜ ಅನಾರೋಗ್ಯದಿಂದ ಸೋಮವಾರ ನಿಧನರಾದ ಸಂಸದ ವಿ.ಶ್ರೀನಿವಾಸ ಪ್ರಸಾದ್ ಅವರ ಅಂತ್ಯಕ್ರಿಯೆಯನ್ನು ಮಂಗಳವಾರ ಇಲ್ಲಿನ ಅಶೋಕಪುರಂನ ಡಾ.ಬಿ.ಆರ್.ಅಂಬೇಡ್ಕರ್ ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಟ್ರಸ್ಟ್ ಆವರಣದಲ್ಲಿ ಬೌದ್ಧ ಧರ್ಮದ ವಿಧಾನದಂತೆ ಸಾವಿರಾರು ಅಭಿಮಾನಿಗಳ ಸಮ್ಮುಖದಲ್ಲಿ ಸಕಲ ಸರ್ಕಾರಿ ಗೌರವದೊಂದಿಗೆ ನೆರವೇರಿಸಲಾಯಿತು.

ಥೇರಾ ಮಹಾಬೋಧಿ ಸಂಸ್ಥೆಯ ಆನಂದ್ ಭಂತೇಜಿ ನೇತೃತ್ವದಲ್ಲಿ 20 ಬಿಕ್ಕುಗಳು ಬೌದ್ಧ ಧರ್ಮದ ವಿಧಾನಗಳನ್ನು ನೆರವೇರಿಸಿದರು. ನಂತರ ಪೊಲೀಸರು ಗಾಳಿಯಲ್ಲಿ ಮೂರು ಸುತ್ತು ಗುಂಡು ಹಾರಿಸಿ ಗೌರವ ಸಲ್ಲಿಸಿದರು. ಈ ವೇಳೆ ಪೊಲೀಸ್ ಬ್ಯಾಂಡ್ ರಾಷ್ಟ್ರಗೀತೆ ನುಡಿಸಿತು. ಇದಕ್ಕೂ ಮುನ್ನ ಪ್ರಸಾದ್ ಹುಟ್ಟಿದ ಅಶೋಕಪುರಂನಲ್ಲಿ ಅಂತಿಮ ಯಾತ್ರೆ ನಡೆಯಿತು. ಮೈಸೂರು, ಚಾಮರಾಜನಗರ, ಮಂಡ್ಯ, ಹಾಸನ ಭಾಗದಿಂದ ಹರಿದು ಬಂದ ಸಾವಿರಾರು ಅಭಿಮಾನಿಗಳು ಅಂತಿಮ ನಮನ ಸಲ್ಲಿಸಿ, ಮೆರವಣಿಗೆಯಲ್ಲಿ ಹೆಜ್ಜೆ ಹಾಕಿದರು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ದರ್ಶನ ಪಡೆದು ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. ಒಡನಾಡಿ ಪಿಜಿಆರ್ ಸಿಂಧ್ಯ, ರಾಜವಂಶಸ್ಥ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಡಾ.ಸಿ.ಎನ್. ಮಂಜುನಾಥ್, ಶಾಸಕ ನರೇಂದ್ರಸ್ವಾಮಿ ಅಂತಿಮ ನಮನ ಸಲ್ಲಿಸಿದರು. ಬಳಿಕ ನಡೆದ ಮೆರವಣಿಗೆಯಲ್ಲಿ ಜನರು ಅಪಾರ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು. ಮನೋರಕ್ಷಿತ ಭಂತೇಜಿ, ಕಲ್ಯಾಣಸಿರಿ ಭಂತೇಜಿ, ಬೋಧಿದತ್ತ ಭಂತೇಜಿ, ನಾಗರತ್ನ ಭಂತೇಜಿ, ಬೋಧಿ ರತ್ನ ಭಂತೇಜಿ, ಸಮನರಿಯ ಭಂತೇಜಿ,



ಧರ್ಮಚಾರಿಗಳಾದ ಪುಟ್ಟಸ್ವಾಮಿ, ಬಸವರಾಜು ಹಾಗೂ 20 ಉಪಾಸಕರು ಅಂತ್ಯಕ್ರಿಯೆಯಲ್ಲಿ ಪಾಲ್ಗೊಂಡಿದ್ದರು. ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ.ಮಹದೇವಪ್ಪ, ಸಂಸದ ಪ್ರತಾಪ ಸಿಂಹ, ವಿಧಾನ ಪರಿಷತ್ ಸದಸ್ಯ ಎಚ್.ವಿಶ್ವನಾಥ್, ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ, ನಗರ ಪೊಲೀಸ್ ಆಯುಕ್ತ ರಮೇಶ್ ಬಾನೋತ್, ಡಿಸಿಪಿ ಜಾಹ್ನವಿ, ಉರಿಲಿಂಗಿ ಪೆದ್ದಿಮಠದ ಜ್ಞಾನ ಪ್ರಕಾಶ ಸ್ವಾಮೀಜಿ, ಬಿಜೆಪಿ ರಾಜ್ಯ ಘಟಕದ ಉಪಾಧ್ಯಕ್ಷ ಎನ್. ಮಹೇಶ್ ಪಾಲ್ಗೊಂಡಿದ್ದರು.

## ಸಾಮೂಹಿಕ ಉಪನಯನ

**ಮೈಸೂರು:** ಮೈಸೂರಿನಕೆ.ಆರ್.ಎಸ್.ರಸ್ತೆಯಲ್ಲಿರುವ ಮಂಟಿಯ ಸಮೀಪದ ಸಾಧನಹಳ್ಳಿ ಶ್ರೀ ಸಪ್ತರ್ಷಿಗುರುಕುಲ ಸೇವಾಕೇಂದ್ರದಲ್ಲಿ ಮೇ 26ನೇ ಭಾನುವಾರ ಸಾರ್ವಜನಿಕವಾಗಿ ಸಾಮೂಹಿಕ ಉಪನಯನಕಾರ್ಯಕ್ರಮವನ್ನುಏಪ ರ್ಡಿಸಲಾಗಿದೆ. ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಶ್ರೀ ಸಪ್ತರ್ಷಿಗುರುಕುಲ ಸೇವಾಕೇಂದ್ರದ ಪೀಠಾಧ್ಯಕ್ಷರಾದ ಶ್ರೀ ಅಭಿನವರಾಮಾನುಜಚಾರ್ಯರನ್ನು 9481319111 8861573934 ಸಂಪರ್ಕಿಸಬಹುದಾಗಿದೆ.

## ಕುಡಿತದ ಚಟಕ್ಕೆ ಯುವಕ ಬಲಿ

**ಹುಣಸೂರು:** ಅತಿಯಾದ ಕುಡಿತದ ದಾಸನಾಗಿದ್ದ 19 ವರ್ಷದ ಯುವಕನೋರ್ವ ಬಲಿಯಾಗಿರುವ ಘಟನೆ ನಗರದಲ್ಲಿ ನಡೆದಿದೆ. ತಾಲೂಕಿನ ಕಸಬಾ ಹೋಬಳಿಯ ರಾಮಪಟ್ಟಣದ ಲೇ.ಉಮೇಶ್- ರೇಣುಕಾರ ದಂಪತಿಯ ಏಕೈಕ ಪುತ್ರ ಆದಿತ್ಯ (19) ಮೃತಪಟ್ಟ ಯುವಕ.

**ಘಟನೆಯ ವಿವರ:** ಆದಿತ್ಯ ಹುಣಸೂರಿನ ರೇಣುಕಾ ಬಾರ್ ನಲ್ಲಿ ಕೆಲಸ ಮಾಡುತ್ತಿದ್ದ. ಸೋಮವಾರ ರಾತ್ರಿ ಬಾರ್ ನಲ್ಲಿ ಕೆಲಸ ಮುಗಿಸಿಕೊಂಡು ಅತಿಯಾದ ಮದ್ಯ ಸೇವಿಸಿ ತಾ.ಪಂ. ಕಚೇರಿ ಬಳಿಯ ಫಾಸ್ಟ್ ಫುಡ್ ನಿಲ್ಲಿಸುವ ಫುಟ್‌ಪಾತ್ ಬಳಿ ಮಲಗಿದ್ದಲ್ಲೇ ಮೃತಪಟ್ಟಿದ್ದಾನೆ. ವಿಷಯ ತಿಳಿದ ಆತನ ತಾಯಿ ರೇಣುಕಾ ಹಾಗೂ ಕುಟುಂಬದವರು ಶವವನ್ನು ಸ್ವಗ್ರಾಮಕ್ಕೆ ಕೊಂಡೊಯ್ದು ಅಂತ್ಯಕ್ರಿಯೆ ನಡೆಸಿದರು. ಕುಟುಂಬದವರು ಶವವನ್ನು ಕೊಂಡೊಯ್ದಿದ್ದರಿಂದಾಗಿ ಘಟನೆಗೆ ಸಂಬಂಧಿಸಿದಂತೆ ಯಾವುದೇ ಪ್ರಕರಣ ದಾಖಲಾಗಿಲ್ಲವೆಂದು ಪೊಲೀಸರು ತಿಳಿಸಿದ್ದಾರೆ.

## ಕಾಂಗ್ರೆಸ್ ಪ್ರಜ್ವಲ್ ಪ್ರಕರಣವನ್ನು ಎನ್‌ಡಿಎ ಅಪರಾಧ ಎನ್ನುವಂತೆ ಬಿಂಬಿಸುವ ಪ್ರಯತ್ನ: ಸಿ.ಟಿ.ರವಿ



**ರಾಯಚೂರು:** ಪ್ರಜ್ವಲ್ ರೇವಣ್ಣ ಪ್ರಕರಣ ಚುನಾವಣೆಗೆ ಪರೋಕ್ಷವಾಗಿ ಸಣ್ಣ ಪ್ರಮಾಣದ ಪ್ರಭಾವ ಬೀರುತ್ತದೆ. ಆದರೆ ಕಾಂಗ್ರೆಸ್ ಇದನ್ನು ಇಡೀ ಎನ್‌ಡಿಎ ಅಪರಾಧ ಎಂಬ ಥರ ಬಿಂಬಿಸುವ ಪ್ರಯತ್ನ ಮಾಡುತ್ತಿದೆ ಎಂದು ಮಾಜಿ ಸಚಿವ ಸಿ.ಟಿ.ರವಿ ಹೇಳಿದ್ದಾರೆ. ಅವರು ಪ್ರಜ್ವಲ್ ರೇವಣ್ಣ ಪ್ರಕರಣದ ಬಗ್ಗೆ ರಾಯಚೂರಿನ ಸಿಂಧನೂರಿನಲ್ಲಿ ಮಾತನಾಡಿ, ಪ್ರಾಥಮಿಕ ತನಿಖೆ ನಂತರ ಸತ್ಯಾಸತ್ಯತೆ ಹೊರ ಬರುತ್ತದೆ. ಸರ್ಕಾರವೇ ಎಸ್‌ಐಟಿ ರಚನೆ ಮಾಡಿದೆ, ತನಿಖೆಯಾಗಲಿ. ಇದಕ್ಕೆ ಸಂಬಂಧಪಟ್ಟಂತೆ ಹೆಚ್‌ಡಿಕೆ ಹೇಳಿಕೆಯನ್ನು ಒಪ್ಪುತ್ತೇವೆ ಎಂದು ಹೇಳಿದರು. ಈ ನೆಲದ ಕಾನೂನು ಒಬ್ಬರಿಗೊಂದು ಇನ್ನೊಬ್ಬರಿಗೊಂದು ಇಲ್ಲ. ಎಲ್ಲರಿಗೂ ಒಂದೇ ರೀತಿ ಅನ್ವಯಿಸುತ್ತದೆ. ತನಿಖೆಗೂ ಮುಂಚೆ ನಾವು ಯಾರನ್ನೂ ಅಪರಾಧಿ ಎಂದು ಘೋಷಣೆ ಮಾಡುವಂತಿಲ್ಲ. ತನಿಖೆ ನಂತರ ಸತ್ಯ ಏನು ಅನ್ನೋದು ಹೊರಬರುತ್ತೆ. ದೂರುದಾರರ ದೂರಿನಲ್ಲಿನ ಹೇಳಿಕೆ ಪ್ರಕಾರ, ಇದು ನಾಲ್ಕೈದು ವರ್ಷದ ಹಿಂದಿನ ಘಟನೆ. ನಾಲ್ಕೈದು ವರ್ಷದ ಹಿಂದೆ ಜನತಾದಳ ಕಾಂಗ್ರೆಸ್ ಜೊತೆ ಇತ್ತು ಅನ್ನೋದು ಇವರು ಮರೆತಿದ್ದಾರೆ. ತನಿಖೆ ಆಗಲಿ, ಸತ್ಯ ಏನೆಂಬುದು ಹೊರಬರಲಿ ಎಂದು ಹೇಳಿದರು. ಸುಳ್ಳು ಮತ್ತು ಕಾಂಗ್ರೆಸ್ ಒಂದೇ ನಾಣ್ಯದ ಎರಡು ಮುಖಗಳು. ಸುಳ್ಳಿನಿಂದಲೇ ಕಾಂಗ್ರೆಸ್ ಬದುಕಿದೆ. ಕಾಂಗ್ರೆಸ್ ಗೆ ಸುಳ್ಳೇ ಆಕ್ಸಿಜನ್ ಇದ್ದಂಗೆ. ಸುಳ್ಳು ಇಲ್ಲದಿದ್ದರೆ ಕಾಂಗ್ರೆಸ್ ಸತ್ತು ಹೋಗುತ್ತದೆ. ಸುಳ್ಳನ್ನೇ ಉಸಿರಾಗಿಸಿಕೊಂಡು ಅವರು ಬದುಕಿದ್ದಾರೆ ಎಂದರು.

## ಭಾರಿ ಗಾತ್ರದ ಹೆಬ್ಬಾವು ರಕ್ಷಣೆ

**ಚಾಮರಾಜನಗರ:** ತಾಲೂಕಿನ ಹೆಬ್ಬಸೂರು ಗ್ರಾಮದ ತೋಟದ ಮನೆಯಲ್ಲಿ ಕಾಣಿಸಿಕೊಂಡ ಭಾರಿ ಗಾತ್ರದ ಹೆಬ್ಬಾವುವನ್ನು ರಕ್ಷಣೆ ಮಾಡಲಾಗಿದೆ.ಗ್ರಾಮದ ಶಶಿಕುಮಾರ್ ಎಂಬುವವರು ತೋಟದ ಮನೆಯಲ್ಲಿ ಮಂಗಳವಾರ ಮಧ್ಯಾಹ್ನ ಭಾರಿ ಗಾತ್ರದ ಹೆಬ್ಬಾವು ಕಾಣಿಸಿಕೊಂಡಿದೆ. ಹೆಬ್ಬಾವು ನೋಡಿ ಭಯಗೊಂಡ ಶಶಿಕುಮಾರ್ ಕೂಡಲೇ ತೋಟದ ಮಾಲೀಕ ಸ್ನೇಕ್ ಅಶೋಕ್ ಅವರಿಗೆ ದೂರವಾಣಿ ಕರೆ ಮಾಡಿ ತಿಳಿಸಿದ್ದಾರೆ. ಸ್ಥಳಕ್ಕೆ ಆಗಮಿಸಿದ ಸ್ನೇಕ್ ಅಶೋಕ್ ಅವರು ಹೆಬ್ಬಾವನ್ನು ಸುರಕ್ಷಿತವಾಗಿ ಹಿಡಿದು ಕಾಡಿಗೆ ಬಿಟ್ಟರು. ಬಳಿಕ ಕುಟುಂಬದವರು ನಿಟ್ಟುಸಿರು ಬಿಟ್ಟರು.



# ಮಲೇರಿಯಾಮುಕ್ತ ಜಿಲ್ಲೆ ನಮ್ಮ ಗುರಿ: ಜಿಲ್ಲಾ ಆರೋಗ್ಯಾಧಿಕಾರಿ

**ಚಿಕ್ಕಬಳ್ಳಾಪುರ:** ಒಂದು ಚಮಚದಷ್ಟು ನಿಂತ ನೀರಲ್ಲಿ ಸೊಳ್ಳೆಗಳ ಉತ್ಪತ್ತಿಗೆ ಅವಕಾಶವಿರುತ್ತದೆ. ಸೊಳ್ಳೆಗಳ ಉತ್ಪತ್ತಿ ಆದರೆ ಮಲೇರಿಯ ಹಾಗೂ ಇತರ ಕೀಟ ಜನ್ಯ ರೋಗಗಳಿಗೆ ಕಾರಣವಾಗುತ್ತದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮಹೇಶ್ ಕುಮಾರ್ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಇವರ ಸಂಯುಕ್ತಾಶ್ರಯದಲ್ಲಿ ಮಂಗಳವಾರ ನಗರದ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ ''ವಿಶ್ವ ಮಲೇರಿಯಾ ದಿನಾಚರಣೆ'' ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.



ಜಿಲ್ಲೆಯಲ್ಲಿ 2009ನೇ ಸಾಲಿನಲ್ಲಿ 1,554 ಮಲೇರಿಯಾ ಪ್ರಕರಣಗಳು ದಾಖಲಾಗಿದ್ದವು. 2023ರ ಸಾಲಿನಲ್ಲಿ ಕೇವಲ 3 ಪ್ರಕರಣಗಳು ದಾಖಲಾಗಿ ಬಹುತೇಕ ಇಳಿಮುಖವಾಗಿದೆ. 2024ರ ಸಾಲಿನಲ್ಲಿ ಈವರೆಗೆ ಯಾವುದೇ ಪ್ರಕರಣಗಳು ದಾಖಲಾಗಿಲ್ಲ. ಜಿಲ್ಲೆಯಲ್ಲಿ ಮಲೇರಿಯ ಪ್ರಕರಣಗಳಿಲ್ಲ ಎಂದು ಸಾರ್ವಜನಿಕರು ತಮ್ಮ ಸುತ್ತಮುತ್ತಲ ಸ್ವಚ್ಚತೆ ಕಾಪಾಡಿಕೊಳ್ಳುವುದನ್ನು ಕಡಿಮೆ ಮಾಡಬಾರದು. ಸೊಳ್ಳೆಗಳ ಉತ್ಪತ್ತಿ ತಾಣಗಳು, ನೀರು ನಿಲ್ಲುವ ತಾಣಗಳನ್ನು ಸ್ವಚ್ಚವಾಗಿಟ್ಟುಕೊಳ್ಳಬೇಕು. ನೀರಿನ ತೊಟ್ಟಿಗಳು, ಟ್ಯಾಂಕ್ ಗಳ, ಸಂಪುಗಳನ್ನು ಪ್ರತಿವಾರ ಸ್ವಚ್ಚಗೊಳಿಸಬೇಕು. ಮನೆಗಳಲ್ಲಿ ಪ್ರಿಜ್, ಏರ್ ಕೂಲರ್ ಗಳನ್ನು ಸ್ವಚ್ಚವಾಗಿಟ್ಟುಕೊಳ್ಳುವ ಮೂಲಕ ಜೈವಿಕ ವಿಧಾನಗಳಿಂದ ಮಲೇರಿಯ ತಡೆಗಟ್ಟಬೇಕು. ಅನಿವಾರ್ಯ ಇದ್ದಾಗ ಮಾತ್ರ ಫಾಗಿಂಗ್ ಮಾಡಿಸಬೇಕು. ಇಲ್ಲವೆ ಬೇವಿನ ಹೊಗೆ ಹಾಕಿ ಸೊಳ್ಳೆಗಳನ್ನು ನಿಯಂತ್ರಿಸಬೇಕು. ಮನೆಗಳಲ್ಲಿ ಸೊಳ್ಳೆ ಪರದೆ ಹಾಗೂ ಇತರ ನಿರೋಧಕಗಳನ್ನು ಬಳಸಬೇಕು. ಪ್ರತಿ ಮನೆಯು ಮಲೇರಿಯ ಮುಕ್ತ ಆಗುವ ಮೂಲಕ ಚಿಕ್ಕಬಳ್ಳಾಪುರ ಜಿಲ್ಲೆಯು ಮಲೇರಿಯ ಮುಕ್ತ ಆಗಬೇಕು ಎಂದರು. ಈಗಾಗಲೇ ಪ್ರಪಂಚದ 43 ದೇಶಗಳು ಮಲೇರಿಯ ಮುಕ್ತ ದೇಶಗಳಾಗಿವೆ. ಭಾರತವು ಆ ನಿಟ್ಟಿನಲ್ಲಿ ಸಂಕಲ್ಪ ಮಾಡಿದೆ. 2025ರ ಮೇಳೆಗೆ ಕರ್ನಾಟಕ ರಾಜ್ಯದಲ್ಲಿ ಮಲೇರಿಯ ಪ್ರಕರಣಗಳ ಶೂನ್ಯ ಸಾಧನೆ ಉದ್ದೇಶದಿಂದ ಮಲೇರಿಯ ನಿಯಂತ್ರಣಕ್ಕೆ ಯುಕ್ತ ಕ್ರಮಗಳನ್ನು ಕೈಗೊಳ್ಳಲು ಸರ್ಕಾರ ಸೂಚಿಸಿದೆ. ಅದರಂತೆ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿಯೂ 2025ರ ವೇಳೆಗೆ ಶೂನ್ಯ ಸ್ಥಳೀಯ ಮಲೇರಿಯ ಸಾಧನೆಯನ್ನು ಕೈಗೊಳ್ಳಬೇಕಿದೆ. ಸಾರ್ವಜನಿಕರು ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡು ಮಲೇರಿಯ ಮುಕ್ತ ಜಿಲ್ಲೆಯ ಸಾಧನೆಗೆ ಜಿಲ್ಲಾಡಳಿತದೊಂದಿಗೆ ಕೈಜೋಡಿಸಬೇಕು. ಪೋಷಕರು ಹಾಗೂ ಸುತ್ತಮುತ್ತಲ ವಾಸಿಗಳಿಗೆ ಸೊಳ್ಳೆ ನಿಯಂತ್ರಣ ಕುರಿತು ವಿದ್ಯಾರ್ಥಿಗಳು ಅರಿವು ಮೂಡಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾದಿಕಾರಿ ಡಾ. ಮಹೇಶ್ ಕುಮಾರ್ ಅವರು ಸಲಹೆ ನೀಡಿದರು. ನಂದಿ ವೈದ್ಯಕೀಯ ಕಾಲೇಜಿನ ನಿರ್ದೇಶಕ ಮಂಜುನಾಥ ಅವರು ಮಾತನಾಡಿ, ಯಾವ ದೇಶದ ಆರೋಗ್ಯ ಸೂಚ್ಯಂಕ ಚೆನ್ನಾಗಿರುತ್ತದೋ ಆ ದೇಶ ಅಭಿವೃದ್ಧಿಯಲ್ಲಿ ಮುಂದಿರುತ್ತದೆ. ಅಧಿಕ ರಕ್ತದ ಒತ್ತಡ, ಮಧುಮೇಹ ಇಂದಿನ ಬದಲಾದ ಜೀವನ ವಿಧಾನದಿಂದ ಬರುವ ಸಾಧ್ಯತೆ ಹೆಚ್ಚಾಗಿದೆ. ಉತ್ತಮ ಜೀವನ ವಿಧಾನ, ವ್ಯಾಯಾಮ, ಪಾಲನೆಯಿಂದ ಇಂತಹ ರೋಗಗಳನ್ನು ತಡೆಗಟ್ಟಬಹುದು. ಸೊಳ್ಳೆಗಳ ನಿಯಂತ್ರಣದಿಂದ ಮಲೇರಿಯ, ಡೆಂಗ್ಯು, ಚಿಕುನ್ ಗುನ್ಯ, ಆನೆ ಕಾಲು ರೋಗ ಇನ್ನು ಮುಂತಾದ ಕೀಟ ಜನ್ಯ ಕಾಯಿಲೆಗಳನ್ನು ನಿಯಂತ್ರಿಸಬಹುದು. ಚಳಿ ಜ್ವರ, ಮೈ ಕೈ ನೋವು, ಕಂಡು ಬಂದರೆ ಹತ್ತಿರದ ಆಸ್ಪತ್ರೆಗೆ ತೆರಳಿ ರಕ್ತ ಪರೀಕ್ಷೆ ಮಾಡಿಸಿಕೊಂಡು ಸೂಕ್ತ ಚಿಕಿತ್ಸೆ ಪಡೆಯಬೇಕು. ಮಂಗಳೂರು ಮತ್ತು ತುಮಕೂರು ಜಿಲ್ಲೆಗಳಲ್ಲಿ ಮಲೇರಿಯಾ ಪ್ರಕರಣಗಳು ಜಾಸ್ತಿ ಇದ್ದು, ಆ ಜಿಲ್ಲೆಗಳಿಗೆ ಪ್ರವಾಸ ಕೈಗೊಂಡರೆ ಹೆಚ್ಚು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ವಿದ್ಯಾರ್ಥಿಗಳಿಗೆ ತಿಳಿಸಿದರು. ಜಿಲ್ಲಾ ರೋಗವಾಹಕ ಆಶ್ರಿತ ರೋಗ ನಿಯಂತ್ರಾಣಾಧಿಕಾರಿ ಡಾ. ಪ್ರಕಾಶ್ ಅವರು ಪಿ.ಪಿ.ಟಿ ಪ್ರದರ್ಶನದ ಮೂಲಕ ಮಲೇರಿಯಾ ನಿಯಂತ್ರಣದ ಬಗ್ಗೆ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಿದರು. ಈ ಸಂದರ್ಭದಲ್ಲಿ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಜಿ.ಡಿ. ಚಂದ್ರಯ್ಯ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಕೃಷ್ಣ ಪ್ರಸಾದ್, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ. ಚಂದ್ರಶೇಖರ್ ರೆಡ್ಡಿ, ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿ ಡಾ. ಶಿವಕುಮಾರ್, ಜಿಲ್ಲಾ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶಶಿ ಕುಮಾರ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಕೆ.ಮಂಜುಳ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಜಿ.ಹರೀಶ್ ರವರು ಉಪಸ್ಥಿತರಿದ್ದರು.

# ಕುಡಿಯುವ ನೀರಿನ ಸಮಸ್ಯೆಗೆ ತುರ್ತು ಕ್ರಮ ವಹಿಸಿ: ಜಿಲ್ಲಾಧಿಕಾರಿ

**ಮಂಡ್ಯ:** ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಿರುವ ಕಡೆ ತುರ್ತಾಗಿ ಕ್ರಮವಹಿಸಿ ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ. ಕುಮಾರ ಅವರು ಸೂಚಿಸಿದರು.




ಅವರು ಇಂದು ಜಿಲ್ಲಾಧಿಕಾರಿಗಳ ಕಛೇರಿಯ ಸಭಾಂಗಣದಲ್ಲಿ ವೀಡಿಯೋ ಕಾನ್ಫರೆನ್ಸ್ ಮೂಲಕ ಜಿಲ್ಲಾ ವಿಪತ್ತು ಪ್ರಾಧಿಕಾರ ಸಭೆ ನಡೆಸಿ ಮಾತನಾಡಿದರು.

ಕುಡಿಯುವ ನೀರಿನ ಸಮಸ್ಯಗಳ ಬಗ್ಗೆ ಜಿಲ್ಲಡಳಿತಕ್ಕೆ ಸಾಕಷ್ಟು ದೂರುಗಳು ಕೇಳಿ ಬರುತ್ತಿದ್ದು, ಎಲ್ಲಾ ತಹಶೀಲ್ದಾರ್ ಗಳು , ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾಮೀಣ ಕುಡಿಯುವ ನೀರು ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರು ಪ್ರತಿದಿನ ಸಭೆ ನಡೆಸಿ ತೀವ್ರತರ ಹಾಗೂ ಸಾಮಾನ್ಯ ಕುಡಿಯುವ ನೀರಿನ ಸಮಸ್ಯೆ ಇರುವ ಗ್ರಾಮಗಳ ಪಟ್ಟಿ ಮಾಡಿಕೊಂಡು ಕೈಗೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಬೇಕು ಆಗ ಮಾತ್ರ ಸಮಸ್ಯೆ ಪರಿಹರಿಸಲು ಸಾಧ್ಯ ಎಂದರು.

ಕುಡಿಯುವ ನೀರಿಗೆ ಸಂಬಂಧಿಸಿದಂತೆ ಅನುದಾನದ ಕೊರತೆ ಇಲ್ಲ ಸಮರ್ಪಕ ಹಾಗೂ ಸಮನ್ವಯವಾಗಿ ಕಾರ್ಯನಿರ್ವಹಿಸಬೇಕು. ಟ್ಯಾಂಕರ್ ಹಾಗೂ ಖಾಸಗಿ ಬೋರ್ ವೆಲ್ ಗಳಲ್ಲಿ ನೀರು ವೆಚ್ಚದ ಬಿಲ್ಲುಗಳನ್ನು ವಿಪತ್ತು ನಿರ್ವಹಣೆಯಡಿ ಪಾವತಿಸಲಾಗುವುದು. ಇದಲ್ಲದೇ ಪ್ರತಿ ತಾಲ್ಲೂಕಿಗೆ ಆರ್.ಡಿ.ಪಿ.ಆರ್ ಇಲಾಖೆಯಿಂದ ಈ ಹಿಂದೆ 20 ಲಕ್ಷ ಹಾಗೂ 25 ಲಕ್ಷ ಬಿಡುಗಡೆ ಮಾಡಲಾಗಿದೆ. ಈ ಅನುದಾನದಡಿ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ ವರದಿ ಪಡೆದುಕೊಳ್ಳಿ ಇದಲ್ಲದೇ ಇದರೊಂದಿಗೆ 45 ಲಕ್ಷ ರೂ ಅನುದಾನ ಬಿಡುಗಡೆಯಾಗಿದ್ದು, ಇದಕ್ಕೆ ಯೋಜನೆ ಸಿದ್ಧಪಡಿಸಿ ಎಂದರು.

ತಾಲ್ಲೂಕು ಮಟ್ಟದಲ್ಲಿ ಎಲ್ಲೆಲ್ಲಿ ಟ್ಯಾಂಕರ್ ಮೂಲಕ ಕುಡಿಯುವ ನೀರನ್ನು ಒದಗಿಸಲಾಗುತ್ತಿದೆ ಅವುಗಳನ್ನು ಟ್ಯಾಂಕರ್ ಮ್ಯಾನೇಜ್ಮೆಂಟ್ ಆಪ್‌ನಲ್ಲಿ ದಾಖಲಿಸಬೇಕು ಇಲ್ಲವಾದಲ್ಲಿ ಅವರಿಗೆ ಹಣ ಪಾವತಿಸಲು ಸಾಧ್ಯವಾಗುವುದಿಲ್ಲ. ಖಾಸಗಿ ಬೋರ್ ವೆಲ್ ಗಳಲ್ಲಿ ನೀರು ಪಡೆಯುತ್ತಿದ್ದರೆ ಅವರೊಂದಿಗರ ಒಪ್ಪಂದ ಮಾಡಿಕೊಂಡು ಕಾರ್ಯಾದೇಶ ನೀಡಿರುವ ಪ್ರತಿಯನ್ನು ಸಲ್ಲಿಸಬೇಕು ಎಂದರು.

ಪ್ರತಿವಾರಕ್ಕೊಮ್ಮೆ ತಹಶೀಲ್ದಾರ್ ಗಳು ತಮ್ಮ ವ್ಯಾಪ್ತಿಯಲ್ಲಿ ಪಿ.ಡಿ.ಒಗಳ ಸಭೆ ನಡೆಸಿ ಕುಡಿಯುವ ನೀರು ಮೇವಿನ ತೊಂದರೆ ಇರುವ ಗ್ರಾಮಗಳ ವಿವರ ಪಡೆದುಕೊಳ್ಳಿ ಎಂದರು.

ಜಿಲ್ಲೆಯಲ್ಲಿ ಒಟ್ಟು 120 ಖಾಸಗಿ ಬೋರ್ ವೆಲ್ ಗಳ ಮೂಲಕ ಕುಡಿಯುವ ನೀರನ್ನು ಸರಬರಾಜು ಮಾಡುತ್ತಿದ್ದು, ಕೆ. ಆರ್. ಪೇಟೆ - 29, ಮದ್ದೂರು - 17, ಮಳವಳ್ಳಿ - 7, ಮಂಡ್ಯ - 37, ನಾಗಮಂಗಲ - 17, ಪಾಂಡವಪುರ - 8, ಶ್ರೀರಂಗಪಟ್ಟಣ - 5 ಬೋರ್ ವೆಲ್ ಗಳಿಂದ ನೀರು ಪಡೆಯಲಾಗುತ್ತಿದೆ ಎಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಹೆಚ್. ಎಲ್. ನಾಗರಾಜು, ಉಪವಿಭಾಗಾಧಿಕಾರಿ ಮಹೇಶ್, ನಗರಭಿವೃದ್ಧಿಕೋಶದ ಯೋಜನಾ ನಿರ್ದೇಶಕಿ ತುಷಾರಮಣಿ, ಜಿಲ್ಲಾ ಪಂಚಾಯತ್ ನ ಉಪಕಾರ್ಯದರ್ಶಿ ಎಂ ಬಾಬು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕಿ ಎಚ್. ಎಸ್ ನಿರ್ಮಲ, ಪಶುಸಂಗೋಪನಾ ಇಲಾಖೆಯ ಉಪ ನಿರ್ದೇಶಕ ಡಾ. ಸುರೇಶ್ ಇನ್ನಿತರರು ಉಪಸ್ಥಿತರಿದ್ದರು.

## ಕೋಮುವಾದಿ ಯತ್ನಾಳ್ ಶಾಸಕನಾಗಿರಲು ನಾಲಾಯಕ್: ಸಚಿವ ಈಶ್ವರ ಖಂಡ್ರೆ

**ಬೀದರ್:** ಯಾವುದೇ ರಾಗ, ದ್ವೇಷವಿಲ್ಲದೆ ಕರ್ತವ್ಯ ನಿರ್ವಹಿಸುವುದಾಗಿ ದೇವರ ಹೆಸರಲ್ಲಿ ಪ್ರಮಾಣವಚನ ಸ್ವೀಕರಿಸಿ ಶಾಸಕನಾಗಿ, ಈಗ ಒಂದು ಕೋಮಿನ ಬಗ್ಗೆ ಹೀನಾಯವಾಗಿ ಮಾತನಾಡುವ, ದ್ವೇಷ ಬಿತ್ತುವ ಕೋಮುವಾದಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಗೆ ಶಾಸಕನಾಗಿರುವ ಯಾವುದೇ ನೈತಿಕ ಹಕ್ಕಿಲ್ಲ ಎಂದು ಸಚಿವ ಈಶ್ವರ ಖಂಡ್ರೆ ತಿರುಗೇಟು ನೀಡಿದ್ದಾರೆ.

ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಮುಸ್ಲಿಮರು ಹಿಂದೂಗಳ ಮನೆಗೆ ನುಗ್ಗಿ ಹೊಡೆಯುತ್ತಾರೆ, ಅವರ ಹೆಣ್ಣುಮಕ್ಕಳನ್ನು ಹೊತ್ತೊಯ್ಯುತ್ತಾರೆ ಎಂದು ಊಹಾತ್ಮಕ ಹೇಳಿಕೆ ನೀಡಿ, ಮತದಾರರಲ್ಲಿ ಭೀತಿ ಹುಟ್ಟಿಸುತ್ತಿರುವ ಮತ್ತು ದ್ವೇಷ ಬಿತ್ತುತ್ತಿರುವ ಯತ್ನಾಳ್ ವಿರುದ್ಧ ಚುನಾವಣಾ ಆಯೋಗ ತತ್ ಕ್ಷಣವೇ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಖಂಡ್ರೆ ಕುಟುಂಬ ಲಿಂಗಾಯತರಿಗೆ ಕೊಟ್ಟಿರುವ ಕೊಡುಗೆ ಏನು ಎಂದು ಯತ್ನಾಳ್ ಪ್ರಶ್ನಿಸಿದ್ದಾರೆ, ವೀರಶೈವ ಲಿಂಗಾಯತರನ್ನು ಒಗ್ಗೂಡಿಸಿ ಸಂಘಟನೆ ಮಾಡಿದ್ದೇ ಶತಾಯುಷಿ ಭೀಮಣ್ಣ ಖಂಡ್ರೆ ಅವರು, ಬೆಂಗಳೂರಿನಲ್ಲಿ ಭವ್ಯ ವೀರಶೈವ ಲಿಂಗಾಯತ ಭವನ ನಿರ್ಮಿಸಿದ್ದೂ ಭೀಮಣ್ಣ ಖಂಡ್ರೆ ಅವರು, ಇಂದು ಜಿಲ್ಲೆ, ತಾಲೂಕು ಮಟ್ಟದಲ್ಲಿ ವೀರಶೈವ ಭವನ ನಿರ್ಮಾಣವಾಗಿದ್ದರೆ ಅದಕ್ಕೆ ಸಭಾ ಕಾರಣ, ಸಮಾಜದ ಮಕ್ಕಳಿಗೆ ವಿದ್ಯಾರ್ಥಿ ವೇತನ ನೀಡಿ, ಉನ್ನತ ಶಿಕ್ಷಣ, ಸ್ಪರ್ಧಾತ್ಮಕ ಪರೀಕ್ಷೆಗೆ ತರಬೇತಿ ನೀಡುತ್ತಿರುವುದು ಮಹಾಸಭಾ. ಇದಾವ ಮಾಹಿತಿಯೂ ಇಲ್ಲದ ಇತ್ತ ಬಸವವಾದಿಯೂ ಅಲ್ಲದ, ಅತ್ತ ಹಿಂದೂವೂ ಅಲ್ಲದ ಬಸನಗೌಡ ಪಾಟೀಲ್ ಯತ್ನಾಳ್ ರಾತ್ರಿ ಸೆರೆ ಕುಡಿದು, ಮಾಂಸ ತಿಂದು, ಬೆಳಗ್ಗೆ ವಿಭೂತಿ ಹಚ್ಚಿಕೊಂಡು ಬರುತ್ತಾರೆ. ಇವರಿಗೆ ವೀರಶೈವ ಲಿಂಗಾಯತ ಮಹಾಸಭಾ ಬಗ್ಗೆಯಾಗಲೀ, ತಮ್ಮ ತಂದೆ ಪೂಜ್ಯ ಭೀಮಣ್ಣ ಖಂಡ್ರೆ ಅವರ ಬಗ್ಗೆಯಾಗಲೀ ಮಾತನಾಡುವ ಯಾವುದೇ ಹಕ್ಕಿಲ್ಲ ಎಂದು ಹೇಳಿದ್ದಾರೆ.

## ಪ್ರಜ್ವಲ್ ರೇವಣ್ಣ,ಎಚ್.ಡಿ.ರೇವಣ್ಣ ಬಂಧನಕ್ಕೆ ಪಟ್ಟು

**ಕೋಲಾರ:** ಪೆನ್‌ಡ್ರೈವ್ ಲೈಂಗಿಕ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿ ಪ್ರಜ್ವಲ್ ರೇವಣ್ಣ ಮತ್ತು ಎಚ್.ಡಿ. ರೇವಣ್ಣ ಅವರನ್ನು ಬಂಧಿಸಿ ಸೂಕ್ತ ತನಿಖೆ ನಡೆಸಲು ಮತ್ತು ಸಂತ್ರಸ್ತ ಮಹಿಳೆಯರನ್ನು ರಕ್ಷಿಸಲು ಆಗ್ರಹಿಸಿ ಪ್ರಗತಿಪರ ಸಂಘಟನೆಗಳ ವತಿಯಿಂದ ನಗರದ ಹೊಸ ಬಸ್ ನಿಲ್ದಾಣ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು. ಕಳೆದ ಕೆಲವು ದಿನಗಳಿಂದ ಪ್ರಭಾವಿ ರಾಜಕಾರಣಿ ಯೊಬ್ಬರದು ಎನ್ನಲಾದ ಆಶ್ಲೀಲ ಚಿತ್ರಗಳಿರುವ ಪೆನ್‌ಡ್ರೈವ್‌ಗಳನ್ನು ಹಾಸನದ ಬೀದಿ ಬೀದಿಗಳಲ್ಲಿ ಹಂಚಲಾಗುತ್ತಿದೆ. ಆ ಲೈಂಗಿಕ ಚಿತ್ರಗಳು ಮತ್ತು ದೃಶ್ಯಗಳು ವಾಟ್ಸ್‌ಫ್‌ಗಳಲ್ಲಿ ಹರಿದಾಡುತ್ತಿವೆ. ಈ ವಿಚಾರ ಸಾಮಾಜಿಕ ಮಾಧ್ಯಮಗಳಲ್ಲಿ ತೀವ್ರ ಚರ್ಚೆಗೊಳಗಾಗುತ್ತಿದ್ದು, ಎಲ್ಲೆಡೆ ಈ ಕೃತ್ಯದ ಕುರಿತು ಸಾರ್ವಜನಿಕರಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗುತ್ತಿದೆ.ಹಾಸನದ ಸಂಸದ, ಎನ್.ಡಿ.ಎ ಮೈತ್ರಿ ಕೂಟದ ಅಭ್ಯರ್ಥಿ ಪ್ರಜ್ವಲ್ ರೇವಣ್ಣ ಹಾಗೂ ಅವರ ತಂದೆ ಹೊಳೆನರಸೀಪುರದ ಶಾಸಕ ಎಚ್.ಡಿ.ರೇವಣ್ಣ ಅವರ ಮೇಲೆ ಹೊಳೆನರಸೀಪುರದಲ್ಲಿ ಪ್ರಕರಣ ದಾಖಲಾಗಿದ್ದು, ಅವರುಗಳನ್ನು ಕೂಡಲೇ ಬಂಧಿಸಿ ವಿಚಾರಣೆ ನಡೆಸಬೇಕು ಎಂದು ಆಗ್ರಹಿಸಿದರು.

# ಸಿಮಿ ಸಂಘಟನೆ ಕಾನೂನುಬಾಹಿರ: ಆಕ್ಷೇಪಣೆಗಳಿದ್ದಲ್ಲಿ ಸಲ್ಲಿಸಲು ಸೂಚನೆ

**ಬೆಂಗಳೂರು:** ಸ್ಟೂಡೆಂಟ್ಸ್ ಇಸ್ಲಾಮಿಕ್ ಮೂವ್ಮೆಂಟ್ ಆಫ್ ಇಂಡಿಯಾ(ಸಿಮಿ) ಅನ್ನು ಕಾನೂನು ಬಾಹಿರ ಚಟುವಟಿಕೆಗಳ(ತಡೆ) ಕಾಯ್ದೆ ಅನ್ವಯ ಕಾನೂನು ಬಾಹಿರ ಸಂಘಟನೆಯೆಂದು ಘೋಷಿಸಿ ಕೇಂದ್ರ ಸರಕಾರ ಅಧಿಸೂಚನೆ ಹೊರಡಿಸಿದ್ದು, ಇದಕ್ಕೆ ಸಂಬಂಧಿಸಿದಂತೆ ಆಕ್ಷೇಪಣೆಗಳು ಇದ್ದಲ್ಲಿ ಸಲ್ಲಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ. ಈ ಕುರಿತು ರಾಜ್ಯ ಗುಪ್ತಚರ ಇಲಾಖೆಯ ನಿರ್ದೇಶನಾಲಯವು ಪತ್ರಿಕಾ ಪ್ರಕಟಣೆ ಬಿಡುಗಡೆ ಮಾಡಿದೆ. ಕೇಂದ್ರ ಸರ್ಕಾರವು ಉಪ ಕಲಂ (1)ಕಲಂ- 3 ಕಾನೂನು ಬಾಹಿರ ಚಟುವಟಿಕೆಗಳ (ತಡೆ) ಕಾಯ್ದೆ)1967(37 ಆಫ್ 1967) ರ ಅಡಿಯಲ್ಲಿ ತನಗೆ ಪ್ರದತ್ತವಾದ ಅಧಿಕಾರದ ಅನ್ವಯ ಸ್ಟೂಡೆಂಟ್ಸ್ ಇಸ್ಲಾಮಿಕ್ ಮೂವ್ಮೆಂಟ್ ಆಫ್ ಇಂಡಿಯಾ (ಸಿಮಿ) ಅನ್ನು ಕಾನೂನು ಬಾಹಿರ ಸಂಘಟನೆಯೆಂದು ಕೇಂದ್ರ ಸರಕಾರ 2024 ಜನೆವರಿ 29ರಂದು ಘೋಷಿಸಿದೆ ಎಂದು ದೆಹಲಿ ಉಚ್ಚ ನ್ಯಾಯಾಲಯದ ಕಾನೂನು ಬಾಹಿರ ಚಟುವಟಿಕೆ(ತಡೆ) ನ್ಯಾಯಾಧೀಕರಣ ರಿಜಿಸ್ಟ್ರಾರ್ ಜಿತೇಂದ್ರ ಪ್ರಸಾತ್ ಸಿಂಗ್ ಅವರು ತಿಳಿಸಿದ್ದಾರೆ. ಈ ಕಾಯ್ದೆಯ ಉಪ ಕಲಂ (1) ಕಲಂ 4 ರಲ್ಲಿ ತಿಳಿಸಿರುವಂತೆ ಸ್ಟೂಡೆಂಟ್ಸ್ ಇಸ್ಲಾಮಿಕ್ ಮೂವ್ಮೆಂಟ್ ಆಫ್ ಇಂಡಿಯಾ ಅನ್ನು ಕಾನೂನು ಬಾಹಿರ ಸಂಘಟನೆಯೆಂದು ಘೋಷಿಸಲು ಸಾಕಷ್ಟು ಕಾರಣಗಳು ಇವೆಯೇ ಎಂಬ ಬಗ್ಗೆ ನಿರ್ಣಯಿಸಲು ಕಲಂ 5(1) ಕಾಯ್ದೆ ಅಡಿ ದೆಹಲಿ ಉಚ್ಚನ್ಯಾಯಾಲಯದ ನ್ಯಾಯಾಧೀಶರಾದ ಪುರುಷಂದ್ರ ಕುಮಾರ್ ಕೌರವ್ ರವರನ್ನೊಳಗೊಂಡ ನ್ಯಾಯಾಧೀಕರಣವನ್ನು ರಚಿಸಲಾಗಿದೆ ಎಂದು ಅವರು ವಿವರಿಸಿದ್ದಾರೆ. ಈಗ ಕಾಯ್ದೆಯ ಕಲಂ 4. ಉಪ ಕಲಂ-2ರ ಅಡಿಯಲ್ಲಿ ಆಕ್ಷೇಪಣೆ ಸಲ್ಲಿಕೆಗೆ ಅವಕಾಶ ನೀಡಲಾಗಿದ್ದು, ಈ ನೋಟೀಸ್ ಜಾರಿ ಮಾಡಿದ 30 ದಿನದೊಳಗೆ ಸ್ಟೂಡೆಂಟ್ಸ್ ಇಸ್ಲಾಮಿಕ್ ಮೂವ್ಮೆಂಟ್ ಆಫ್ ಇಂಡಿಯಾ (ಸಿಮಿ) ಅನ್ನು ಸಾಕಷ್ಟು ಕಾರಣಗಳಿಂದ ಕಾನೂನು ಬಾಹಿರವೆಂದು ತೀರ್ಮಾನಿಸಿ ಘೋಷಿಸಿರುವುದನ್ನು ಏಕೆ ಒಪ್ಪಬಾರದು ಹಾಗೂ ಕಲಂ 4(3)ರ ಅಡಿಯಲ್ಲಿ ಈ ನಿರ್ಣಯವನ್ನು ಒಪ್ಪಿಕೊಂಡು ಏಕೆ ಅಂತಹ ಘೋಷಣೆಯನ್ನು ದೃಢೀಕರಿಸಬಾರದೆಂಬುದಕ್ಕೆ ಕಾರಣಗಳನ್ನು ನೀಡಲು ತಿಳಿಸಲಾಗಿದೆ. ಆಕ್ಷೇಪಣೆಗಳು /ಉತ್ತರ ಏನಾದರೂ ಇದ್ದದಲ್ಲಿ ಒಂದು ವಾರದೊಳಗಾಗಿ ಕಛೇರಿ ಕೊಠಡಿ ಸಂಖ್ಯೆ: 104, ಮೊದಲನೆಯ ಮಹಡಿ, ಎ ಬ್ಲಾಕ್, ದೆಹಲಿ ಉಚ್ಚ ನ್ಯಾಯಾಲಯ, ಶೇರ್ ?ಾ ರಸ್ತೆ, ನವದೆಹಲಿ-110503ರಲ್ಲಿ ಕಳುಹಿಸಬಹುದಾಗಿದೆ. ಆಕ್ಷೇಪಣೆಗಳು/ ಉತ್ತರ/ ದಾಖಲೆಗಳು ಪ್ರಾಂತೀಯ ಭಾ?ಯಲ್ಲಿ ಇದ್ದಲ್ಲಿ ಅದರ ಯಥಾವತ್ತಾದ ಆಂಗ್ಲ ಭಾ?ಾಂತರದ ಪ್ರತಿಯನ್ನು ಲಗತ್ತಿಸುವುದು. ನೀವು ಖುದ್ದಾಗಿ ಅಥವಾ ನಿಮ್ಮ ಅಧಿಕೃತ ಅನುಮತಿ ಪಡೆದ ವ್ಯಕ್ತಿಯ ಮೂಲಕ ಕೊಠಡಿ ಸಂಖ್ಯೆ: 16, ದೆಹಲಿ ಉಚ್ಚ ನ್ಯಾಯಾಲಯ, ಶೇರ್ ?ಾ ರಸ್ತೆ, ನವದೆಹಲಿ - 110503 ರ ದೆಹಲಿಯಲ್ಲಿರುವ ಟ್ರಿಬ್ಯೂನಲ್ಲ ಮುಂದೆ 2024ರ ಮೇ 04ರ ಸಂಜೆ 4.30 ಗಂಟೆಗೆ ಹಾಜರಾಗಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಮೇಶ್ ಜಾರಕಿಹೊಳಿಗೆ ಹೆಬ್ಬಳ್ಕರ್ ತಿರುಗೇಟು

**ಬೆಳಗಾವಿ:** ಸಿದ್ದರಾಮಯ್ಯ ಸರ್ಕಾರವನ್ನು ಕೆಡವುದು ಅಷ್ಟೊಂದು ಸುಲಭದ ಮಾತಲ್ಲ. ಸರ್ಕಾರ ಕೆಡವಲು ನಿಮಗೆ ನೈತಿಕತೆ ಇದೆಯೇ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಶಾಸಕ ರಮೇಶ್ ಜಾರಕಿಹೊಳಿಗೆ ತಿರುಗೇಟು ನೀಡಿದ್ದಾರೆ. ಸಿಎಂ ಸಿದ್ದರಾಮಯ್ಯ ನಮ್ಮವರು, ಚುನಾವಣೆ ಬಳಿಕ ಅವರು ನಮ್ಮೊಂದಿಗೆ ಬರಲಿದ್ದಾರೆ. ಕೇಂದ್ರದಲ್ಲಿ ಬಿಜೆಪಿ ಸರ್ಕಾರ ರಚನೆಯಾದ ಬಳಿಕ ರಾಜ್ಯದ ಕಾಂಗ್ರೆಸ್ ಸರ್ಕಾರ ಪತನವಾಗಲಿದೆ. ನಂತರ ರಾಜ್ಯದಲ್ಲಿಯೂ ಬಿಜೆಪಿ ಸರ್ಕಾರ ರಚನೆಯಾಗಲಿದೆ ಎಂದು ಶಾಸಕ ರಮೇಶ್ ಜಾರಕಿಹೊಳಿ ಹೇಳಿಕೆ ನೀಡಿದ್ದರು. ರಮೇಶ್ ಜಾರಕಿಹೊಳಿ ಹೇಳಿಕೆ ವಿರುದ್ಧ ಕಿಡಿಕಾರಿದ ಲಕ್ಷ್ಮಿ ಹೆಬ್ಬಾಳ್ಕರ್, ಹಿಂದುಳಿದ ಸಮುದಾಯದ ಸಿದ್ದರಾಮಯ್ಯ ಅವರನ್ನು ಕಾಂಗ್ರೆಸ್ 2ನೇ ಬಾರಿಗೆ ಸಿಎಂ ಮಾಡಿದೆ. ಪೂರ್ಣ ಬಹುಮತದ ಮೂಲಕ ರಚನೆಯಾದ ಸಿದ್ದರಾಮಯ್ಯ ನೇತೃತ್ವದ ಸರ್ಕಾರವನ್ನು ಕೆಡವಲು ಅಷ್ಟು ಸುಲಭ ಇಲ್ಲ. ಗೋಕಾಕ್ ಶಾಸಕರೇ, ಪದೇ ಪದೇ ಲೋಕಸಭಾ ಚುನಾವಣೆ ನಂತರ ಸರ್ಕಾರ ಬೀಳಿಸುವುದಾಗಿ ಹೇಳುತ್ತಿದ್ದೀರಿ, ಸರ್ಕಾರ ಕೆಡವಲು ನಿಮಗೇನು ನೈತಿಕತೆ ಇದೆ ಎಂದು ಪ್ರಶ್ನಿಸಿದ್ದಾರೆ. ಸರ್ಕಾರವನ್ನು ಕೆಡವಲು ಮುಂದಾದರೆ ಇಡೀ ಹಿಂದುಳಿದ ವರ್ಗಗಳ ಕೆಂಗಣ್ಣಿಗೆ ಗುರಿಯಾಗಬೇಕಾಗುತ್ತದೆ. ಕಾಂಗ್ರೆಸ್ ಪಕ್ಷ ಎಂದರೆ ಬದ್ದತೆ, ಎಲ್ಲಾ ಧರ್ಮ, ಜಾತಿ ಸಮುದಾಯದವರಿಗೆ ಮಣೆ ಹಾಕಿದೆ. ಭಾರತದ ಸಂಸ್ಕೃತಿಯನ್ನು ಉಳಿಸುತ್ತಿದ್ದರೆ ಅದು ಕಾಂಗ್ರೆಸ್ ಪಕ್ಷದಿಂದ ಮಾತ್ರ. ಎಲ್ಲಾ ವರ್ಗದವರಿಗೂ ಅಧಿಕಾರ ನೀಡುವ ಪಕ್ಷ ಎಂದು ಹೇಳಿದರು.




# ಕಾರ್ಮಿಕರಿಗೆ ಗೌರವಯುತ ಬದುಕು ಕಟ್ಟಿಕೊಡಬೇಕು

**ಕೋಲಾರ:** ಯೋಧ, ರೈತ ಹಾಗೂ ಕಾರ್ಮಿಕರ ಋಣವನ್ನು ದೇಶದ ಜನತೆ ಸದಾ ನೆನೆಯಬೇಕು ಎಂದು ನಗರಸಭಾ ಸದಸ್ಯ ಪ್ರವೀಣ್ ಗೌಡ ತಿಳಿಸಿದರು.

ನಗರದ ಹಳೆ ಬಸ್ ನಿಲ್ದಾಣದ ಬಳಿ ಬುಧವಾರ ಡಾ.ಅಂಬೇಡ್ಕರ್ ಕೂಲಿ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದಿಂದ ನಡೆದ ವಿಶ್ವ ಕಾರ್ಮಿಕರ ದಿನಾಚರಣೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸುಂದರ ಸಮಾಜ ನಿರ್ಮಾಣದಲ್ಲಿ ಕಾರ್ಮಿಕರ ಪಾತ್ರ ಮಹತ್ವದ್ದಾಗಿದೆ. ಕಾರ್ಮಿಕರಿಗೆ ಗೌರವಯುತ ಬದುಕು ಕಟ್ಟಿಕೊಡಬೇಕು. ಇನ್ನೂ ಹೆಚ್ಚಿನ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದರು.

ಸರ್ಕಾರ ದಿನಗೂಲಿ ನೌಕರರಿಗೆ ಸಂಬಳ ನಿಗದಿಪಡಿಸಿರುವಂತೆ ಅಸಂಘಟಿತ ಕೂಲಿ ಕಾರ್ಮಿಕರಿಗೂ ವೇತನ ನಿಗದಿಗೊಳಿಸಬೇಕು. ಕಾರ್ಮಿಕರಲ್ಲಿ ಸಂಘಟನೆ ಕೊರತೆಯಿಂದ ಸರ್ಕಾರದ ಸೌಲಭ್ಯಗಳು ಸಮರ್ಪಕವಾಗಿ ಸಿಗುತ್ತಿಲ್ಲ. ಇದರಿಂದ ಜೀವನ ನಿರ್ವಹಣೆ ಕಷ್ಟವಾಗುತ್ತಿದೆ. ಈ ನಿಟ್ಟಿನಲ್ಲಿ ಸರ್ಕಾರ ಮಧ್ಯ ಪ್ರವೇಶಿಸಿ ಅಸಂಘಟಿತ ಕಾರ್ಮಿಕರಿಗೆ ನ್ಯಾಯ ದೊರಕಿಸಿಕೊಡಬೇಕು ಎಂದು ಮನವಿ ಮಾಡಿದರು.

ಕಾರ್ಮಿಕ, ವ್ಯವಸ್ಥಾಪಕ ಹಾಗೂ ಮಾಲೀಕರ ನಡುವೆ ಸಾಮರಸ್ಯ ಇದ್ದರೆ ಮಾತ್ರ ಕಾರ್ಖಾನೆ ಸೇರಿದಂತೆ ಯಾವುದೇ ಕ್ಷೇತ್ರವು ಅಭಿವೃದ್ಧಿ ಸಾಧ್ಯ. ಭಾರತ ದೇಶವು ಅಭಿವೃದ್ಧಿ ಪಥದತ್ತ ಸಾಗುತ್ತಿರಲು ಮುಖ್ಯ ಕಾರಣ ಶ್ರಮಿಕ ಕಾರ್ಮಿಕರು. ಅವರ ಆರೋಗ್ಯ, ಕುಟುಂಬ ಹಾಗೂ ಮಕ್ಕಳ ವಿದ್ಯಾಭ್ಯಾಸಕ್ಕೆ ಅನುಕೂಲವನ್ನು ಮಾಡಿಕೊಡುವುದು ಸರ್ಕಾರಗಳ ಮುಖ್ಯ ಕರ್ತವ್ಯವೆಂದರು.

ಮುಖಂಡ ಶಾಮ್ ನಾಯಕ್ ಮಾತನಾಡಿ, ಖಾಸಗೀಕರಣದಿಂದ ಕಾರ್ಮಿಕನ ಶ್ರಮಕ್ಕೆ ತಕ್ಕ ಬೆಲೆ ಸಿಗುತ್ತಿಲ್ಲ.



ಪ್ರಸಕ್ತ ದಿನದಲ್ಲಿ ಕಾರ್ಮಿಕರಿಗೆ ಕಾಯಂ ಉದ್ಯೋಗವೆಂಬುದೇ ಮರೀಚಿಕೆಯಾಗಿದೆ. ದುಡಿಮೆಯೇ ಜೀವನ ಎಂದು ನಂಬಿ ಕುಳಿತ ನೌಕರರ ವರ್ಗಕ್ಕೆ ನೆಮ್ಮದಿಯೇ ಇಲ್ಲದಂತಾಗಿದೆ. ಕಾಯಂ ಉದ್ಯೋಗವಿಲ್ಲದೆ ಕಾರ್ಮಿಕನ ತಲೆ ಮೇಲೆ ಅನಿಶ್ಚಿತತೆಯ ತೂಗು ಕತ್ತಿ ನೇತಾಡುತ್ತಿದೆ ಎಂದರು.

ವಿಶ್ವ ಕಾರ್ಮಿಕ ದಿನಾಚರಣೆ ಅಂಗವಾಗಿ ಕೂಲಿ ಕಾರ್ಮಿಕರು ಡಾ.ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, ಸಾರ್ವಜನಿಕರಿಗೆ ಸಿಹಿ ಹಂಚಿದರು.

ಈ ಸಂದರ್ಭದಲ್ಲಿ ಡಾ.ಅಂಬೇಡ್ಕರ್ ಕೂಲಿ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾಧ್ಯಕ್ಷ ಮಂಜುನಾಥ್, ಉಪಾಧ್ಯಕ್ಷ ಮೆಹಬೂಬ್ ಪಾಷಾ, ಕಾರ್ಯದರ್ಶಿ ಮುನಿರಾಜು, ಖಜಾಂಚಿ ಗೋವಿಂದ, ಸುರೇಶ್, ಸದಸ್ಯರಾದ ಬಜಶ್, ಧನು, ವೆಂಕಟೇಶ್, ಮನೋಜ್, ಮುನಿರಾಜ್ ಮತ್ತಿತರರು ಹಾಜರಿದ್ದರು.

# ಗ್ರಾಮ ಪಂಚಾಯತ್ ಚುನಾವಣೆಯಲ್ಲೂ ನಿಂತರು ಗೀತಾ ಗೆಲ್ಲಲ್ಲ: ಕುಮಾರ್ ಬಂಗಾರಪ್ಪ



**ಶಿವಮೊಗ್ಗ:** ಕಾಂಗ್ರೆಸ್ ಅಭ್ಯರ್ಥಿ ಗೀತಾ ಶಿವರಾಜಕುಮಾರ್ ಶಿವಮೊಗ್ಗ ಜಿಲ್ಲೆಯಲ್ಲಿ ಗ್ರಾಮ ಪಂಚಾಯಿತಿ ಚುನಾವಣೆಯನ್ನೂ ಗೆಲ್ಲುವುದಿಲ್ಲ ಎಂದು ಮಾಜಿ ಸಚಿವ ಕುಮಾರ್ ಬಂಗಾರಪ್ಪ ಭವಿಷ್ಯ ನುಡಿದಿದ್ದಾರೆ. ಜಿಲ್ಲಾ ಬಿಜೆಪಿ ವತಿಯಿಂದ ನಗರದ ಪೆಸಿಟ್ ಕಾಲೇಜು ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ ವೃತ್ತಿಪರರ ಸಮಾವೇಶದಲ್ಲಿ ಮಾತನಾಡಿ, ನಮ್ಮ ತಂಗಿ, ನನ್ನ ತಮ್ಮ , ಜಾತಿ ಅಂತಾದರೆ ಪುಟಗಟ್ಟಲೆ ಮಾತನಾಡಬಹುದು.

ಸಮಾಜದ ಓಟ್ ಎಲ್ಲಾ ಒಂದೇ ಕಡೆ ಹೋಗುತ್ತವೆ ಎಂಬುದು ಸತ್ಯಕ್ಕೆ ದೂರವಾದ ಮಾತುಗಳು. ಜಿಲ್ಲೆಯಲ್ಲಿ ಈಡಿಗರ ಭವನ ಕೊಟ್ಟಿದ್ದು ಯಡಿಯೂರಪ್ಪ. ಶಿಕಾರಿಪುರ, ಸೊರಬ ಎರಡು ಕಣ್ಣು ಅಂತ ಕೆಲಸ ಮಾಡಿದ್ದು ಯಡಿಯೂರಪ್ಪ ಎಂದರು.

**ಫಿಲ್ಮ್ ಇಂಡಸ್ಟ್ರಿ ಇಲ್ಲ:** ಫಿಲಂ ಇಂಡಸ್ಟ್ರಿಯೇ ನಮ್ಮ ಪರವಾಗಿದೆ ಎಂದು ಒಬ್ಬರು ಹೇಳಿದ್ದಾರೆ. ನಾನೂ ಒಬ್ಬ ನಿರ್ಮಾಪಕ. ನಮ್ಮದೂ ಸ್ಟುಡಿಯೋ ಇದೆ. ಮುನಿರತ್ನ ಇದಾರೆ, ರಾಕ್ ಲೈನ್ ವೆಂಕಟೇಶ್ ಇದ್ದಾರೆ. ಹಾಗಾಗಿ ಇಡೀ ಫಿಲಂ ಇಂಡಸ್ಟ್ರಿ ಹಿಂದೆ ಇದೆ ಎಂಬುದು ಸುಳ್ಳು. ಅವರ ಅಹಂಕಾರಕ್ಕೆ ಮದ್ದು ಕೊಡಲು ಬಿಜೆಪಿಗೆ ವೋಟ್ ಹಾಕಿ ಎಂದು ಮನವಿ ಮಾಡಿದರು. ಲೋಕಸಭಾ ಚುನಾವಣೆ ಬಳಿಕ ರಾಜ್ಯದ ರಾಜಕಾರಣ ಅಲ್ಲೋಲ ಕಲ್ಲೋಲ ಆಗುವುದು ದೂರ ಇಲ್ಲ ಎಂದು ಇದೇ ವೇಳೆ ಭವಿಷ್ಯ ನುಡಿದರು.

# ಶ್ರವಣದೋಷವುಳ್ಳ ವಿಶೇಷ ಪ್ರತಿಭೆಗಳ ಸಾಧನೆ

## ಡೆಫ್ ಇಂಡಿಯನ್ ಪ್ರೀಮಿಯರ್ ಲೀಗ್ ಚಾಂಪಿಯನ್ ಶಿಪ್ ಪ್ರಶಸ್ತಿ ಮುಡಿಗೇರಿಸಿಕೊಂಡ ತಂಡ

**ಬೆಂಗಳೂರು:** ಜಮ್ಮುವಿನ ಮೌಲಾನ ಆಜಾದ್ ಸ್ಟೇಡಿಯಂನಲ್ಲಿ ಭಾರತೀಯರ ಕಿವುಡರ ಸಂಘ ಆಯೋಜಿಸಿದ್ದ 5ನೇ ಡೆಫ್ ಇಂಡಿಯನ್ ಪ್ರೀಮಿಯರ್ ಲೀಗಿನ ಸಮಾರೋಪ ಸಮಾರಂಭದಲ್ಲಿ ಆಗಮಿಸಿದಂತಹ ಜಮ್ಮುವಿನ ಡೆಪ್ಯುಟಿ ಕಮೀಷನರ್ ಸಚಿನ್ ಕುಮಾರ್ ವೈಶ್ಯ ಅವರು ವಿಶೇಷ ಸಾಮರ್ಥ್ಯವುಳ್ಳ ಅಥ್ಲೀಟ್ ಗಳು ಮೈದಾನದಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿರುವುದನ್ನು ಕಂಡು ಸಂತೋಷ ವ್ಯಕ್ತಪಡಿಸಿದ್ದಾರೆ.

ಈ ಸಮಾರಂಭದಲ್ಲಿ ಸಚಿನ್ ಕುಮಾರ್ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು ಇವರೊಂದಿಗೆ ಶೇರ್ ಸಿಂಗ್ ೦ಆಅಅ ಜಮ್ಮು ಮತ್ತು ರಂಜಿತ್ ಕಲ್ರಾ, ಹಾಗೂ ಗೌರವಾನ್ವಿತ ಕ್ರೀಡಾ ಆಡಳಿತಗಾರರ ಮತ್ತು ಜಮ್ಮು ಕಾಶ್ಮೀರದ ಕ್ರೀಡಾ ಮಂಡಳಿಯ ಸದಸ್ಯ ಹಾಗೂ ಗೌರವಾನ್ವಿತ ಅತಿಥಿಗಳಾಗಿ ಸೇವೆ ಸಲ್ಲಿಸಿದ ಎಏಅಂಯ ರಾಜೇಶ್ ಧಾರ್, ಮಾಧ್ಯಮ ವ್ಯವಸ್ಥಾಪಕರಾದ ಬಲ್ಜಿಂದರ್ ಸಿಂಗ್ , ಮುಖ್ಯ ಜಮ್ಮು ಕಾಶ್ಮೀರದ ಕ್ರೀಡಾ ಅಧಿಕಾರಿ, ಜೂಡೋ ತರಭೇತುದಾರರಾದ ಸೂರಜ್ ಬಾನ್ ಸಿಂಗ್, ಅಥ್ಲೇಟಿಕ್ ತರಭೇತುದಾರರಾದ ಪವನ್ ದೀಪ್ ಕೌರ್ ಇವರುಗಳು ಸಹ ವಿಶೇಷ ಅತಿಥಿಗಳಾಗಿ ಭಾಗವಹಿಸಿದ್ದರು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಜಮ್ಮು ಕಾಶ್ಮೀರದ ಜಿಲ್ಲಾಧಿಕಾರಿಯು ಪ್ರತಿಯೊಬ್ಬ ಪ್ರಜೆಯೂ ತನ್ನದೇ ಆದಂತಹ ಸಾಮರ್ಥ್ಯದಲ್ಲಿ ಸಮಾಜಕ್ಕೆ ಕೊಡುಗೆ ನೀಡಲೂ ಬಯಸುತ್ತಾನೆ ಹಾಗೂ ದಿನನಿತ್ಯ ನಾವೆಲ್ಲರು ನಮ್ಮದೇ ಕರ್ತವ್ಯದಲ್ಲಿ ತೊಡಗಿರುತ್ತೇವೆ. ಹಾಗೇಯೇ ಈ ವಿಶೇಷ ಸಾಮರ್ಥ್ಯವುಳ್ಳ ಸ್ಪರ್ಧಿಗಳ ಕ್ರೀಡೆ ನೋಡಲು ತುಂಬಾ ಖುಷಿಯಾಗುತ್ತದೆ ಎಂದು ಅಭಿಪ್ರಾಯಪಟ್ಟರು. ವಿಶೇಷ ಸಾಮರ್ಥ್ಯವುಳ್ಳ ಕ್ರೀಡಾಪಟುಗಳು ನಿಜವಾಗಿಯೂ ಚಾಂಪಿಯನ್ನರು ಎಂದು ಹೇಳಿದ್ದಾರೆ, ಹಾಗೇಯೇ ವಿಶೇಷ ಅತಿಥಿಗಳಾಗಿ ಬಂದಂತಹ ಸಚಿನ್ ಕುಮಾರ್ ಹಾಗೂ ರಾಜೇಶ್ ಕಲ್ರಾ ರವರಿಗೆ ಅಭಿನಂದನೆಗಳನ್ನು ತಿಳಿಸಿದ್ದಾರೆ.




**ಬೆಂಗಳೂರು ಬಾದ್ ಶಾ ತಂಡದ ಆಟಗಾರರು**

**ಪೃಥ್ವಿರಾಜ್ ಶೆಟ್ಟಿ (ನಾಯಕ) , ರಿಕ್ಕಿದೇಬ್ ನಾಥ್, ಅನ್ಸಿಲ್ ರಿಷಿ ಪಿಂಟೋ, ವೀರೇಂದ್ರಸಿಂಗ್ , ಸನಿತ್ ಶೆಟ್ಟಿ, ಅನುಷ್ ನಾಯಕ್, ಅಜಯ್ ಕುಮಾರ್, ವಿಕ್ಕಿ, ಶೋಯೆಬ್ ಮಹ್ಮದ್, ವೈಭವ್ ಕುಮಾರ್, ಯೋಗೇಶ್ ದೇವಾಂಗರ್, ಅಭಿಷೇಕ್ ಸಿಂಗ್, ಪುಷ್ಪೇಂದ್ರ ಕುರ್ಮಿ, ವೈಭವ್, ಸತ್ಯಮೂರ್ತಿ ಕೆ.ಟಿ (ಮ್ಯಾನೇಜರ್ ಕರ್ನಾಟಕ), ರಘು (ಕೋಚ್ ಕರ್ನಾಟಕ). ಇವರೆಲ್ಲರಿಗೂ ತುಂಬು ಹೃದಯದ ಧನ್ಯವಾದಗಳು ಹಾಗೂ ಅಭಿನಂದನೆಗಳು**

ಡೆಫ್ ಬೆಂಗಳೂರು ಬಾದ್ ಶಾ ಹಾಗೂ ಡೆಫ್ ಹೈದರಾಬಾದ್ ಈಗಲ್ ಎರಡು ತಂಡಗಳು ಚಾಂಪಿಯನ್ ಗಳಾಗಿವೆ. ಆದರೆ ಬೆಂಗಳೂರು ಬಾದ್ ಶಾ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದ್ದಾರೆ.

ಸುದರ್ಶನ್ ಹೈದರಾಬಾದ್ ಈಗಲ್ ತಂಡದಿಂದ ಹಾಗೂ ಅಶ್ರಫ್ ಬೇಗ್ ಅತ್ಯುತ್ತಮ ಆಟಗಾರರಾಗಿ ಉತ್ತಮ ವಿಕೇಟ್ ಕೀಪರ್ ಹಾಗೂ ಫೀಲ್ಡರ್ ಗಳಾಗಿ ಹೊರಹೊಮ್ಮಿದ್ದಾರೆ, ಸುಹೈಲ್ ಅಹ್ಮದ್ ಹೈದರಾಬಾದ್ ತಂಡದಿಂದ, ದೀಪಕ್ ಕುಮಾರ್, ಪಂಜಾಬ್ ವಾರಿಯರ್ಸ್ ತಂಡದಿಂದ ಸಾಯಿ ನರೇಶ್ , ಚೆನ್ನೈ ಬ್ಲಾಸ್ಟರ್ ತಂಡದಿಂದ ಅತಿಹೆಚ್ಚು ಸಿಕ್ಸರ್, ವಿಕೆಟ್ ಗಳು ಹಾಗೂ ಅತಿವೇಗದ 50 ರನ್ ಗಳನ್ನು ಕಲೆ ಹಾಕಿರುವವರಾಗಿದ್ದಾರೆ. ಮುಖ್ಯ ಅತಿಥಿಗಳಾಗಿದ್ದಂತಹ ಸಚಿನ್ ಕುಮಾರ್, ರಾಜೇಶ್ ಕಲ್ರಾ ರವರು ಪ್ರಶಸ್ತಿ ಹಾಗೂ ಎರಡು ತಂಡಗಳಿಗೆ 3.00.000 ರೂ ಹಣವನ್ನು ನೀಡಿದ್ದಾರೆ.

ಈ ಒಂದು ಪ್ರೀಮಿಯರ್ ಲೀಗ್ ನನ್ನು ಸುಮಿತ್ ಜೈನ್ ಖಆಅಂ ಹಾಗೂ ಮಿರ್ಜಾ ಮೋಯಿನ್ ಬೇಗ್ ನೇತೃತ್ವದಲ್ಲಿ ಆಯೋಜಿಸಲಾಯಿತು. ಸುಮಿತ್ ಅವರು ಕಾರ್ಯಕ್ರಮದ ಕೊನೆಯಲ್ಲಿ ಎಲ್ಲರಿಗೂ ವಂದನಾರ್ಪಣೆಯನ್ನು ತಿಳಿಸುವಾಗ ಈ ಒಂದು ಪ್ರೀಮಿಯರ್ ಲೀಗ್ ಆಯೋಜನೆಗೆ ಅತಿಹೆಚ್ಚಿನ ಸಹಕಾರ ನೀಡಿದಂತಹ ಜಮ್ಮು ವಿಶ್ವವಿದ್ಯಾಲಯದ ಲೆಫ್ಟಿನೆಂಟ್ ಗವರ್ನರ್ ಆದಂತಹ ದೀಪಕ್ ಗುಪ್ತ ಅವರಿಗೂ ಧನ್ಯವಾದ ತಿಳಿಸಿದ್ದಾರೆ. ದೀಪಕ್ ಗುಪ್ತ ರವರು ನಾಲ್ಕು ದಿನ ನಡೆದಂತಹ ಪ್ರೀಮಿಯರ್ ಲೀಗ್ ನಲ್ಲಿ ಭಾಗವಹಿಸಿದಂತಹ ಎಲ್ಲಾ ಆಟಗಾರರಿಗೂ ಸ್ಪಾನ್ಸರ್ ಶಿಪ್ ನೀಡಿದರು.

# ವಿ.ಶ್ರೀನಿವಾಸಪ್ರಸಾದ್ ಮೌಲ್ಯಯುತ ರಾಜಕಾರಣಿ

## ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ

**ಚಾಮರಾಜನಗರ:** ಸಂಸದ ವಿ.ಶ್ರೀನಿವಾಸಪ್ರಸಾದ್ ಅವರು ಮೌಲ್ಯಯುತ ರಾಜಕಾರಣಿಯಾಗಿದ್ದು, ಬಡವರು, ದಲಿತರು, ಶೋಷಿತರ ಧ್ವನಿಯಾಗಿದ್ದರು ಎಂದು ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ ಹೇಳಿದರು.

ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ನಗರ ಮಂಡಲ ವತಿಯಿಂದ ನಡೆದ ವಿ.ಶ್ರೀನಿವಾಸ ಪ್ರಸಾದ್‌ರವರ ಶ್ರದ್ಧಾಂಜಲಿ ಸಭೆಯಲ್ಲಿ ಅವರು ಪುಷ್ಪಾರ್ಚನೆ ಮಾಡಿ ಮಾತನಾಡಿದರು.

ಸಂಸದರಾದ ವಿ.ಶ್ರೀನಿವಾಸಪ್ರಸಾದ್ ಅವರು ಚಾಮರಾಜನಗರ ಲೋಕಸಭಾ ಮೀಸಲು ಕ್ಷೇತ್ರದಲ್ಲಿ ಸುಮಾರು 5 ಬಾರಿ ಸಂಸದರಾಗಿದ್ದು, ನಂಜನಗೂಡು ವಿಧಾನಸಭಾ ಕ್ಷೇತ್ರದಲ್ಲಿ ಶಾಸಕರಾಗಿ, ಸಚಿವರಾಗಿದ್ದು, ಜಿಲ್ಲೆ, ರಾಜ್ಯ, ದೇಶದಲ್ಲಿ ಸುದೀರ್ಘವಾಗಿ ಉತ್ತಮವಾದ ಸಾರ್ವಜನಿಕರ ಸೇವೆ ಸಲ್ಲಿಸಿದ್ದಾರೆ. ಸದಾ ಬಡವರು, ದಲಿತರು, ಶೋಷಿತರ ಪರ ಅಪಾರ ಕಾಳಜಿ ಹೊಂದಿದ ಮಹಾನಾಯಕರು ಎಂದರು.

ವಿ.ಶ್ರೀನಿವಾಸಪ್ರಸಾದ್ ಅವರು ಜನಪ್ರಿಯ ನಾಯಕರಾಗಿ ಅನೇಕ ಕಾರ್ಯಕ್ರಮಗಳು, ಯೋಜನೆಗಳನ್ನು ಜಿಲ್ಲೆಗೆ ತಂದು ಅಭಿವೃದ್ಧಿ ಕಾರಣೀಭೂತರಾಗಿದ್ದಾರೆ. ಅವರ ಅಗಲಿಕೆಯಿಂದ ಜಿಲ್ಲೆ,ರಾಜ್ಯಕ್ಕೆ ಅಪಾರ ನಷ್ಟ ಉಂಟಾಗಿದೆ. ಅವರ ಆತ್ಮಕ್ಕೆ ಶಾಂತಿ ನೆಲೆಸಲಿ ಅವರ ಕುಟುಂಬಕ್ಕೆ ದು:ಖ ಭರಿಸುವ ಶಕ್ತಿ ನೀಡಲಿ ಎಂದು ಆಶಿಸಿದರು.

ಸಭೆಯಲ್ಲಿ ಬಿಜೆಪಿ ಜಿಲ್ಲಾ ನಿಕಟಪೂರ್ವ ಅಧ್ಯಕ್ಷ ಆರ್.ಸುಂದರ್, ಪ್ರಧಾನ ಕಾರ್ಯದರ್ಶಿ ಹೊನ್ನೂರು ಮಹದೇವಸ್ವಾಮಿ, ನಗರ ಮಂಡಲ ಅಧ್ಯಕ್ಷ ಶಿವರಾಜು, ಯುವ ಮೋರ್ಚಾದ ಜಿಲ್ಲಾಧ್ಯಕ್ಷ ಸೂರ್ಯಕುಮಾರ್, ಪ್ರಧಾನ ಕಾರ್ಯದರ್ಶಿ ಆನಂದ್‌ಭಗೀರಥ್, ಎಸ್‌ಸಿ ಮೋರ್ಚಾದ ಜಿಲ್ಲಾಧ್ಯಕ್ಷ ಮೂಡಹಳ್ಳಿ ಮೂರ್ತಿ, ಪ್ರಧಾನ ಕಾರ್ಯದರ್ಶಿ ಮುತ್ತಿಗೆಮೂರ್ತಿ, ನಗರ ಮಂಡಲ ಅಧ್ಯಕ್ಷ ಪರಶಿವಯ್ಯ, ರಾಜಪ್ಪ, ಕೂಸಣ್ಣ, ಚೂಡಾ ಮಾಜಿ ಅಧ್ಯಕ್ಷ ಕುಲಗಾಣಶಾಂತಮೂರ್ತಿ, ಚಂದ್ರಶೇಖರ್, ವೇಣುಗೋಪಾಲ್, ಬಲವೀರ್‌ಸಿಂಗ್, ಹೈಟೆಕ್ ಶಿವು, ಚಂದ್ರಶೇಖರ್, ಸಿ.ಡಿ.ಪ್ರಕಾಶ್, ಗಿರೀಶ್, ಶಿವಣ್ಣ, ಮಹದೇವಯ್ಯ ಇತರರು ಭಾಗವಹಿಸಿದ್ದರು.



## ಸಂಸದರಿಗೆ ಶ್ರದ್ಧಾಂಜಲಿ

**ಚಾಮರಾಜನಗರ:** ನಗರದ ಎಸ್ .ಪಿ.ಬಾಲಸುಬ್ರಹ್ಮಣ್ಯಂ ಗಾನಗಂಧರ್ವ ಸಾಂಸ್ಕೃತಿಕ ಕಲಾ ವೇದಿಕೆ ಪದಾಧಿಕಾರಿಗಳು ಮತ್ತು ಹೌಸಿಂಗ್ ಬೋರ್ಡ್ ಕಾಲೊನಿ ನಿವಾಸಿಗಳು ಸಂಸದ ವಿ. ಶ್ರೀನಿವಾಸ್ ಪ್ರಸಾದ್ ಅವರಿಗೆ ಶ್ರದ್ಧಾಂಜಲಿ ಅರ್ಪಿಸಿದರು.

ಎಸ್.ಪಿ.ಬಾಲ ಸುಬ್ರಹ್ಮಣ್ಯಂ ಗಾನಗಂಧರ್ವ ಸಾಂಸ್ಕೃತಿಕ ಕಲಾವೇದಿಕೆಯ ಅಧ್ಯಕ್ಷ ಶಿವಣ್ಣ, ಎಚ್.ಎಂ.ಬಂಗಾರು, ಫ್ರೆಂಡ್ಸ್ ಮ್ಯೂಸಿಕ್ ದೊರೆರಾಜ್, ನಾಗಯ್ಯ ಕುಮಾರ್, 26ನೇ ವಾರ್ಡ್‌ನ ನಗರಸಭಾ ಸದಸ್ಯೆ ಕುಮುದಾ, ಶಿಕ್ಷಕರ ಸಂಘದ ಅಧ್ಯಕ್ಷ ರಾಮಸ್ವಾಮಿ, ಕೃಷ್ಣಮೂರ್ತಿ, ಪುಟ್ಟಸ್ವಾಮಿ, ಶಾಂತರಾಜು, ಶಿವಮೂರ್ತಿ, ದೊರೆಸ್ವಾಮಿ, ಕಲಾವಿದರಾದ ಕೃಷ್ಣಯ್ಯ, ಚನ್ನಯ್ಯ ಇತರರು ಭಾಗವಹಿಸಿದ್ದರು.



## ರಾಮಸಮುದ್ರದಲ್ಲೂ ಶ್ರದ್ಧಾಂಜಲಿ



**ಚಾಮರಾಜನಗರ:** ವಯೋ ಸಹಜ ಖಾಯಿಲೆಯಿಂದ ಇಹಲೋಕ ತ್ಯಜಿಸಿದ ಸ್ವಾಭಿಮಾನಿ ಚಕ್ರವರ್ತಿ, ಸಂಸದ ವಿ.ಶ್ರೀನಿವಾಸಪ್ರಸಾದ್ ಅವರಿಗೆ ರಾಮಸಮುದ್ರದಲ್ಲಿ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ನಗರಸಭಾ ಮಾಜಿ ಸದಸ್ಯರು, ದೊಡ್ಡ ಯಜಮಾನರಾದ ಬಿ.ನಾಗರಾಜು ಮಾತನಾಡಿ, ಸಂಸದರಾದ ವಿ.ಶ್ರೀನಿವಾಸಪ್ರಸಾದ್ ಅವರು ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರ ತತ್ವ, ಸಿದ್ಧಾಂತಗಳನ್ನು ಅಳವಡಿಸಿಕೊಂಡಿದ್ದರು. ಅವರು ಶಾಸಕರು, ಸಚಿವರು ಹಾಗೂ ಸಂಸದರು, ಕೇಂದ್ರ ಸಚಿವರಾಗಿದ್ದು ರಾಜಕಾರಣದಲ್ಲಿ ಸುದೀರ್ಘ ಸೇವೆ ಸಲ್ಲಿಸುವ ಮೂಲಕ ದೇಶ, ರಾಜ್ಯ, ಜಿಲ್ಲೆಗೆ ತಮ್ಮದೆ ಆದ ಕೊಡುಗೆ ನೀಡಿದ್ದಾರೆ. ಅವರ ಆತ್ಮಕ್ಕೆ ಶಾಂತಿ ನೆಲೆಸಲಿ, ಅವರ ಕುಟುಂಬಕ್ಕೆ ದು:ಖ ಭರಿಸುವ ಶಕ್ತಿ ನೀಡಲಿ ಎಂದು ಆಶಿಸಿದರು.

ಸಭೆಯಲ್ಲಿ ಯಜಮಾನರಾದ ಪಾಪಣ್ಣ, ನಂಜುಂಡ.ಬಸವರಾಜು, ಮಹದೇವ, ಡಿ.ನಂಜಯ್ಯ ವಿ.ಶ್ರೀನಿವಾಸಪ್ರಸಾದ್ ಅಭಿಮಾನಿ ಬಳಗದ ಎನ್.ಪ್ರಸನ್ನ, ಚಿಗುರಿ ಬಂಗಾರು, ಬಸವರಾಜು, ವೇಣುಗೋಪಾಲ್, ಪರಶಿವಯ್ಯ, ರಾಜಪ್ಪ, ಕೆ.ನಾಗರಾಜು, ಆಂಜನೇಯ, ರಾಮು, ಶ್ರೀಧರ್, ಮಂಜು, ಇರುಪಿ ನಾಗೇಂದ್ರ, ಅಬ್ಬಾರಿ ರೇವಣ್ಣ, ಡಾ.ಬಿ.ಆರ್.ಅಂಬೇಡ್ಕರ್ ಯುವಕರ ಸಂಘ ಪ್ರಧಾನ ಕಾರ್ಯದರ್ಶಿ ಮನೋಜ್ ಮಸು ಭಾಗವಹಿಸಿದ್ದರು.

# ಶಾನ್ವಿ ಸತೀಶ್‌ಗೆ ಒಂದು ಚಿನ್ನ, ಎರಡು ಬೆಳ್ಳಿ

**ರಾಮನಗರ:** ದುಬೈನ ಪೊಲೀಸ್ ಒಳಾಂಗಣ ಕ್ರೀಡಾಂಗಣದಲ್ಲಿ ನಡೆದ 6 ರಿಂದ 8 ವರ್ಷದೊಳಗಿನ ಮಕ್ಕಳಿಗೆ ಅಂತರರಾಷ್ಟ್ರ ಮಟ್ಟದ ಟೇಕ್ವಾಂಡೋ ಸ್ಪಾರಿಂಗ್ ಮತ್ತು ಪ್ಯಾಟರ್ನ್ಸ್ ಸ್ಪರ್ಧೆಯಲ್ಲಿ ಭಾರತ ದೇಶದಿಂದ ಪ್ರತಿನಿಧಿಸಿದ ರಾಮನಗರದ ಶಾನ್ವಿ ಸತೀಶ್ ಒಂದು ಚಿನ್ನ, ಎರಡು ಬೆಳ್ಳಿ ಪದಕ ಗಳಿಸಿದ್ದಾರೆ. ಅಂತರ ರಾಷ್ಟ್ರ ಮಟ್ಟದ ಸ್ಪರ್ಧೆಯಲ್ಲಿ 6 ರಾಷ್ಟ್ರದ 250 ಸ್ಪರ್ಧಿಗಳು ಭಾಗಿಯಾಗಿದ್ದರು. ಇದರಲ್ಲಿ ಭಾರತ ದೇಶದಿಂದ 28 ಮಂದಿ ಸ್ಪರ್ಧಿಗಳು ಇದ್ದರು. ಯುಎಇ, ಕಜಾಕಿಸ್ತಾನ, ಬಾಂಗ್ಲಾದೇಶ, ರಷ್ಯಾ, ಇತಿಯೋಪಿಯ ಮತ್ತು ಉಜ್ಬೇಕಿಸ್ತಾನ್ ರಾಷ್ಟ್ರದ ಪ್ರತಿಸ್ಪರ್ಧಿಗಳು ಭಾಗವಹಿಸಿದ್ದರು. ಶಾನ್ವಿಗೆ ಅಂತಿಮ ಪಂದ್ಯದಲ್ಲಿ ಯುಎಇ ಸ್ಪರ್ಧಾಳು ಎದುರಾಳಿಯಾಗಿದ್ದರು. ಕೊನೆಯ ಸ್ಪಾರಿಂಗ್ ಪಂದ್ಯದಲ್ಲಿ ಶಾನ್ವಿ ಪ್ರಥಮ ಸ್ಥಾನ ಪಡೆದು ಚಿನ್ನದ ಪದಕ ಪಡೆದುಕೊಂಡರು. ರಾಮನಗರ ಜಿಲ್ಲಾ ಸರಕಾರಿ ನೌಕರರ ಸಂಘದ ಅಧ್ಯಕ್ಷ ಕೆ.ಸತೀಶ್ ಅವರ ಪುತ್ರಿಯಾಗಿದ್ದಾರೆ. ಒಂದು ಚಿನ್ನ, ಎರಡು ಬೆಳ್ಳಿ ಪದಕ ಗಳಿಸಿ ಭಾರತಕ್ಕೆ ಕೀರ್ತಿ ತಂದಿರುವ ಶಾನ್ವಿಗೆ ಜಿಲ್ಲಾಧಿಕಾರಿ ಡಾ. ಅವಿನಾಶ್ ಮೆನನ್ ರಾಜೇಂದ್ರನ್ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ದಿಗ್ವಿಜಯ್ ಬೋಡ್ಕೆ ಮತ್ತು ಉಪವಿಭಾಗಾಧಿಕಾರಿ ಬಿನೋಯ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ರಮೇಶ್ ಬಾಬು ಟಿ.ಜಿ ಮತ್ತು ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಜಿಲ್ಲಾ ಗೌರವಾಧ್ಯಕ್ಷ ಕಾಂತರಾಜು, ಕಾರ್ಯದರ್ಶಿ ಶಿವಸ್ವಾಮಿ, ಖಜಾಂಚಿ ರಾಜಶೇಖರ ಮೂರ್ತಿ, ಪ್ರಚಾರ ಸಮಿತಿ ಅಧ್ಯಕ್ಷ ಸತೀಶ್ ಹಾಗೂ ನೇಟಸ್ ಶಾಲೆಯ ಪ್ರಾಂಶುಪಾಲರು ಹಾಗೂ ಆಡಳಿತ ಮಂಡಳಿ ಮತ್ತು ತರಬೇತುದಾರ ಬಾಲರಾಜನ್ ರವರು ಅಭಿನಂದಿಸಿದ್ದಾರೆ.




## 15 ರಿಂದ ಉಚಿತ ಎಂಬ್ರಾಯಡರಿ ಆರಿ ವರ್ಕ್ ತರಬೇತಿ ಆರಂಭ

**ರಾಮನಗರ:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಎಂಬ್ರಾಯ್ಡರಿ, ಆರಿ ವರ್ಕ್ ಫ್ಯಾಬ್ರಿಕ್ ಪೇಟಿಂಗ್ ಕುರಿತ 30 ದಿನಗಳ ಉಚಿತ ತರಬೇತಿಯು ಮೇ 15 ರಿಂದ ಆರಂಭವಾಗಲಿದ್ದು, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ರಾಮನಗರ ಹಾಗೂ ತುಮಕೂರು ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವತಿಯರಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಅಭ್ಯರ್ಥಿಗಳು ಆಧಾರ್ ಕಾರ್ಡ್ನ್ನು ಹೊಂದಿರಬೇಕು ಹಾಗೂ ಬಿಪಿಎಲ್ ಕಾರ್ಡ್ ಅನ್ನು ಹೊಂದಿರುವ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ, ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಆಸಕ್ತರು ತಮ್ಮ ಹೆಸರನ್ನು ನೋಂದಾಯಿಸಲು ಮೇ 08 ಕೊನೆಯ ದಿನವಾಗಿದೆ. ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಅಥವಾ ಮೊಬೈಲ್ ಸಂಖ್ಯೆ: 9380162042, 9740982585 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೇಸಿಗೆ ಸಮಯದಲ್ಲಿನ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಆರೋಗ್ಯ ಶಿಕ್ಷಣ

**ರಾಮನಗರ:** ಕಾಲರಾ ಒಂದು ಬ್ಯಾಕ್ಟೀರಿಯಾ ಸೋಂಕಾಗಿದ್ದು ಇದು ಕಲುಷಿತ ನೀರು ಮತ್ತು ಅನಾರೋಗ್ಯಕರ ಆಹಾರ ಪದ್ಧತಿಯಿಂದ ಹರಡುವ ಸೋಂಕು. ಕಾಲರಾ ಸೋಂಕಿನ ಲಕ್ಷಣಗಳು ಆಹಾರ ಸೇವನೆಯ ನಂತರ ವಾಂತಿಯಾಗುವುದು, ಅತಿಯಾದ ನೀರಿನಿಂದ ಕೂಡಿದ ಬೇದಿ, ಅತಿಸಾರದ ಪರಿಣಾಮದಿಂದಾಗಿ ದೇಹದಲ್ಲಿ ನಿಶ್ಯಕ್ತಿ, ನಿರ್ಜಲೀಕರಣದಿಂದಾಗಿ ಬಾಯಿ, ಕಣ್ಣುಗಳು ಒಣಗುವುದು, ಮೂತ್ರ ವಿಸರ್ಜನೆ ಇಲ್ಲದಿರುವುದು, ವಿಪರೀತ ಬಾಯಾರಿಕೆ ಮತ್ತು ಸುಸ್ತು, ಅತಿಯಾದ ನಿದ್ದೆ, ತಲೆನೋವು, ಮಾಂಸಖಂಡಗಳ ಸೆಳೆತ, ಹೃದಯ ಬಡಿತ ಸಾಮಾನ್ಯಕಿಂತ ಹೆಚ್ಚಾಗುವುದ ಅಥವಾ ಕಡಿಮೆಯಾಗುವುದು, ದೇಹದ ತೂಕವು ಕಡಿಮೆಯಾಗುವುದು, ಇಂತಹ ಲಕ್ಷಣಗಳು ಕಂಡುಬಂದಲ್ಲಿ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿನೀಡಿ ಸೂಕ್ತ ಚಿಕಿತ್ಸೆ ಪಡೆಯುವ ಮೂಲಕ ಸಂಪೂರ್ಣ ಗುಣಪಡಿಸಬಹುದು ಎಂದು ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಅರ್ಪಿತ. ಕೆ.ಜೆ ಅವರು ತಿಳಿಸಿದರು. ಗೊಲ್ಲರಹಳ್ಳಿ ಗ್ರಾಮದಲ್ಲಿ ಜಿಲ್ಲಾಡಳಿತ ಜಿಲ್ಲಾಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ಜಿಲ್ಲಾ ಮಾಹಿತಿ ಶಿಕ್ಷಣ ಮತ್ತು ಸಂವಹನ ವಿಭಾಗ, ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿ ಮತ್ತು ಲಕ್ಷ್ಮೀಪುರ ಪ್ರಾಥಮಿಕ ಆರೋಗ್ಯ ಕೇಂದ್ರದ ಸಹಯೋಗದೊಂದಿಗೆ ಬೇಸಿಗೆ ಸಮಯದಲ್ಲಿನ ಮುನ್ನೆಚ್ಚರಿಕೆ ಕುರಿತು ಆಯೋಜಿಸಲಾಗಿದ್ದ ಆರೋಗ್ಯ ಶಿಕ್ಷಣ ಕಾರ್ಯಕ್ರಮದಲ್ಲಿ ಮಾತನಾಡಿದರು. ಸಾರ್ವಜನಿಕರು ಹಬ್ಬ, ಜಾತ್ರೆ, ಸಾರ್ವಜನಿಕ ಸಭೆ, ಸಮಾರಂಭಗಳಲ್ಲಿ ಕಾಲರಾ ತಡೆಗಟ್ಟಲು ಮುನ್ನೆಚ್ಚರಿಕೆ ಕ್ರಮಗಳಾದ ಕುಡಿಯುವ ನೀರಿನ ಶುದ್ಧತೆ ಬಗ್ಗೆ ಎಚ್ಚರ ವಹಿಸುವುದು. ಚೆನ್ನಾಗಿ ಕುದಿಸಿ ಆರಿಸಿದ ನೀರನ್ನು ಕುಡಿಯಬೇಕು, ಸೊಪ್ಪು ತರಕಾರಿಗಳನ್ನು ಶುದ್ಧವಾದ ನೀರಿನಿಂದ ಸ್ವಚ್ಛಗೊಳಿಸಿದ ನಂತರ ಸೇವಿಸುವುದು, ಶೌಚಾಲಯವನ್ನು ಬಳಸಿದ ನಂತರ ಹಾಗೂ ಆಹಾರವನ್ನು ತಯಾರಿಸುವ, ಸೇವಿಸುವ ಮೊದಲು ಸಾಬೂನು ಬಳಸಿ ಕೈಯನ್ನು ಚೆನ್ನಾಗಿ ತೊಳೆಯುವುದು, ಮನೆ ಆಹಾರ ಸೇವನೆಗೆ ಆದ್ಯತೆ ನೀಡಿ, ಅಸುರಕ್ಷಿತವಾಗಿ ತಯಾರಿಸಿದ ಹೊರಗಿನ ಆಹಾರವನ್ನು ಸೇವಿಸುವ ಮುನ್ನ ಎಚ್ಚರ ವಹಿಸುವುದು, ದೇಹದಲ್ಲಿ ಬಳಲಿಕೆ ಕಂಡುಬಂದರೆ ಓ.ಆರ್.ಎಸ್, ಉಪ್ಪು ಬೆರೆಸಿದ ನಿಂಬೆ ಪಾನಕ, ಹೆಚ್ಚಿನ ಪ್ರಮಾಣದಲ್ಲಿ ನೀರು ಕುಡಿಯುವುದರ ಬಗ್ಗೆ ಆರೋಗ್ಯ ಶಿಕ್ಷಣದ ಕುರಿತು ತಿಳಿಸಿದರು.



## ವಾರಸುದಾರರ ಪತ್ತೆಗೆ ಮನವಿ

**ರಾಮನಗರ:** ಬಿಡದಿ ಸುಭಾಷ್ ಆಸ್ಪತ್ರೆ ಮುಂಭಾಗದ ಬೆಂಗಳೂರು-ಮೈಸೂರು ರಸ್ತೆಯನ್ನು ದಾಟುತ್ತಿದ್ದ ಸುಮಾರು 40-45 ವರ್ಷದ ಅಪರಿಚಿತ ವ್ಯಕ್ತಿಗೆ ದ್ವಿಚಕ್ರ ವಾಹನವು ಅತಿವೇಗದಿಂದ ಬಂದು ಡಿಕ್ಕಿ ಹೊಡೆದಿರುವುದರಿಂದ ಅಪರಿಚಿತ ವ್ಯಕ್ತಿಯ ತಲೆಗೆ, ಹಣೆಗೆ, ಮೈಕೈ, ಕಾಲುಗಳೀಗೆ ಏಟಾಗಿ ರಕ್ತಗಾಯವಾಗಿ ಮೃತಪಟ್ಟಿರುತ್ತಾರೆ. ಮೃತರ ಹೆಸರು ಹಾಗೂ ವಿಳಾಸ ತಿಳಿದುಬಂದಿರುವುದಿಲ್ಲ. ಕೋಲುಮುಖ, 5.7 ಅಡಿ ಎತ್ತರ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಮೈಬಣ್ಣ, ಇವರು ಹಳದಿ-ಕಾಫಿ ಮಿಶ್ರಿತ ಚೆಕ್ಸ್ ಬಣ್ಣದ ಷರ್ಟ್, ಮಾಸಲು ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ. ಇವರ ವಾರಸುದಾರರು ಯಾರದರು ಇದ್ದಲ್ಲಿ ಪೊಲೀಸ್ ಸಬ್‌ಇನ್ಸ್ಪೆಕ್ಟರ್, ಬಿಡದಿ ಪೊಲೀಸ್ ಠಾಣೆ, ರಾಮನಗರ ಜಿಲ್ಲೆ ಇವರನ್ನು ಸಂಪರ್ಕಿಸಬಹುದಾಗಿದೆ.

# ಶ್ರೀನಿವಾಸ್ ಪ್ರಸಾದ್ ಭಾವಚಿತ್ರಕ್ಕೆ ಪುಷ್ಪಾರ್ಚನೆ

**ಹನೂರು:** ರಾಜಕೀಯ ಹಿರಿಯ ಮುತ್ಸದ್ಧಿ ದಲಿತರ ಕಣ್ಮಣಿ ಧೀಮಂತ ನಾಯಕ ಸರಳ ಸಜ್ಜನಿಕೆಯ ರಾಜಕಾರಿಣಿ ಮರೆಯದ ಮಾಣಿಕ್ಯ ಸಂಸದ ವಿ.ಶ್ರೀನಿವಾಸ್ ಪ್ರಸಾದ್ ಅವರ ಅಕಾಲಿಕ ಮರಣದಿಂದ ರಾಜ್ಯಕ್ಕೆ ಹಾಗೂ ದಲಿತ ಮತ್ತು ಶೋಷಿತ ಸಮುದಾಯಕ್ಕೆ ತುಂಬಲಾರದ ನಷ್ಟ ಉಂಟಾಗಿದೆ. ಎಂದು ದಲಿತ ಮುಖಂಡ ಕಿರಣ್ ಹೇಳಿದರು.

ಪಟ್ಟಣದ ಮುಖ್ಯರಸ್ತೆ ಡಾ.ಬಿ.ಆರ್.ಅಂಬೇಡ್ಕರ್ ವೃತ್ತ ಹಾಗೂ ಪೊಲೀಸ್ ಠಾಣೆ ಮುಂಭಾಗದಲ್ಲಿ ದಲಿತ ಸಮಾಜದ ಮುಖಂಡರಿಂದ ಸಂಸದ ವಿ. ಶ್ರೀನಿವಾಸ್ ಪ್ರಸಾದ್ ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ 2 ನಿಮಿಷ ಕಾಲ ಮೌನಾಚರಣೆ ಮಾಡಿ ಅವರ ಆತ್ಮಕ್ಕೆ ಶಾಂತಿ ಕೋರಿ ಮಾತನಾಡಿದ ಅವರು ವಿ. ಶ್ರೀನಿವಾಸ್ ಪ್ರಸಾದ್ ರವರು ಹಿರಿಯ ರಾಜಕಾರಿಣಿಗಳಲ್ಲಿ ಒಬ್ಬರು ಹನೂರು ವಿಧಾನಸಭಾ ಕ್ಷೇತ್ರಕ್ಕೆ ಅವರ ಕೊಡುಗೆ ಅಪಾರ ಎಲ್ಲಾ ವರ್ಗದ ಜನರನ್ನು ಪ್ರೀತಿ ವಿಶ್ವಾಸದಿಂದ ಕಾಣುತ್ತಿದ್ದರು. ಅವರ ನೆನಪು ಅಜರಾಮರ ಎಂದರು

ಸರಳ ಸಜ್ಜನಿಕೆಯ ವ್ಯಕ್ತಿತ್ವವುಳ್ಳ ರಾಜಕಾರಣಿ ಆಗಿದ್ದ ಪ್ರಸಾದ್ ಅವರ ಅಗಲಿಕೆ ಎಲ್ಲಾ ವಗ9ದ ಜನರಿಗೆ ತುಂಬಲಾರದ ನಷ್ಟ ಉಂಟು ಮಾಡಿದೆ. ಅಲ್ಲದೆ ಶಾಂತ ಸ್ವರೂಪಿ ಸರಳತೆಗೆ ಮತ್ತೊಂದು ಹೆಸರೆ ಶ್ರೀ ನಿವಾಸ್ ಪ್ರಸಾದ್ ಕೇಂದ್ರದ ವಾಜಪೇಯಿ ಸಂಪುಟದಲ್ಲಿ ಕೇಂದ್ರ ಸರ್ಕಾರದಲ್ಲಿ ಮಂತ್ರಿಯಾಗಿದರು. ಹಾಗೆಯೆ ರಾಜ್ಯ ಸರ್ಕಾರದಲ್ಲೂ ಸಹ ಮಂತ್ರಿಯಾಗಿ ಉತ್ತಮ ಜನ ಮೆಚ್ಚುವ ಕೆಲಸ ಕಾರ್ಯವನ್ನು ಮಾಡಿದ್ದಾರೆ. ಎಂದರು



**ತಾಲೂಕಿನಾದ್ಯಂತ ಭಾವಪೂರ್ಣ ಶ್ರದಾಂಜಲಿ ಸಲ್ಲಿಕೆ:** ಸಂಸದ ವಿ. ಶ್ರೀನಿವಾಸ್ ಪ್ರಸಾದ್ ಅವರ ಅಗಲಿಕೆಯ ಹಿನ್ನಲೆ ತಾಲೂಕಿನ ಗ್ರಾಮ ಗಳಲ್ಲಿ ಪಕ್ಷಾತೀತವಾಗಿ ದಲಿತ ನಾಯಕ ಸ್ವಾಭಿಮಾನಿ ಸಂಕೇತ ಶ್ರೀನಿವಾಸ್ ಪ್ರಸಾದ್ ರವರಿಗೆ ದಲಿತ ಮುಖಂಡರು ಯಜಮಾನರು ಕಾರ್ಯಕರ್ತರು ಹಾಗೂ ಪ್ರಸಾದ್ ರವರ ಅಭಿಮಾನಿ ಬಳಗದವರು ಭಾವಪೂರ್ಣ ಶ್ರದಾಂಜಲಿ ಸಲ್ಲಿಸಲಾಯಿತು.

ಈ ವೇಳೆ ಯಜಮಾನರಾದ ಲಿಂಗರಾಜು ಚಿಕ್ಕಣ್ಣ ಸಿದ್ದರಾಜು ಮುಖಂಡರಾದ ಕಿರಣ್ ಅಶೋಕ ನಂಜಪ್ಪ ಪ್ರಸನ್ನ ಪುಟ್ಟರಾಜು ಗೋವಿಂದರಾಜು ರಾಜಣ್ಣ ಸಿದ್ದರಾಜು ಸಂಪತ್ತು ನಾಗಬಸಪ್ಪ ವಿನೋದ ಸಾಗರ್ ಇನ್ನಿತರರು ಇದ್ದರು.

# ಹೆಚ್ಚುತ್ತಿರುವ ಬಿಸಿಲಿನ ತಾಪ; ಆಸ್ಪತ್ರೆ ಪಾಲಾಗುತ್ತಿರುವ ಸಾರ್ವಜನಿಕರು

**ವಿಜಯಪುರ;** ನಿರಂತರವಾಗಿ ಬಿಸಿಲಿನ ತಾಪ ಹೆಚ್ಚಾಗುತ್ತಿದ್ದು ಪಟ್ಟಣದ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ಸಾಮಾನ್ಯಕ್ಕಿಂತ ನಾಲ್ಕು ಐದು ಪಟ್ಟು ಹೆಚ್ಚಿನ ರೋಗಿಗಳು ಆಸ್ಪತ್ರೆಗೆ ಹೋಗುವಂತಾಗಿದೆ.

ಇಲ್ಲಿನ ಸರ್ಕಾರಿ ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿಗಳಾದ ಡಾ. ಶ್ರೀಧರ್ ರವರು ಮಾತನಾಡುತ್ತ ನಿರಂತರವಾಗಿ ಬಿಸಿಲಿನ ತಾಪ ಹೆಚ್ಚಾಗುತ್ತಿದ್ದು, ಸಾರ್ವಜನಿಕರಲ್ಲಿ ವಾಂತಿ ಭೇದಿ, ಕಾಲರ, ಹೆಪಟೈಟಿಸ್, ಹಾಗೂ ಕರುಳಿಗೆ ಸಂಬಂಧಿಸಿದ ಕಾಯಿಲೆಗಳು ಹೆಚ್ಚಾಗುತ್ತಿದ್ದು ಮತ್ತೊಂದೆಡೆ ರಕ್ತದೊತ್ತಡ ಹಾಗೂ ಡಿಹೈಡ್ರೇಶನ್ (ನಿರ್ಜಲೀಕರಣ)ಆಗುವುದರೊಂದಿಗೆ ಆಸ್ಪತ್ರೆಯಲ್ಲಿ ರೋಗಿಗಳ ಸಂಖ್ಯೆ ಹೆಚ್ಚಾಗಿದ್ದು ಆಸ್ಪತ್ರೆಯಲ್ಲಿ ಎಲ್ಲಾ ಅವಶ್ಯಕ ಸೇವೆಗಳು ಲಭ್ಯವಿದೆ ಎಂದು ತಿಳಿಸಿದರು.

ದೇಹದ ಉಷ್ಣಾಂಶ ಎಲ್ಲರಲ್ಲಿಯೂ ಹೆಚ್ಚಾಗುತ್ತಿದ್ದು ಆಸ್ಪತ್ರೆಗೆ ಬರುವ ರೋಗಿಗಳಿಗೂ ಗ್ಲುಕೋಸ್ ನೀಡಲಾಗುತ್ತಿದ್ದು ಬಹಳಷ್ಟು ಮಂದಿಯಲ್ಲಿ ನೀರು ಸೇವನೆ ಕಡಿಮೆ ಇರುವುದರಿಂದ, ಯೂರಿನರಿ ಇನ್ಫೆಕ್ಷನ್(ಸೋಂಕು) ಸಹ ಹೆಚ್ಚಾಗುತ್ತಿದೆ. ಅದಕ್ಕಾಗಿ ಪ್ರತಿಯೊಬ್ಬರು ಪ್ರತಿದಿನ ಶುದ್ಧವಾದ ಐದರಿಂದ ಆರು ಲೀಟರ್ ನೀರನ್ನು ಕುಡಿಯಬೇಕಾಗಿದೆ, ಇದರೊಂದಿಗೆ ದೇಹವನ್ನು ತಂಪಾಗಿಸಲು ಎಳನೀರು, ಮಜ್ಜಿಗೆ ತಾಜಾ ಹಣ್ಣುಗಳಿಂದ ತಯಾರಿಸಿದ ತಂಪಾದ ಹಣ್ಣಿನ ರಸಗಳು ನಿಂಬೆಹಣ್ಣಿನ ಜ್ಯೂಸು, ಆರೆಂಜ್, ದ್ರಾಕ್ಷಿ ,ಸೌದೆ ಕಾಯಿ, ಕಲ್ಲಂಗಡಿ ಮುಂತಾದವುಗಳನ್ನು ಹೆಚ್ಚಾಗಿ ಬಳಸಬೇಕೆಂದು ತಿಳಿಸಿದರು. ಇದರ ಜೊತೆ ಎಲ್ಲೆಡೆ ಜಾತ್ರೆ, ತೇರು ಮುಂತಾದವು ಹೆಚ್ಚಾಗಿದ್ದು ಅಲ್ಲಿ ಸ್ವಚ್ಛತೆ ಹಾಗೂ ಶುದ್ಧತೆ ಕಡಿಮೆ ಇದ್ದು ಸ್ವಚ್ಛತೆ ಇಲ್ಲದ ಕೈಗಳಿಂದ ಮಜ್ಜಿಗೆ, ಪಾನಕ ಮಾಡಿ ಅದು ಇನ್ನಿತರರು ಬಳಸುವುದರಿಂದ ವಾಂತಿ ಭೇದಿ, ಕಾಲರ ಮತ್ತಿತರೆ ಕಾಯಿಲೆಗಳು ಸಂಭವಿಸಲಿದೆ ಎಂದು ಶುದ್ಧವಾದ ನೀರು ದೊರೆಯುದ ಸಂದರ್ಭದಲ್ಲಿ ಮನೆಗಳಲ್ಲಿ ಕಾಯಿಸಿ ಆರಿಸಿದ ನೀರನ್ನು ಬಳಸಬೇಕೆಂದು ತಿಳಿಸಿದರು.



# ಸಂಜೆ ಟಿಪ್ಸ್

## ಕೆನರಾ ಎಚ್‌ಎಸ್ಬಿಸಿ ಜೀವವಿಮೆಯವರ ಪ್ರಾಮಿಸ್ 4ಗ್ರೋತ್ಒಂದಿಗೆ ಅಭಿವೃದ್ಧಿ ಮತ್ತು ಹಣಕಾಸು ಭದ್ರತೆ

ಕೆನರಾ ಎಚ್‌ಎಸ್ಬಿಸಿಜೀವವಿಮೆಯು, ಹಣಕಾಸು ಅಭಿವೃದ್ಧಿ ಹಾಗೂ ಭದ್ರತೆಯೆಡೆಗೆ ಪಯಣ ಬೆಳೆಸುತ್ತಿರುವ ಗ್ರಾಹಕರಿಗಾಗಿಯೇ ವಿನ್ಯಾಸಗೊಂಡಿರುವ ಒಂದು ಹೊಸ ಯೂನಿಟ್ ಲಿಂಕ್ಡ್ ವಿಮಾಯೋಜನೆ ಪ್ರಾಮಿಸ್4ಗ್ರೋತ್ ಪರಿಚಯಿಸಿದೆ. ಈ ಉತ್ಪನ್ನವು, ಸಮಗ್ರವಾದ ರಕ್ಷಣೆಯನ್ನು ಆಕರ್ಷಕ ಹೂಡಿಕೆ ವಿಧಾನಗಳೊಂದಿಗೆ ತಡೆಯಿಲ್ಲದ ಸಂಯೋಜನೆ ಮಾಡುವ ಮೂಲಕ ಸಮಗ್ರವಾದ ಹಣಕಾಸು ಪರಿಹಾರಗಳನ್ನು ಒದಗಿಸುವೆಡೆಗಿನ ನಮ್ಮ ಬದ್ಧತೆಯನ್ನು ಎತ್ತಿಹಿಡಿಯುತ್ತದೆ.

ಕೆನರಾ ಎಚ್‌ಎಸ್ಬಿಸಿಜೀವವಿಮೆಯ ``Promise4Growth", ಸರಿಸಾಟಿಯಿಲ್ಲದ ಪರಿವರ್ತನೀಯತೆ, ''ಮಿಡ್ಕ್ಯಾಪ್ ಮೊಮೆಂಟಮ್ ಗ್ರೋತ್ ಇಂಡೆಕ್ಸ್ ಫಂಡ್'' ಎಂಬ ಹೊಸ ನಿಧಿ ಒಳಗೊಂಡಂತೆ ಅನೇಕ ಹೂಡಿಕೆ ಆಯ್ಕೆಗಳು, ಹಾಗೂ ಗಣನೀಯವಾದ ಬೆಳವಣಿಗೆ ಸಂಭಾವ್ಯತೆಗಳನ್ನು ವ್ಯಕ್ತಿಗಳಿಗೆ ಒದಗಿಸುತ್ತದೆ. ``Promise4Growth"ನೊಂದಿಗೆ ಗ್ರಾಹಕರು, ಹಣಕಾಸು ಅಭಿವೃದ್ಧಿಯೆಡೆಗೆ ತಮ್ಮ ಪಯಣವನ್ನು ಪ್ರಾರಂಭಿಸಿ, ಅನೇಕ ನಿಧಿಗಳು ಮತ್ತು ವಿವಿಧ ಆರ್ಥಿಕ ಆವರ್ತನಗಳು ಹಾಗೂ ಮೈಲುಗಲ್ಲುಗಳನ್ನು ಸಾಧಿಸಲು ಲಭ್ಯವಿರುವ ನಿಧಿಗಳ ನಡುವೆ ತಡೆರಹಿತವಾಗಿ ಪರಿವರ್ತನೆ ಹೊಂದುವ ಸಾಮರ್ಥ್ಯವನ್ನು ಪಡೆದುಕೊಳ್ಳಬಹುದು. ಕೆನರಾ ಎಚ್‌ಎಸ್ಬಿಸಿ ಜೀವವಿಮೆಯ ಆಲ್ಟರ್ನೇಟ್ ಚಾನಲ್ಸ್, ಚೀಫ್ ಡಿಸ್ಟ್ರಿಬ್ಯೂಶನ್ ಆಫಿಸರ್ ಮತ್ತು ಚೀಫ್ ಸ್ಟ್ರಾಟಜಿ ಆಫಿಸರ್ ಶ್ರೀ ರಿಶಿ ಮಾಥುರ್, ''ವ್ಯಕ್ತಿಗಳ ವೈವಿಧ್ಯಮಯವಾಸ ಹಣಕಾಸು ಗುರಿಗಳನ್ನು ಪೂರೈಸುವುದಕ್ಕಾಗಿಯೇ ವಿಶೇಷವಾಗಿ ವಿನ್ಯಾಸಗೊಂಡಿರುವ ನಮ್ಮ ಇತ್ತೀಚಿನ ULIP ಉತ್ಪನ್ನವಾದ ``Promise4Growth"ಅನ್ನು ಅನಾವರಣಗೊಳಿಸಲು ನಮಗೆ ಅತ್ಯಂತ ಹರ್ಷವಾಗುತ್ತಿದೆ.`

## ಬಿಸಿ ಬೇಳೆ ಬಾತ್ ಪುಡಿ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

**ಒಣ ಮೆಣಸು - 100 ಗ್ರಾಮ್, ಕೊತ್ತಂಬರಿ ಕಾಳು - ಅರ್ಧ ಕಪ್ (50 ಗ್ರಾಮ್), ಗಸಗಸೆ - 1Tbsp, ಜೀರಿಗೆ, ಮೆಂತ್ಯ -1 Tbsp, ಇಂಗು, ಕಡಲೆ ಬೇಳೆ- 2 Tbsp, ಉದ್ದಿನ ಬೇಳೆ- 1Tbsp, ಚಕ್ಕೆ , ಲವಂಗ, ಏಲಕ್ಕಿ, ಕರಿ ಮೆಣಸು, ಬಿಳಿ ಎಳ್ಳು, ಕಲ್ಲು ಉಪ್ಪು, ಕರಿ ಬೇವು**

### ಮಾಡುವ ವಿಧಾನ

ಮೊದಲು ಪಾತ್ರೆಯನ್ನು ಒಲೆ ಮೇಲಿಟ್ಟು ಅದಕ್ಕೆ ಕಡಲೆ ಬೇಳೆ ಹಾಗೂ ಉದ್ದಿನ ಬೇಳೆ ಹಾಕಿ 2ರಿಂದ 3 ನಿಮಿಷಗಳ ಕಾಲ ಹುರಿದುಕೊಳ್ಳಿ. ಇದು ಬ್ರೌನ್ ಕಲರ್ ಬರುವವರೆಗೆ ಹುರಿದುಕೊಳ್ಳಿ. ಬಳಿಕ ಎರಡನ್ನು ತೆಗೆದಿಟ್ಟುಕೊಳ್ಳಿ. ಮತ್ತೆ ಅದೇ ಪಾತ್ರೆಗೆ ಮೆಂತ್ಯ, ಜೀರಿಗೆ, ಲವಂಗ, ಎಳ್ಳು, ಚಕ್ಕೆ, ಕರಿಮೆಣಸು ಎಲ್ಲವನ್ನು ಹಾಕಿಕೊಂಡು ಚೆನ್ನಾಗಿ ಫ್ರೈ ಮಾಡಿಕೊಳ್ಳಿ. 2 ನಿಮಿಷ ಫ್ರೈ ಆದ ಮೇಲೆ ಎಲ್ಲವನ್ನು ತೆಗೆದಿಟ್ಟುಕೊಳ್ಳಿ. ಮತ್ತೆ ಇದೇ ಪಾತ್ರೆಗೆ ಒಣ ಮೆಣಸು ಹಾಕಿ ಫ್ರೈ ಮಾಡಿ. ಫ್ರೈ ಮಾಡುವಾಗ 1 ಸ್ಪೂನ್ ಎಣ್ಣೆ ಹಾಕಿಕೊಳ್ಳಿ. ಇದಕ್ಕೆ ಕರಿಬೇವು ಹಾಕಿ ಹುರಿದುಕೊಳ್ಳಿ. ಸುಮಾರು 2 ನಿಮಿಷ ಫ್ರೈ ಮಾಡಿದರೆ ಸಾಕು. ಇದನ್ನು ಹುರಿದ ಬಳಿಕ ತೆಗೆದಿಟ್ಟು ತಣ್ಣಗಾಗಲು ಇಡಿ. ಎಲ್ಲ ವಸ್ತುಗಳು ತಣ್ಣಗಾದ ಬಳಿಕ ಅದನ್ನು ಮಿಕ್ಸಿ ಜಾರ್ಗೆ ಹಾಕಿಕೊಂಡು ರುಬ್ಬಿಕೊಳ್ಳಿ. ಈ ವೇಳೆ ನೀರು ಬಳಸದೆ ನುಣುಪಾಗಿ ಪುಡಿಯಾಗುವಂತೆ ರುಬ್ಬಿಕೊಳ್ಳಿ. ಈ ರೀತಿ ರುಬ್ಬುವಾಗಲೇ ನೀವು ಕಲ್ಲು ಉಪ್ಪು ಮಿಕ್ಸ್ ಮಾಡಿಕೊಳ್ಳಿ, ಕಲ್ಲುಪ್ಪು ಬಳಸುವುದರಿಂದ ಈ ಪುಡಿ ಹಾಳಾಗದಂತೆ ತುಂಬ ದಿನಗಳ ಕಾಲ ಇಡಬಹುದು. ಇಷ್ಟಾದರೆ ನಿಮ್ಮ ಮುಂದೆ ಬಿಸಿ ಬೇಳೆ ಬಾತ್ ಮಾಡಲು ಪುಡಿ ರೆಡಿಯಾಗುತ್ತದೆ.

## ಶಾರುಖ್ ಖಾನ್ ಪುತ್ರಿ ಸುಹಾನಾ ಖಾನ್ ಬ್ರೇಕಪ್ ಸುದ್ದಿ ವೈರಲ್



ಬಾಲಿವುಡ್ ಬಾದ್ಷಾ ಶಾರುಖ್ ಖಾನ್ ಪುತ್ರಿ ಸುಹಾನಾ ಖಾನ್ ಕಳೆದ ವರ್ಷ ಬಿಡುಗಡೆಯಾದ ?ದಿ ಆರ್ಚೀಸ್? ಸಿನಿಮಾ ಮೂಲಕ ಬಣ್ಣದ ಲೋಕ ಪ್ರವೇಶಿಸಿದರು. ಜೋಯಾ ಅಖ್ತರ್ ಮತ್ತು ರೀಮಾ ಕಾಗ್ತಿ ನಿರ್ದೇಶನದ 'ದಿ ಆರ್ಚೀಸ್' ಸಿನಿಮಾದಲ್ಲಿ ಸುಹಾನಾ ಜತೆಗೆ ಅಮಿತಾಭ್ ಬಚ್ಚನ್ ಮತ್ತು ಜಯಾ ಬಚ್ಚನ್ ಅವರ ಮೊಮ್ಮಗ ಅಗಸ್ತ್ಯ ನಂದಾ ಕೂಡ ನಟಿಸಿದ್ದರು.

ಈ ವೇಳೆ ಅವರಿಬ್ಬರು ಡೇಟಿಂಗ್ ನಡೆಸುತ್ತಿದ್ದರು ಎನ್ನುವ ಗುಸುಗುಸು ಹಬ್ಬಿತ್ತು. ಆದರೆ ಈ ಬಗ್ಗೆ ಇನ್ನೂ ಸ್ಪಷ್ಟನೆ ಸಿಕ್ಕಿಲ್ಲ. ಇದೀಗ ಸುಹಾನಾ ಖಾನ್ ತಮ್ಮ ಬ್ರೇಕಪ್ ಘೋಷಿಸಿದ್ದಾರೆ. ಅಷ್ಟಕ್ಕೂ ಅವರು ಸಂಬಂಧ ಮುರಿದುಕೊಂಡಿದ್ದ ಗೆಳೆಯನ ಜತೆ ಅಲ್ಲ.

ಸುಹಾನಾ ಖಾನ್ ಅಭಿನಯಿಸಿರುವ ಹೊಸ ಜಾಹೀರಾತು ಪ್ರಸಾರವಾಗಿದೆ. ಅದರಲ್ಲಿ ಆಕೆ ತಾನು ಸೋಪ್ನೊಂದಿಗೆ ಬ್ರೇಕಪ್ ಮಾಡಿಕೊಂಡು ಬಾಡಿ ವಾಶ್ನ ಸಖ್ಯ ಬೆಳೆಸಿರುವುದಾಗಿ ತಿಳಿಸಿದ್ದಾರೆ. ಹೌದು, ಭಾರತದ ಜನಪ್ರಿಯ ಲಕ್ಸ್ ಬ್ರ್ಯಾಂಡ್ನ ರೂಪದರ್ಶಿಯಾಗಿ ಸುಹಾನಾ ಖಾನ್ ನಟಿಸಿದ್ದಾರೆ. ಅದರಲ್ಲಿ ಅವರು ಇನ್ನು ಮುಂದೆ ಸೋಪ್ ಬಳಕೆ ಬಿಟ್ಟು ಬಾಡಿ ವಾಶ್ ಉಪಯೋಗಿಸುವುದಾಗಿ ತಿಳಿಸಿದ್ದಾರೆ.

ಶಾರುಖ್ ಖಾನ್ ಸುಮಾರು 19 ವರ್ಷಗಳಿಂದ ಲಕ್ಸ್ ಉತ್ಪನ್ನದ ರಾಯಭಾರಿಯಾಗಿ ಗುರುತಿಸಿಕೊಂಡಿದ್ದಾರೆ. ಇದೀಗ ಕಂಪನಿ ಅವರನ್ನು ಕೈಬಿಟ್ಟು ಅವರ ಪುತ್ರಿಗೆ ಮಣೆ ಹಾಕಿದೆ. ಅದರಂತೆ ಸುಹಾನಾ ಕಾಣಿಸಿಕೊಂಡಿರುವ ಲಕ್ಸ್‌ನ ಮೊದಲ ಜಾಹೀರಾತು ಮಂಗಳವಾರ ಪ್ರಸಾರವಾಗಿದೆ. ಬಾತ್ರೂಮ್ನಲ್ಲಿ ಸುಹಾನಾ ಓಡಾಡುತ್ತಿರುವುದನ್ನು ತೋರಿಸುವ ಮೂಲಕ ಜಾಹೀರಾತು ಆರಂಭವಾಗುತ್ತದೆ. ಈ ವೇಳೆ ಅವರು ಸೋಪ್ನೊಂದಿಗೆ ಬ್ರೇಕಪ್ ಮಾಡಿಕೊಂಡಿರುವುದಾಗಿ ತಿಳಿಸುತ್ತಾರೆ. ಸೋಪ್ನ ಸುಗಂಧ ಕೆಲವು ಹೊತ್ತಿನಲ್ಲೇ ಮಾಯವಾಗುತ್ತದೆ. ಹೀಗಾಗಿ ಲಕ್ಸ್‌ನ ಹೊಸ ಉತ್ಪನ್ನ ಬಾಡಿ ವಾಶ್ ಬಳಸುವುದಾಗಿ ತಿಳಿಸುತ್ತಾರೆ. ಸದ್ಯ ಶಾರುಖ್ ಪುತ್ರಿಯ ಈ ಜಾಹೀರಾತು ಸಾಕಷ್ಟು ವೈರಲ್ ಆಗಿದೆ. ಈ ಜಾಹೀರಾತನ್ನು ನೋಡಿದ ಅನೇಕರಿಗೆ ಶಾರುಖ್ ಖಾನ್ ನೆನಪಿಗೆ ಬಂದಿದ್ದಾರೆ. ಅವರು 2005ರಲ್ಲಿ ಮೊದಲ ಬಾರಿ ಲಕ್ಸ್ ಜಾಹೀರಾತಿನಲ್ಲಿ ಕಾಣಿಸಿಕೊಂಡ ರೀತಿಯನ್ನು ಸ್ಮರಿಸಿಕೊಂಡಿದ್ದಾರೆ. ಅದರಲ್ಲಿ ಶಾರುಖ್ ಬಾತ್ ಟಬ್ ಬಳಿ ಬರುತ್ತಾರೆ. ಅಲ್ಲಿ ಹೇಮಾ ಮಾಲಿನಿ, ಜೂಹು ಚಾವ್ಲಾ, ಕರೀನಾ ಕಪೂರ್ ಮತ್ತು ಶ್ರೀದೇವಿ ನಿಂತಿರುತ್ತಾರೆ. ಸದ್ಯ ಇದನ್ನೂ ಫ್ಯಾನ್ಸ್ ಪ್ರಸ್ತಾವಿಸಿದ್ದಾರೆ. ಸುಹಾನಾ ಖಾನ್ ಅಭಿನಯದ ಮೊದಲ ಚಿತ್ರ 'ದಿ ಆರ್ಚೀಸ್' ಒಟಿಟಿಯಲ್ಲಿ ತೆರೆಕಂಡು ಪ್ರೇಕ್ಷಕರಿಂದ ಮಿಶ್ರ ಪ್ರತಿಕ್ರಿಯೆ ಪಡೆದುಕೊಂಡಿತ್ತು. ಸದ್ಯ ಅವರು ಶಾರುಖ್ ಖಾನ್ ಅವರೊಂದಿಗೆ ತೆರೆ ಹಂಚಿಕೊಳ್ಳಲು ಸಿದ್ಧತೆ ನಡೆಸುತ್ತಿದ್ದಾರೆ.

## ತೂಕ ಕಡಿಮೆ ಮಾಡಿಕೊಳ್ಳಲು ಹೀಗೆ ಮಾಡಿ?

### ಹೆಲ್ತ್ ಟಿಪ್ಸ್



ಎಲೆಕೋಸಿನಲ್ಲಿ ವಿಟಮಿನ್ ಸಿ ಮತ್ತು ವಿಟಮಿನ್ ಎ ಉತ್ತಮ ಪ್ರಮಾಣದಲ್ಲಿ ಕಂಡುಬರುತ್ತದೆ.ಎಲೆಕೋಸು ಟಾರ್ಟಾರಿಕ್ ಆಮ್ಲವನ್ನು ಹೊಂದಿರುತ್ತದೆ, ಇದು ಸಕ್ಕರೆ ಮತ್ತು ಕಾರ್ಬೋಹೈಡ್ರೇಟ್ಗಳನ್ನು ಕೊಬ್ಬಾಗಿ ಪರಿವರ್ತಿಸುವುದನ್ನು ತಡೆಯುತ್ತದೆ ಮತ್ತು ತೂಕವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

ಆಂಟಿಆಕ್ಸಿಡೆಂಟ್ ವಿಟಮಿನ್ ಅಂಶಗಳು ಸೌತೆಕಾಯಿಯಲ್ಲಿ ಕಂಡುಬರುತ್ತವೆ. ಸೌತೆಕಾಯಿಯಲ್ಲಿ ಸಾಕಷ್ಟು ಪ್ರಮಾಣದ ನೀರು ಇರುತ್ತದೆ. ಸೌತೆಕಾಯಿಯನ್ನು ಸೇವಿಸುವ ಮೂಲಕ ಕ್ಯಾಲೊರಿಗಳನ್ನು ಕಡಿಮೆ ಮಾಡಬಹುದು. ಸೌತೆಕಾಯಿ ನಿಮ್ಮ ತೂಕವನ್ನು ಕಡಿಮೆ ಮಾಡಲು ಸಹ ಸಹಾಯ ಮಾಡುತ್ತದೆ.

ನಿಂಬೆಯು ಜೀವಸತ್ವಗಳು, ಥಯಾಮಿನ್, ರೈಬೋಫ್ಲಾವಿನ್, ನಿಯಾಸಿನ್, ವಿಟಮಿನ್ ಬಿ-6, ಫೋಲೇಟ್ ಮತ್ತು ವಿಟಮಿನ್ ಇ ಅಂಶಗಳನ್ನು ಒಳಗೊಂಡಿದೆ, ಇದು ಕ್ಯಾಲೊರಿಗಳನ್ನು ಕಡಿಮೆ ಮಾಡಲು ಅತ್ಯುತ್ತಮ ಆಯ್ಕೆಯಾಗಿದೆ. ಬೆಳಿಗ್ಗೆ ನಿಂಬೆ ನೀರನ್ನು ಕುಡಿಯುವುದರಿಂದ ತೂಕವನ್ನು ಕಡಿಮೆ ಮಾಡಬಹುದು.

ಬೆಳಿಗ್ಗೆ ಕ್ಯಾರೆಟ್ ಜ್ಯೂಸ್ ಕುಡಿಯುವುದು ಆರೋಗ್ಯಕ್ಕೆ ಒಳ್ಳೆಯದು. ಕ್ಯಾರೆಟ್ ರಸವು ಯಕೃತ್ತನ್ನು ಬಲಪಡಿಸುತ್ತದೆ ಮತ್ತು ಅದರ ಕಾರ್ಯ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ. ಕ್ಯಾರೆಟ್ನಲ್ಲಿ ಕಡಿಮೆ ಕ್ಯಾಲೋರಿ ಇರುವುದರಿಂದ ತೂಕವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

ಅಣಬೆಗಳು ರುಚಿಕರವಾಗಿದ್ದು, ಸಸ್ಯಾಹಾರಿಗಳು ಮತ್ತು ಮಾಂಸಾಹಾರಿಗಳು ಸಮಾನವಾಗಿ ಇಷ್ಟಪಡುತ್ತಾರೆ. ಅವರು ತಮ್ಮ ಪೌಷ್ಟಿಕಾಂಶದ ಮೌಲ್ಯವನ್ನು ಹೆಚ್ಚಿಸಲು ಕಾಫಿಗಳಲ್ಲಿ ಒಂದು ಘಟಕಾಂಶವಾಗಿ ಕಾಣಿಸಿಕೊಳ್ಳಲು ಪ್ರಾರಂಭಿಸಿದ್ದಾರೆ. ಅಣಬೆಗಳು ರಕ್ತದಲ್ಲಿನ ಗ್ಲೂಕೋಸ್ ಮಟ್ಟವನ್ನು ನಿಯಂತ್ರಿಸುವ ಮೂಲಕ ತೂಕ ನಷ್ಟ ಮತ್ತು ಕೊಬ್ಬನ್ನು ಸುಡುವುದನ್ನು ಉತ್ತೇಜಿಸುತ್ತದೆ ಎಂದು ತಿಳಿದುಬಂದಿದೆ.

ಇತ್ತೀಚಿನ ಅಧ್ಯಯನಗಳು ಮೆಣಸಿನಕಾಯಿಯ ಸೇವನೆಯಿಂದ ಉತ್ಪತ್ತಿಯಾಗುವ ಶಾಖವು ಹೆಚ್ಚಿನ ಕ್ಯಾಲೊರಿಗಳನ್ನು ಬಳಸಿಕೊಳ್ಳಲು ಸಹಾಯ ಮಾಡುತ್ತದೆ ಮತ್ತು ಮೂಲಭೂತವಾಗಿ ದೇಹದಲ್ಲಿ ಕೊಬ್ಬಿನ ಪದರಗಳನ್ನು ಆಕ್ಸಿಡೀಕರಿಸುತ್ತದೆ ಎಂದು ತೋರಿಸಿದೆ.

ಕಡಿಮೆ ಕ್ಯಾಲೋರಿಗಳು ಮತ್ತು ಹೆಚ್ಚಿನ ಫೈಬರ್ ಹೊಂದಿರುವ ಕುಂಬಳಕಾಯಿಯು ನಿಮ್ಮ ತೂಕ ನಷ್ಟ ಆಹಾರದಲ್ಲಿ ಸೇರಿಸಲು ಉತ್ತಮವಾದ ತರಕಾರಿಗಳಲ್ಲಿ ಒಂದಾಗಿದೆ.

## ಬೆಂಗಳೂರಿನ ಹೆಣ್ಣೂರಿನಲ್ಲಿ ರೈನ್ ಬೋ ಮಕ್ಕಳ ಕ್ಲಿನಿಕ್ ಮತ್ತು ಬರ್ತ್ ರೈಟ್ ಕ್ಲಿನಿಕ್ ಆರಂಭ



ರೈನ್ ಬೋ ಮಕ್ಕಳ ಆಸ್ಪತ್ರೆ, ಹೆಣ್ಣೂರಿನಲ್ಲಿ ತನ್ನ ಕ್ಲಿನಿಕ್ ಪ್ರಾರಂಭಿಸುವುದನ್ನು ಹೆಮ್ಮೆಯಿಂದ ಘೋಷಿಸುತ್ತಿದೆ. ಇದು ಸಮುದಾಯಕ್ಕೆ ಅತ್ಯುತ್ತಮ ಆರೋಗ್ಯ ಸೇವೆಗಳನ್ನು ವಿಸ್ತರಿಸುವ ಗುರಿ ಹೊಂದಿದೆ. ರೈನ್ ಬೋ ಮಕ್ಕಳ ಕ್ಲಿನಿಕ್ ಮತ್ತು ಬರ್ತ್ ರೈಟ್ ವುಮೆನ್ಸ್ ಕ್ಲಿನಿಕ್ ಈ ಗುಂಪಿನ 4ನೇ ಮತ್ತು ಬೆಂಗಳೂರಿನ ಇಂತಹ ಮೊದಲ ಕ್ಲಿನಿಕ್ ಆಗಿದ್ದು, ಮಕ್ಕಳ ಚಿಕಿತ್ಸೆ, ಪ್ರಸೂತಿ, ಸ್ತ್ರೀರೋಗ ಶಾಸ್ತ್ರ, ಭ್ರೂಣ ಔಷಧ ಮತ್ತು ಫರ್ಟಿಲಿಟಿ ಸೇರಿದಂತೆ ಸಮಗ್ರ ಹೊರರೋಗಿ ಸಮಾಲೋಚನೆ ಸೇವೆಗಳನ್ನು ಒದಗಿಸಲಿದೆ. ಈ ಯೋಜನೆ, ಈ ಪ್ರದೇಶದ ಕುಟುಂಬಗಳಿಗೆ ಲಭ್ಯವಿರುವ, ಉತ್ತಮ ಗುಣಮಟ್ಟದ ಆರೋಗ್ಯ ಸೇವೆಯನ್ನು ಒದಗಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ. ಕ್ಲಿನಿಕ್ ಹಿರಿಯ ಸಲಹಾತಜ್ಞರು ಸೇರಿದಂತೆ ಹೆಸರಾಂತ ತಜ್ಞರ ತಂಡವನ್ನು ಒಳಗೊಂಡಿರಲಿದೆ. ಅವರು ಸಮಾಲೋಚನೆಗಳಿಗೆ ಲಭ್ಯವಿರುತ್ತಾರೆ. ವೈಯಕ್ತಿಕ ಆರೈಕೆ ಮತ್ತು ಎಲ್ಲಾ ವಯಸ್ಸಿನ ರೋಗಿಗಳಿಗೆ ತಜ್ಞರ ಮಾರ್ಗದರ್ಶನ ಸಿಗಲಿದೆ. ಅದು ಮಕ್ಕಳ ಆರೈಕೆ, ತಾಯಿಯ ಆರೋಗ್ಯ ಅಥವಾ ಫಲವತ್ತತೆಯ ಕಾಳಜಿಗಳೇ ಆಗಿರಲಿ, ವೈವಿಧ್ಯಮಯ ಆರೋಗ್ಯ ಅಗತ್ಯತೆಗಳನ್ನು ಪೂರೈಸಲು ಕ್ಲಿನಿಕ್, ವಿಶೇಷ ಶ್ರೇಣಿಯ ಸೇವೆಗಳನ್ನು ಒದಗಿಸಲಿದೆ.ಉತ್ತರ ಬೆಂಗಳೂರಿನ ಅಭಿವೃದ್ಧಿ ಹೊಂದಿದ ಪ್ರದೇಶವಾದ ಹೆಣ್ಣೂರು, ಐಟಿ ಹಬ್ ಗಳ ಸಮೀಪವಿರುವುದರಿಂದ ಮತ್ತು ಉತ್ತಮ ಮೂಲಸೌಕರ್ಯದಿಂದಾಗಿ ಯುವ ಕುಟುಂಬಗಳ ಸಂಖ್ಯೆಯಲ್ಲಿ ಹೆಚ್ಚಳವಾಗುತ್ತಿದೆ. ಆಯಕಟ್ಟಿನ ಜಾಗದಲ್ಲಿರುವ ಈ ಕ್ಲಿನಿಕ್ ಮಕ್ಕಳ ಮತ್ತು ಮಹಿಳೆಯರ ಆರೋಗ್ಯ ರಕ್ಷಣೆಯ ಮೇಲೆ ಕೇಂದ್ರೀಕೃತವಾಗಿರುವುದರಿಂದ ಬೆಳೆಯುತ್ತಿರುವ ಜನಸಂಖ್ಯೆಗೆ ಸೇವೆ ಒದಗಿಸಲು ಅನುಕೂಲವಾಗಲಿದೆ. ಹೆಣ್ಣೂರು ಮುಖ್ಯ ರಸ್ತೆಯಲ್ಲಿ ರೈನ್ ಬೋ ಕ್ಲಿನಿಕ್ ಅನ್ನು ಉದ್ಘಾಟಿಸುವ ಮೂಲಕ ಬೆಂಗಳೂರಿನ ಹೆಣ್ಣೂರು ಮತ್ತು ನೆರೆಹೊರೆಯ ನಿವಾಸಿಗಳಿಗೆ ಉತ್ತಮ ಗುಣಮಟ್ಟದ ಆರೋಗ್ಯ ಸೇವೆಗಳನ್ನು ಒದಗಿಸಲು ನಮಗೆ ಸಂತೋಷವಾಗುತ್ತಿದೆ, ಎಂದು ರೈನ್ ಬೋ ಮಕ್ಕಳ ಆಸ್ಪತ್ರೆಯ ಉಪಾಧ್ಯಕ್ಷ ಶ್ರೀ ನಿತ್ಯಾನಂದ ಪಿ. ಹೇಳಿದರು. ಮಕ್ಕಳ ವಿವಿಧ ವಿಶೇಷತೆಗಳು, ಪ್ರಸೂತಿ ಮತ್ತು ಸ್ತ್ರೀರೋಗ ಶಾಸ್ತ್ರದಲ್ಲಿ ಪರಿಣತಿ ಹೊಂದಿರುವ ನಮ್ಮ ಅನುಭವಿ ವೈದ್ಯರ ತಂಡ ಸಹಾನುಭೂತಿಯ ಆರೈಕೆ ಮತ್ತು ಪ್ರತಿಯೊಬ್ಬ ರೋಗಿಯ ಯೋಗಕ್ಷೇಮವನ್ನು ಖಾತ್ರಿಪಡಿಸಿಕೊಳ್ಳಲು ಬದ್ಧವಾಗಿದೆಈ ಕಾರ್ಯಕ್ರಮದ ಮಹತ್ವವನ್ನು ಹೆಚ್ಚಿಸುತ್ತಾ, ಹೆಬ್ಬಾಳದ ರೈನ್ ಬೋ ಮಕ್ಕಳ ಆಸ್ಪತ್ರೆಯ ಘಟಕ ಮುಖ್ಯಸ್ಥರಾದ ಡಾ. ಉತ್ಕರ್ಷ್ ಅಗ್ರವಾಲ್ ಅವರು ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ, ಆರೋಗ್ಯ ರಕ್ಷಣೆಯಲ್ಲಿ ರೈನ್ ಬೋ ಮಕ್ಕಳ ಆಸ್ಪತ್ರೆಯ ನಿರಂತರ ಪ್ರಗತಿಯ ಮೇಲೆ ಬೆಳಕು ಚೆಲ್ಲಿದರು. ಬೆಂಗಳೂರಿನಲ್ಲಿ ಅಸ್ತಿತ್ವದಲ್ಲಿರುವ ನಾಲ್ಕು ಆಸ್ಪತ್ರೆಗಳನ್ನು ಮೀರಿ ರೈನ್ ಬೋ ಮಕ್ಕಳ ಆಸ್ಪತ್ರೆಯ ವ್ಯಾಪ್ತಿಯನ್ನು ವಿಸ್ತರಿಸುವ ಮೂಲಕ, ಹೊಸ ಕ್ಲಿನಿಕ್ ನಗರದಾದ್ಯಂತದ ಸಮುದಾಯಗಳಿಗೆ ವಿಶೇಷ ಆರೋಗ್ಯ ಸೇವೆಯನ್ನು ಮತ್ತಷ್ಟು ಸುಲಭವಾಗಿ ಲಭ್ಯವಾಗುವಂತೆ ಮಾಡುವ ಸಂಸ್ಥೆಯ ಸಮರ್ಪಣಾಭಾವವನ್ನು ಒತ್ತಿಹೇಳುತ್ತದೆ. ಗುಣಮಟ್ಟ, ಪರಿಣತಿ ಮತ್ತು ಸುಧಾರಿತ ವೈದ್ಯಕೀಯ ತಂತ್ರಜ್ಞಾನದ ಮೇಲೆ ಗಮನ ಕೇಂದ್ರೀಕರಿಸಿ, ಹೆಣ್ಣೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿನ ಕುಟುಂಬಗಳಿಗೆ ಸಮಗ್ರ ವೈದ್ಯಕೀಯ ಸೇವೆಗಳು ಸಿಗುವುದನ್ನು ಖಾತ್ರಿಪಡಿಸುವ ಗುರಿಯನ್ನು ಇದು ಹೊಂದಿದೆ. ಈ ಆಸ್ಪತ್ರೆ, ಒಂದೇ ಸೂರಿನಡಿ ವ್ಯಾಪಕ ಶ್ರೇಣಿಯ ಸೇವೆಗಳನ್ನು ಒದಗಿಸುತ್ತದೆ. ಮಕ್ಕಳ ಸಮಾಲೋಚನೆಯಿಂದ ಹಿಡಿದು ಪ್ರಸೂತಿ ಮತ್ತು ಸ್ತ್ರೀರೋಗ ಶಾಸ್ತ್ರ, ಫಲವತ್ತತೆ ಸಮಾಲೋಚನೆಗಳು, ಅಲ್ಟ್ರಾಸೌಂಡ್ ಮತ್ತು ಭ್ರೂಣದ ಔಷಧ, ರೋಗಶಾಸ್ತ್ರ ಪ್ರಯೋಗಾಲಯ ಸಂಗ್ರಹ ಕೇಂದ್ರ, ಔಷಧಾಲಯ ಸೇವೆಗಳು ಮತ್ತು ಲಸಿಕೆಗಳವರೆಗೆ, ಕ್ಲಿನಿಕ್ ತನ್ನ ರೋಗಿಗಳ ವೈವಿಧ್ಯಮಯ ಅಗತ್ಯಗಳನ್ನು ಪೂರೈಸಲು ಬದ್ಧವಾಗಿದೆ. ಹೆಣ್ಣೂರಿನ ರೈನ್ ಬೋ ಮಕ್ಕಳ ಕ್ಲಿನಿಕ್ ಮತ್ತು ಬರ್ತ್ ರೈಟ್ ಕ್ಲಿನಿಕ್, ಮುಂಬರುವ ವರ್ಷಗಳಲ್ಲಿ ಇಲ್ಲಿನ ಕುಟುಂಬಗಳಿಗೆ ಆರೋಗ್ಯ ಮತ್ತು ಯೋಗಕ್ಷೇಮವನ್ನು ಖಾತ್ರಿಪಡಿಸುವ ಮೂಲಕ ಈ ಭಾಗದ ಜನರ ಜೀವನದ ಅವಿಭಾಜ್ಯ ಅಂಗವಾಗುವತ್ತ ಎದುರು ನೋಡುತ್ತಿದೆ.

## ಬೆವರಿನಿಂದ ಮುಕ್ತಿ ಹೊಂದಲು ಟಿಪ್ಸ್

### ಬ್ಯೂಟಿ ಟಿಪ್ಸ್



ಬೇಸಿಗೆಯಲ್ಲಿ ಎಲ್ಲರೂ ಉಸ್ಸಪ್ಪಾ ಅಂತಾರೆ. ಬೆವರಿಗೆ ಬೆಂಡಾಗುವವರೇ ಜಾಸ್ತಿ. ಬೆವರಿನ ದುರ್ವಾಸನೆ ಬೇರೆ. ಇದರಿಂದ ಮುಕ್ತಿ ಹೊಂದಲು ಇಲ್ಲಿದೆ ಕೆಲ ಟಿಪ್ಸ್. ಪ್ರತಿದಿನ ವಾಕಿಂಗ್ ಮಾಡೋದ್ರಿಂದ ಶುದ್ಧ ಗಾಳಿ ಬ್ಯಾಕ್ಟೀರಿಯಾವನ್ನು ಕೊಲ್ಲುವುದಲ್ಲದೇ ನಿಮ್ಮನ್ನು ಆರೋಗ್ಯವಂತರನ್ನಾಗಿರಿಸುತ್ತದೆ. ಸೂರ್ಯನ ಶಾಖದಿಂದ ಮುಕ್ತಿ ಹೊಂದಲು ಛತ್ರಿ ಒಳ್ಳೆಯದು. ಮನೆಯಿಂದ ಹೊರ ಬೀಳುವಾಗ ಛತ್ರಿ ಬಳಕೆ ಮಾಡಿ. ಆದಷ್ಟು ಮಧ್ಯಾಹ್ನ 12 ಗಂಟೆಯಿಂದ 3 ಗಂಟೆ ವೇಳೆಯಲ್ಲಿ ಹೊರಗೆ ಹೋಗೋದನ್ನು ತಪ್ಪಿಸಿ. ಗಾಢ ಬಣ್ಣದ ಬಟ್ಟೆಯಿಂದ ದೂರವಿರಿ. ಲೈಟ್ ಕಲರ್ ಬಟ್ಟೆಯನ್ನು ಬೇಸಿಗೆಯಲ್ಲಿ ಹಾಕಿಕೊಳ್ಳಿ. ಬಿಗಿಯಾದ ಬಟ್ಟೆ ಧರಿಸಬೇಡಿ. ರೇಯಾನ್, ಪಾಲಿಯೆಸ್ಟರ್ ಮತ್ತು ನೈಲಾನ್ ಬಟ್ಟೆ ಬೇಡ. ಕಾಟನ್ ಬಟ್ಟೆಯನ್ನು ಆದಷ್ಟು ಧರಿಸಿ. ಒಣಗಿದ ಬಟ್ಟೆ, ಸಾಕ್ಸ್ ಬಳಸಿ. ಬಟ್ಟೆ ಒದ್ದೆಯಿದ್ದರೆ, ಅದರ ಜೊತೆ ಬೆವರು ಸೇರಿ ಕೆಟ್ಟ ವಾಸನೆ ಬರುತ್ತದೆ. ದಿನದಲ್ಲಿ ಎರಡು ಬಾರಿಯಾದರೂ ಸ್ನಾನ ಮಾಡಿ, ಪಾದ, ಕುತ್ತಿಗೆ ಮತ್ತು ಒಳ ಭಾಗಗಳನ್ನು ಸ್ವಚ್ಛವಾಗಿಟ್ಟುಕೊಳ್ಳಿ. ಅನಗತ್ಯ ಕೂದಲುಗಳನ್ನು ತೆಗೆದು ಹಾಕಿ. ಅನವಶ್ಯಕ ಕೂದಲಿದ್ದರೆ ಬ್ಯಾಕ್ಟೀರಿಯಾ ದಾಳಿ ಮಾಡುವ ಸಾಧ್ಯತೆ ಜಾಸ್ತಿ ಇರುತ್ತದೆ. ಪಾದರಕ್ಷೆಗಳನ್ನು ಪ್ರತಿದಿನ ತೊಳೆದು, ಒಣ ಬಟ್ಟೆಯಲ್ಲಿ ಸ್ವಚ್ಛಗೊಳಿಸಿ. ಬೆವರು ಜಾಸ್ತಿ ಬರುವ ನಿಮ್ಮ ದೇಹದ ಭಾಗಕ್ಕೆ ಅಡುಗೆ ಸೋಡಾ ಇಲ್ಲವೇ ನಿಂಬೆ ಪ್ಯಾಕ್ ಹಚ್ಚಿ. ದೇಹದಿಂದ ಬರುವ ವಾಸನೆಯನ್ನು ಆಪಲ್ ಸೈಡರ್ ವಿನೆಗರ್ ಅಥವಾ ಬಿಳಿ ವಿನೆಗರ್ ಕಡಿಮೆ ಮಾಡುತ್ತದೆ. ಸಮುದ್ರದ ಉಪ್ಪು, ಆಲಿವ್ ಎಣ್ಣೆಯನ್ನು ಬಳಸಿ.

## ರಾಶಿ ಭವಿಷ್ಯ



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಮಕ್ಕಳ ಬಗ್ಗೆ ಕಾಳಜಿ ವಹಿಸಿ, ಪತಿ ಪತ್ನಿಯರಲ್ಲಿ ಸಂತೋಷ, ಶತ್ರು ಭಾದೆ, ಕುಟುಂಬ ಸೌಖ್ಯ, ಆರೋಗ್ಯದಲ್ಲಿ ಏರುಪೇರು.

**ವೃಷಭ:** ಉದ್ಯೋಗದಲ್ಲಿ ಕಿರಿಕಿರಿ, ಚಂಚಲ ಮನಸ್ಸು, ಅಕಾಲ ಭೋಜನ, ಮನಕ್ಲೇಶ, ಸಾಲದಿಂದ ಮುಕ್ತಿ.

**ಮಿಥುನ:** ಯತ್ನ ಕಾರ್ಯಗಳಲ್ಲಿ ಜಯ, ಸ್ತ್ರೀಯರಿಗೆ ಆಭರಣ ಪ್ರಾಪ್ತಿ, ಭೂ ಲಾಭ, ಬಂಧುಗಳ ಭೇಟಿ, ಪುಣ್ಯಕ್ಷೇತ್ರ ದರ್ಶನ.

**ಕಟಕ:** ಸ್ಥಳ ಬದಲಾವಣೆ, ವಿಪರೀತ ಖರ್ಚು, ರಿಯಲ್ ಎಸ್ಟೇಟ್‌ನವರಿಗೆ ಲಾಭ.

**ಸಿಂಹ:** ವ್ಯಾಪಾರ ವ್ಯವಹಾರಗಳಲ್ಲಿ ಲಾಭ, ವಿವಾಹ ಯೋಗ, ಅಲ್ಪ ಆದಾಯ, ದೇವತಾ ಕಾರ್ಯಗಳಲ್ಲಿ ಭಾಗಿ.

**ಕನ್ಯಾ:** ವಾದ ವಿವಾದಗಳಲ್ಲಿ ಜಯ, ಪ್ರಭಾವಿ ವ್ಯಕ್ತಿಗಳ ಭೇಟಿ, ಮನಶಾಂತಿ, ಸಮಾಜದಲ್ಲಿ ಗೌರವ.

**ತುಲಾ:** ಅಲ್ಪ ಕಾರ್ಯಸಿದ್ಧಿ, ಮಿತ್ರರಿಂದ ತೊಂದರೆ, ಮನಸ್ಸಿನಲ್ಲಿ ಭಯಭೀತಿ, ಯಾರನ್ನು ಹೆಚ್ಚಾಗಿ ನಂಬಬೇಡಿ.

**ವೃಶ್ಚಿಕ:** ಮನಸ್ಸಿನ ಹತೋಟಿ ಕಳೆದುಕೊಳ್ಳುವಿರಿ, ಮಾತಿನ ಚಕಮಕಿ, ಹಿತ ಶತ್ರುಗಳಿಂದ ತೊಂದರೆ.

**ಧನಸ್ಸು:** ಪೂಜಾ ಕಾರ್ಯಗಳಲ್ಲಿ ಭಾಗಿ, ಕಷ್ಟ ಬಂದರೂ ಮುನ್ನುಗುವ ಚೈತನ್ಯ, ದಾಂಪತ್ಯದಲ್ಲಿ ಅನ್ಯೂನ್ಯತೆ.

**ಮಕರ:** ದುರಾಲೋಚನೆ, ದೃಷ್ಟ ಚಿಂತೆ, ಹೇಳಿಕೆ ಮಾತನ್ನು ಕೇಳುವ ಸಂಭವ, ಚಂಚಲ ಮನಸ್ಸು, ಅನಾರೋಗ್ಯ .

**ಕುಂಭ:** ಗುರುಗಳ ಭೇಟಿ ಮಾಡುವ ಸಾಧ್ಯತೆ, ಧನ ಲಾಭ, ನಂಬಿಕೆ ದ್ರೋಹ, ಆರ್ಥಿಕ ಪರಿಸ್ಥಿತಿ ಬಿಕ್ಕಟ್ಟು.

**ಮೀನ:** ತಾಳ್ಮೆಯಿಂದ ವರ್ತಿಸಿ, ಅಮೂಲ್ಯ ವಸ್ತುಗಳ ಖರೀದಿ, ವಿಪರೀತ ಖರ್ಚು, ಆದಾಯಕ್ಕಿಂತ ಖರ್ಚು ಜಾಸ್ತಿ.

## ಕಾರ್ಮಿಕ ದಿನ




ಶ್ರಮಜೀವಿಗಳ ಕೆಲಸವನ್ನು ಗೌರವಿಸುವ ಹಾಗೂ ಅವರ ಕಷ್ಟಗಳನ್ನು ಸ್ಮರಿಸುವ ಸಲುವಾಗಿ ಮೇ 1ರಂದು ಜಾಗತಿಕವಾಗಿ 'ಅಂತಾರಾಷ್ಟ್ರೀಯ ಕಾರ್ಮಿಕರ ದಿನ'ವನ್ನಾಗಿ ಆಚರಿಸಲಾಗುತ್ತದೆ. ಇದನ್ನು ಮೇ ಡೇ, ಲೇಬರ್ ಡೇ ಹಾಗೂ ವರ್ಕರ್ಸ್ ಡೇ ಎಂತಲೂ ಕರೆಯಲಾಗುತ್ತದೆ. ಕಾರ್ಮಿಕ ವರ್ಗದ ಶ್ರಮ ಮತ್ತು ಸಮರ್ಪಣೆಯನ್ನು ಗುರುತಿಸುವುದು, ಕಾರ್ಮಿಕರ ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ಶೋಷಣೆಯಿಂದ ರಕ್ಷಿಸುವುದು ಕಾರ್ಮಿಕ ದಿನದ ಉದ್ದೇಶ. 1886ರಲ್ಲಿ ಅಮೆರಿಕದಲ್ಲಿ ಮೊದಲ ಬಾರಿಗೆ ಕಾರ್ಮಿಕರ ದಿನ ಆಚರಿಸಲಾಯಿತು. ದಿನಕ್ಕೆ ಕಾರ್ಮಿಕರಿಗೆ 8 ಗಂಟೆ ಕೆಲಸದ ಅವಧಿಯನ್ನು ನಿಗದಿ ಮಾಡಬೇಕು ಎಂಬ ಆಗ್ರಹದೊಂದಿಗೆ ಶುರುವಾದ ಚಳವಳಿಗೆ ಯಶಸ್ಸು ಸಿಕ್ಕಿತ್ತು. ಇದೇ ಹೋರಾಟದ ಕಿಚ್ಚಿನಲ್ಲಿ ಉದಯಿಸಿದ್ದೇ ಕಾರ್ಮಿಕರ ದಿನಾಚರಣೆ. ಭಾರತದಲ್ಲಿ ಈ ಆಚರಣೆ ಆರಂಭವಾಗಿದ್ದು 1923ರಲ್ಲಿ. ವಿಶ್ವದ ನಾನಾ ಭಾಗಗಳಲ್ಲಿ ಕಾರ್ಮಿಕರ ದಿನಾಚರಣೆಯನ್ನು ಆಚರಿಸುವ ಮೂಲಕ ಶ್ರಮಜೀವಿಗಳಿಗೆ ಕೃತಜ್ಞತೆ ಸಲ್ಲಿಸಲಾಗುತ್ತದೆ. ಮೇ 1 ರಂದು ಸಮಾಜಕ್ಕಾಗಿ ಕಾರ್ಮಿಕರ ಕೊಡುಗೆ ಹಾಗೂ ತ್ಯಾಗವನ್ನು ಸ್ಮರಿಸಲಾಗುತ್ತದೆ. ಭಾರತದಲ್ಲಿ ಇದನ್ನು 'ಮೇ ದಿನ' ಎಂದು ಕರೆಯುತ್ತಾರೆ. ದೇಶದಲ್ಲಿ ಮೊದಲ ಕಾರ್ಮಿಕ ದಿನವನ್ನು ಮೇ 1, 1923 ರಂದು ಮದ್ರಾಸಿನಲ್ಲಿ ಆಚರಿಸಲಾಯಿತು. ಇದನ್ನು ಕಾಮ್ರೇಡ್ ಸಿಂಗರವೇಲರ್ ನೇತೃತ್ವದ ಲೇಬರ್ ಕಿಸಾನ್ ಪಾರ್ಟಿ ಆಫ್ ಹಿಂದೂಸ್ತಾನ್ ಆರಂಭಿಸಿತ್ತು. ಅಂದಿನಿಂದ ಈವರೆಗೆ ಭಾರತದಲ್ಲಿ ಕಾರ್ಮಿಕರ ದಿನವನ್ನು ಆಚರಿಸಲಾಗುತ್ತಿದೆ ಮತ್ತು ರಾಷ್ಟ್ರೀಯ ರಜೆ ಘೋಷಿಸಲಾಗಿದೆ. ಇದು 141ನೇ ವರ್ಷದ ಅಂತಾರಾಷ್ಟ್ರೀಯ ಕಾರ್ಮಿಕರ ದಿನವಾಗಿದೆ. ಭಾರತದ ವಿವಿಧ ರಾಜ್ಯಗಳಲ್ಲಿ ವಿವಿಧ ಹೆಸರುಗಳಲ್ಲಿ ಕಾರ್ಮಿಕ ದಿನವನ್ನು ಆಚರಿಸಲಾಗುತ್ತದೆ. ಉದಾಹರಣೆಗೆ ಹಿಂದಿಯಲ್ಲಿ 'ಅಂತಾರಾಷ್ಟ್ರೀಯ ಶ್ರಮಿಕ್ ದಿವಸ್', ಕಾರ್ಮಿಕ ದಿನಚರಣೆ (ಕನ್ನಡ), ಕಾರ್ಮಿಕ ದಿನೋತ್ಸವಮ್ (ತೆಲುಗು), ಕಮ್ಗರ್ ದಿವಸ್ (ಮರಾಠಿ), ಉಜೈಪಾಲರ್ ದೀನಂ (ತಮಿಳು), ತೊಝಿಲಾಲಿ ದಿನಂ (ಮಲಯಾಳಂ), ಮತ್ತು ಶ್ರೋಮಿಕ್ ದಿಬೋಶ್ (ಬಂಗಾಳಿ) ಎಂದು ಕರೆಯುತ್ತಾರೆ. ಅಮೆರಿಕದ ಕಾರ್ಮಿಕರು, ಕಠೋರ ಕಾರ್ಮಿಕ ನಿಯಮ, ಕಾರ್ಮಿಕರ ಹಕ್ಕುಗಳ ಉಲ್ಲಂಘನೆ ಮತ್ತು ಭಯಾನಕ ಕೆಲಸದ ವೇಳೆಯ ವಿರುದ್ಧ ಪ್ರತಿಭಟನೆ ಆರಂಭಿಸಿದರು. ದಿನಕ್ಕೆ 8 ಗಂಟೆ ಕೆಲಸ ನಿಗದಿಗೊಳಿಸಬೇಕೆಂಬ ಈ ಚಳವಳಿ 1860ರಿಂದ ಆರಂಭವಾಯಿತು. ಚಳವಳಿಗಾಗಿ ಅಮೆರಿಕ ಹಾಗೂ ಕೆನಡಾದಲ್ಲಿ ಹಲವು ಕಾರ್ಮಿಕ ಸಂಘಟನೆಗಳು ಅಸ್ತಿತ್ವಕ್ಕೆ ಬಂದವು. ದಿನಕ್ಕೆ 10 ರಿಂದ 14 ಗಂಟೆಗಳ ಕಾಲ ಬಲವಂತವಾಗಿ ದುಡಿಸಿಕೊಳ್ಳುವುಕ್ಕೆ ವಿವಿಧ ಸಂಘಟನೆಗಳು ತೀವ್ರ ವಿರೋಧ ವ್ಯಕ್ತಪಡಿಸಿದವು. ಷಿಕಾಗೋ ನಗರ ಸಾವಿರಾರು ಕಾರ್ಮಿಕ ಸಂಘಟನೆಗಳ ಕೇಂದ್ರವಾಗಿ ಮಾರ್ಪಟ್ಟಿತು.

ಸಂಜೆ ಮುಗಿಲು
ಬುಧವಾರ
1.5.2024



## ಅಮಿತ್ ಶಾ ತಿರುಚಿದ ವಿಡಿಯೋ ಪ್ರಕರಣ: ಆಪ್, ಕಾಂಗ್ರೆಸ್ ಪಕ್ಷದ ಮೂವರ ಬಂಧನ



**ದೆಹಲಿ:** ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ವಿಡಿಯೋವನ್ನು ತಿರುಚಿ ಪ್ರಸಾರ ಮಾಡುತ್ತಿರುವ ಪ್ರಕರಣದಲ್ಲಿ ಆಮ್ ಆದ್ಮಿ ಪಕ್ಷ ಮತ್ತು ಕಾಂಗ್ರೆಸ್ ಪಕ್ಷಕ್ಕೆ ಸಂಬಂಧಿಸಿದ ಮೂವರನ್ನು ಬಂಧಿಸಲಾಗಿದೆ.

ಪರಿಶಿಷ್ಟ ಜಾತಿ (ಎಸ್ಸಿ), ಪರಿಶಿಷ್ಟ ಪಂಗಡಗಳೂ ಮತ್ತು ಇತರೆ ಹಿಂದುಳಿದ ವರ್ಗಗಳ ಮೀಸಲಾತಿಯನ್ನು ರದ್ದುಗೊಳಿಸಲಾಗುವುದು ಎಂದು ಅಮಿತ್ ಶಾ ಈ ವಿಡಿಯೋದಲ್ಲಿ ಕರೆ ನೀಡಿದ್ದಾರೆ ಎಂದು ಹೇಳಿ ವಿಡಿಯೋವನ್ನು ಹಂಚಿಕೊಳ್ಳಲಾಗುತ್ತಿತ್ತು. ಪ್ರಕರಣದಲ್ಲಿ ಅಹಮದಾಬಾದ್ ಸೈಬರ್ ಕ್ರೈಂ ವಿಭಾಗದ ಪೊಲೀಸರು ಇಬ್ಬರನ್ನು ಬಂಧಿಸಿದ್ದರೆ, ಮತ್ತೊಬ್ಬ ವ್ಯಕ್ತಿಯನ್ನು ಅಸ್ಸಾಂನಿಂದ ಕಸ್ಟಡಿಗೆ ತೆಗೆದುಕೊಳ್ಳಲಾಗಿದೆ.

ನಕಲಿ ವೀಡಿಯೊವನ್ನು ಕಾಂಗ್ರೆಸ್ ಹರಡುತ್ತಿದೆ ಎಂದು ಅಮಿತ್ ಶಾ, ದೂಷಿಸಿದ್ದಾರೆ. ಇದು ಆ ಪಕ್ಷದ ಹತಾಶೆ ಮತ್ತು ನಿರಾಶೆಯ ಫಲಿತಾಂಶವಾಗಿದೆ ಎಂದು ಹೇಳಿದ್ದಾರೆ. ಕೇಂದ್ರ ಗೃಹ ಸಚಿವರ ಈ ತಿರುಚಿದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಬಿಜೆಪಿಯು ಮೀಸಲಾತಿಯನ್ನು ರದ್ದುಗೊಳಿಸಲು ತಯಾರಿ ನಡೆಸುತ್ತಿದೆ ಎಂದು ಹೇಳಿಕೊಂಡು ಹಲವಾರು ಕಾಂಗ್ರೆಸ್ ನಾಯಕರು ತಮ್ಮ ಸಾಮಾಜಿಕ ಮಾಧ್ಯಮ ಹ್ಯಾಂಡಲ್‌ಗಳಲ್ಲಿ ಈ ವೀಡಿಯೊವನ್ನು ಹಂಚಿಕೊಂಡಿದ್ದಾರೆ.

ಮಂಗಳವಾರ ಗುವಾಹಟಿಯಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಕೇಂದ್ರ ಗೃಹ ಸಚಿವರು, ಬಿಜೆಪಿ 400 ಸ್ಥಾನಗಳನ್ನು ದಾಟಿದ ನಂತರ ಮೀಸಲಾತಿಯನ್ನು ಕೊನೆಗೊಳಿಸುತ್ತದೆ ಎಂದು ಕಾಂಗ್ರೆಸ್ ತಪ್ಪು ಮಾಹಿತಿಯನ್ನು ಹರಡುತ್ತಿದೆ ಎಂದು ಹೇಳಿದರು. ''ಈ ಆರೋಪ ಸುಳ್ಳು ಮತ್ತು ಆಧಾರರಹಿತವಾಗಿವೆ. ಬಿಜೆಪಿಯು ಎಸ್ಸಿ, ಎಸ್ಟಿ ಮತ್ತು ಒಬಿಸಿಗಳಿಗೆ ಮೀಸಲಾತಿಯನ್ನು ಬೆಂಬಲಿಸುತ್ತದೆ ಮತ್ತು ಯಾವಾಗಲೂ ರಕ್ಷಕನಾಗಿ ತನ್ನ ಪಾತ್ರವನ್ನು ನಿರ್ವಹಿಸುತ್ತದೆ ಎಂದು ನಾನು ಸ್ಪಷ್ಟಪಡಿಸಲು ಬಯಸುತ್ತೇನೆ'' ಎಂದು ಅವರು ಹೇಳಿದರು.

## ವೋಟ್ ಜಿಹಾದ್‌ಗೆ ಮಾಜಿ ಕೇಂದ್ರ ಸಚಿವ ಸಲ್ಮಾನ್ ಖುರ್ಷಿದ್ ಮನವಿ



**ನವದೆಹಲಿ:** ಮಾಜಿ ಕೇಂದ್ರ ಸಚಿವ ಸಲ್ಮಾನ್ ಖುರ್ಷಿದ್ ಅವರ ಸೋದರ ಸೊಸೆ ಮಾರಿಯಾ ಆಲಂ ಖಾನ್ ಅವರು ಉತ್ತರ ಪ್ರದೇಶದ ಫರೂಕಾಬಾದ್‌ನಲ್ಲಿ ಪ್ರಚಾರದ ಸಮಯದಲ್ಲಿ ಮತದಾರರನ್ನ 'ವೋಟ್ ಜಿಹಾದ್' ಮಾಡುವಂತೆ ಒತ್ತಾಯಿಸುವ ವೀಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆದ ನಂತರ ವಿವಾದಕ್ಕೆ ಕಾರಣವಾಗಿದೆ.

ವರದಿಗಳ ಪ್ರಕಾರ, ಮಾರಿಯಾ ಸಮಾಜವಾದಿ ಪಕ್ಷದ ಅಭ್ಯರ್ಥಿ ನವಲ್ ಕಿಶೋರ್ ಶಾಕ್ಯ ಅವರ ಪರವಾಗಿ ಮತಯಾಚಿಸುತ್ತಿದ್ದರು.

ಒಗ್ಗೂಡಿ ವೋಟ್ ಜಿಹಾದ್ ಮಾಡಿ. ವೋಟ್ ಜಿಹಾದ್ ಮಾತ್ರ ಬಿಜೆಪಿಯನ್ನ ತಡೆಯಲು ಸಾಧ್ಯ. ಮುಖೇಶ್ ರಜಪೂತ್ ಇಲ್ಲಿ ಸಭೆ ನಡೆಸಲು ಕೆಲವು ಮುಸ್ಲಿಂ ಪುರುಷರು ಸಹಾಯ ಮಾಡಿದ್ದಾರೆ ಎಂದು ಕೇಳಿ ನನಗೆ ತುಂಬಾ ದುಃಖವಾಗಿದೆ. ಸಮಾಜವು ಅವರ ಬ್ರೆಡ್ ಮತ್ತು ಬೆಣ್ಣೆಯನ್ನ ನಿಲ್ಲಿಸಬೇಕು ಎಂದು ನಾನು ಭಾವಿಸುತ್ತೇನೆ. ತುಂಬಾ ಸ್ವಾರ್ಥಿಯಾಗಬೇಡಿ ಮತ್ತು ನಿಮ್ಮ ಮಕ್ಕಳ ಜೀವನದೊಂದಿಗೆ ಆಟವಾಡಬೇಡಿ. ಇಂದು, ಸಿಎಎ ಮತ್ತು ಎನ್ ಆರ್ಸಿ ವಿರುದ್ಧ ಪ್ರತಿಭಟಿಸಿದ್ದಕ್ಕಾಗಿ ಅನೇಕ ಜನರು ಜೈಲಿನಲ್ಲಿದ್ದಾರೆ. ಸಲ್ಮಾನ್ ಖುರ್ಷಿದ್ ಸಾಹೇಬ್ ಅವರ ಪ್ರಕರಣಗಳ ವಿರುದ್ಧ ಹೋರಾಡುತ್ತಿದ್ದಾರೆ ಎಂದು ತಿಳಿಸಲು ನನಗೆ ಸಂತೋಷವಾಗಿದೆ. ನಾವು ನಿಮಗಾಗಿ ಹೋರಾಡುತ್ತಿದ್ದೇವೆ, ನಿಮ್ಮ ಬೆಂಬಲವಿಲ್ಲದೆ ನಾವು ಏನನ್ನೂ ಮಾಡಲು ಸಾಧ್ಯವಾಗುವುದಿಲ್ಲ. ಈ ಬಾರಿ ಭಾರತವನ್ನ ಉಳಿಸಲು ಬುದ್ಧಿವಂತಿಕೆಯಿಂದ ಮತ ಚಲಾಯಿಸಿ ಮತ್ತು ಗಂಗಾ–ಜಮುನಾ ತೆಹಜೀಬ್ ಉಳಿಸಿ ಎಂದು ತಮ್ಮ ಭಾಷಣದಲ್ಲಿ ಹೇಳಿದರು.

## ಒಪ್ಪಂದದೊಂದಿಗೆ ಅಥವಾ ಇಲ್ಲದೆಯೋ 'ರಫಾ'ವನ್ನ 'ಇಸ್ರೇಲ್' ಪ್ರವೇಶಿಸಲಿದೆ : ಇಸ್ರೇಲ್ ಪಿಎಂ ನೆತನ್ಯಾಹು



**ಇಸ್ರೇಲ್:** ರಾಫಾದಲ್ಲಿ ದಾಳಿ ನಡೆಸಲು ಒತ್ತೆಯಾಳುಗಳ ಒಪ್ಪಂದಕ್ಕೆ ಬರುವವರೆಗೆ ಇಸ್ರೇಲ್ ಕಾಯುವುದಿಲ್ಲ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಮಂಗಳವಾರ ಹೇಳಿದ್ದಾರೆ. ಯುದ್ಧದ ಎಲ್ಲಾ ಉದ್ದೇಶಗಳನ್ನು ಸಾಧಿಸುವ ಮೊದಲು ನಾವು ಯುದ್ಧವನ್ನ ನಿಲ್ಲಿಸುತ್ತೇವೆ ಎಂಬ ಕಲ್ಪನೆಯು ಪ್ರಶ್ನಾತೀತವಾಗಿದೆ ಎಂದು ನೆತನ್ಯಾಹು ಅವರ ಕಚೇರಿಯ ಹೇಳಿಕೆ ತಿಳಿಸಿದೆ. ಈಜಿಪ್ಟ್, ಕತಾರ್ ಮತ್ತು ಯುಎಸ್ ಎರಡೂ ಪಕ್ಷಗಳು ಒಪ್ಪಲು ಹೊಸ ಪ್ರಯತ್ನಗಳನ್ನ ಕೈಗೊಂಡಿರುವುದರಿಂದ ಗಾಝಾದಲ್ಲಿ ಕದನ ವಿರಾಮದ ಒಪ್ಪಂದಕ್ಕೆ ಬರಲು ಜಗತ್ತು ಇಸ್ರೇಲ್ ಮತ್ತು ಹಮಾಸ್ ಮೇಲೆ ಭರವಸೆ ಇಟ್ಟಿರುವ ಸಮಯದಲ್ಲಿ ಇಸ್ರೇಲ್ ಪ್ರಧಾನಿಯ ಘೋಷಣೆ ಬಂದಿದೆ. 40 ದಿನಗಳ ಕದನ ವಿರಾಮ ಮತ್ತು ಹೆಚ್ಚಿನ ಸಂಖ್ಯೆಯ ಫೆಲೆಸ್ತೀನ್ ಕೈದಿಗಳಿಗೆ ಒತ್ತೆಯಾಳುಗಳ ಬಿಡುಗಡೆಗೆ ಯೋಜನೆಯನ್ನ ಸಿದ್ಧಪಡಿಸುತ್ತಿರುವುದಾಗಿ ಹಮಾಸ್ ಹೇಳಿದೆ. ಕೈರೋ ಮಾತುಕತೆಯಿಂದ ಕತಾರ್ನಲ್ಲಿರುವ ತಮ್ಮ ನೆಲೆಗೆ ಹಿಂದಿರುಗಿದ ಪ್ಯಾಲೆಸ್ತೀನ್ ಭಯೋತ್ಪಾದಕ ಗುಂಪು, ಆಲೋಚನೆಗಳು ಮತ್ತು ಪ್ರಸ್ತಾಪವನ್ನ ಚರ್ಚಿಸುವುದಾಗಿ ಹೇಳಿದೆ, ಗುಂಪು ಸಾಧ್ಯವಾದಷ್ಟು ಬೇಗ ಪ್ರತಿಕ್ರಿಯಿಸಲು ಉತ್ಸುಕವಾಗಿದೆ ಎಂದು ಹೇಳಿದರು.

## ನೌಕಾಪಡೆಯ ಮುಖ್ಯಸ್ಥರಾಗಿ ಅಡ್ಮಿರಲ್ ದಿನೇಶ್ ಕೆ. ತ್ರಿಪಾಠಿ



**ನವದೆಹಲಿ:** ಭಾರತೀಯ ನೌಕಾಪಡೆಯ ನೂತನ ಮುಖ್ಯಸ್ಥರಾಗಿ ಅಡ್ಮಿರಲ್ ದಿನೇಶ್ ಕುಮಾರ್ ತ್ರಿಪಾಠಿ ಇಂದು ಅಧಿಕಾರ ವಹಿಸಿಕೊಂಡಿದ್ದಾರೆ. 1964ರ ಮೇ 15ರಂದು ಜನಿಸಿದ ಅಡ್ಮಿರಲ್ ತ್ರಿಪಾಠಿ ಜುಲೈ 1, 1985ರಂದು ಭಾರತೀಯ ನೌಕಾಪಡೆಯ ಕಾರ್ಯನಿರ್ವಾಹಕ ಶಾಖೆಗೆ ನಿಯೋಜಿಸಲ್ಪಟ್ಟರು. ಸಂವಹನ ಮತ್ತು ಎಲೆಕ್ಟ್ರಾನಿಕ್ ಯುದ್ಧ ತಜ್ಞರಾಗಿರುವ ಅವರು ಸುಮಾರು 39 ವರ್ಷಗಳ ಕಾಲ ಸುದೀರ್ಘ ಮತ್ತು ವಿಶಿಷ್ಟ ಸೇವೆಯನ್ನು ಸಲ್ಲಿಸಿದ್ದಾರೆ.ತ್ರಿಪಾಠಿ ಅವರು ಜುಲೈ 2020 ರಿಂದ ಮೇ 2021 ರವರೆಗೆ ನೌಕಾ ಕಾರ್ಯಾಚರಣೆಗಳ ಮಹಾನಿರ್ದೇಶಕರಾಗಿದ್ದರು. ಇನ್ನು ಜನವರಿ 2024ರಲ್ಲಿ ನೌಕಾಪಡೆಯ ಉಪಾಧ್ಯಕ್ಷರಾಗಿ ನೇಮಕಗೊಳ್ಳುವ ಮೊದಲು ಪಶ್ಚಿಮ ನೇವಲ್ ಕಮಾಂಡ್ ಮುಖ್ಯಸ್ಥರಾಗಿದ್ದರು. ಈ ಹಿಂದೆ ನೌಕಾಪಡೆಯ ಸಿಬ್ಬಂದಿ ಮುಖ್ಯಸ್ಥರಾಗಿ ಕೂಡ ಸೇವೆ ಸಲ್ಲಿಸಿದ್ದರು.ಅಡ್ಮಿರಲ್ ದಿನೇಶ್ ಕೆ. ತ್ರಿಪಾಠಿ ಇಂದು ಭಾರತದ 26ನೇ ನೌಕಾ ಮುಖ್ಯಸ್ಥರಾಗಿ ಅಧಿಕಾರ ವಹಿಸಿಕೊಂಡಿದ್ದಾರೆ. 2 ವರ್ಷ ಮತ್ತು 5 ತಿಂಗಳುಗಳ ಕಾಲ ಈ ಹುದ್ದೆಯಲ್ಲಿದ್ದ ಅಡ್ಮಿರಲ್ ಆರ್. ಹರಿ ಕುಮಾರ್ ಬಳಿಕ ದಿನೇಶ್ ತ್ರಿಪಾಠಿ ಈ ಹುದ್ದೆಯನ್ನು ಏರಿದ್ದಾರೆ. ತ್ರಿಪಾಠಿ ಅವರು ಕೊಚ್ಚಿಯ ಸಿಗ್ನಲ್ ಸ್ಕೂಲ್, ಡಿಫೆನ್ಸ್ ಸರ್ವಿಸಸ್ ಸ್ಟಾಫ್ ಕಾಲೇಜ್, ವೆಲ್ಲಿಂಗ್ಟನ್, ನೇವಲ್ ಹೈಯರ್ ಕಮಾಂಡ್ ಕೋರ್ಸ್, ಕಾರಂಜಾ ಮತ್ತು ಯುನೈಟೆಡ್ ಸ್ಟೇಟ್ಸ್ ನೇವಲ್ ವಾರ್ ಕಾಲೇಜಿನಲ್ಲಿ ನೇವಲ್ ಕಮಾಂಡ್ ಕಾಲೇಜಿನಲ್ಲಿ ಕೋರ್ಸ್‌ಗಳನ್ನು ಪಡೆದಿದ್ದಾರೆ.

## ದೆಹಲಿ 'ಕೈ' ಅಧ್ಯಕ್ಷಸ್ಥಾನಕ್ಕೆ ದೇವೆಂದರ್ ಯಾದವ್ ನೇಮಕ



**ನವದೆಹಲಿ:** ದೆಹಲಿ ಪ್ರದೇಶ ಕಾಂಗ್ರೆಸ್ ಸಮಿತಿಯ (ಡಿಪಿಸಿಸಿ) ಅಧ್ಯಕ್ಷರನ್ನಾಗಿ ದೇವೇಂದ್ರ ಯಾದವ್ ಅವರನ್ನು ನೇಮಕ ಮಾಡಿ ಹೈಕಮಾಂಡ್ ಇಂದು ಆದೇಶ ಹೊರಡಿಸಿದೆ.

ಈಚೆಗೆ ದೆಹಲಿ ಕಾಂಗ್ರೆಸ್ ಘಟಕದ ಅಧ್ಯಕ್ಷ ಅರವಿಂದರ್ ಸಿಂಗ್ ಲವ್ಲಿ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು.

ಈ ಬೆಳವಣಿಗೆಯು, ರಾಷ್ಟ್ರದ ರಾಜಧಾನಿಯಲ್ಲಿ ಲೋಕಸಭೆ ಚುನಾವಣೆಗೆ ಕಾಂಗ್ರೆಸ್ ನಡೆಸುತ್ತಿದ್ದ ಸಿದ್ಧತೆಗೆ ಹಿನ್ನಡೆ ಉಂಟುಮಾಡಿತ್ತು.

ದೆಹಲಿ ಲೋಕಸಭಾ ಕ್ಷೇತ್ರಗಳಿಗೆ ಅಭ್ಯರ್ಥಿಗಳ ಆಯ್ಕೆಯ ವಿಚಾರದಲ್ಲಿ ಅಸಮಾಧಾನ ಮತ್ತು ಕಾಂಗ್ರೆಸ್ನ ದೆಹಲಿ ಉಸ್ತುವಾರಿ ದೀಪಕ್ ಬಾಬರಿಯಾ ಅವರ ನಡವಳಿಕೆಯನ್ನು ವಿರೋಧಿಸಿ ಅರವಿಂದರ್ ಅವರು ರಾಜೀನಾಮೆ ನಿರ್ಧಾರ ತೆಗೆದುಕೊಂಡಿದ್ದರು. 'ನಾನು ದೆಹಲಿ ಕಾಂಗ್ರೆಸ್ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದ್ದೇನೆ. ಯಾವುದೇ ಪಕ್ಷವನ್ನು ಸೇರುತ್ತಿಲ್ಲ' ಎಂದು ಅವರು ಸುದ್ದಿಗೋಷ್ಠಿಯಲ್ಲಿ ತಿಳಿಸಿದ್ದರು. 'ಲವ್ಲಿ ಬಿಜೆಪಿ ಸೇರಲಿದ್ದು, ಪೂರ್ವ ದೆಹಲಿ ಲೋಕಸಭಾ ಕ್ಷೇತ್ರದಿಂದ ಆ ಪಕ್ಷವು ಅವರನ್ನು ಕಣಕ್ಕಿಳಿಸಲಿದೆ' ಎಂದು ಕಾಂಗ್ರೆಸ್ನ ಮಾಜಿ ಶಾಸಕ ಆಸಿಫ್ ಮೊಹಮ್ಮದ್ ಖಾನ್ ಹೇಳಿಕೆ ನೀಡಿದ ಬೆನ್ನಲ್ಲೇ ಅವರು ಈ ಸ್ಪಷ್ಟೀಕರಣ ಕೊಟ್ಟಿದ್ದರು.

## ಪಾಕಿಸ್ತಾನದಾದ್ಯಂತ 'ಉಬರ್' ಕಾರ್ಯಾಚರಣೆ ಸ್ಥಗಿತ

**ಕರಾಚಿ:** ಸ್ಥಳೀಯ ಕಂಪನಿಗಳಿಂದ ತೀವ್ರ ಸ್ಪರ್ಧೆಯ ಮಧ್ಯೆ, ಜಾಗತಿಕ ರೈಡ್–ಹೆಯ್ಲಿಂಗ್ ಸೇವೆ ಉಬರ್ 2022ರಲ್ಲಿ ಕೆಲವು ಪ್ರಮುಖ ನಗರಗಳಲ್ಲಿ ತನ್ನ ಸೇವೆಗಳನ್ನ ಕೊನೆಗೊಳಿಸಿದ ನಂತರ ಪಾಕಿಸ್ತಾನದಲ್ಲಿ ಎಲ್ಲಾ ಕಾರ್ಯಾಚರಣೆಗಳನ್ನ ನಿಲ್ಲಿಸಿದೆ ಎಂದು ವಕ್ತಾರರು ಮಂಗಳವಾರ ದೃಢಪಡಿಸಿದ್ದಾರೆ. ನಮ್ಮ ಅಂಗಸಂಸ್ಥೆ ಬ್ರಾಂಡ್ ಕರೀಮ್ ಪಾಕಿಸ್ತಾನದಾದ್ಯಂತ ರೈಡ್ –ಹೆಯ್ಲಿಂಗ್ ಸೇವೆಗಳನ್ನ ನೀಡುವ ಕಾರ್ಯಾಚರಣೆಯನ್ನ ಮುಂದುವರಿಸುತ್ತದೆ ಎಂದು ವಕ್ತಾರರು ತಿಳಿಸಿದ್ದಾರೆ. 2019 ರಲ್ಲಿ, ಉಬರ್ ತನ್ನ ಪ್ರತಿಸ್ಪರ್ಧಿ ಕರೀಮ್ ಅನ್ನು 3.1 ಬಿಲಿಯನ್ ಡಾಲರ್ಗೆ ಸ್ವಾಧೀನಪಡಿಸಿಕೊಂಡಿತ್ತು. ಎರಡೂ ಕಂಪನಿಗಳು ತಮ್ಮ ಪ್ರಾದೇಶಿಕ ಸೇವೆಗಳು ಮತ್ತು ಸ್ವತಂತ್ರ ಬ್ರಾಂಡ್‌ಗಳನ್ನು ನಿರ್ವಹಿಸುವುದನ್ನ ಮುಂದುವರಿಸುವುದಾಗಿ ಹೇಳಿವೆ.




## ಲಂಡನ್‌ನಲ್ಲಿ ಹಲವರಿಗೆ ಚೂರಿಯಿಂದ ಇರಿತ: ವಿಡಿಯೋ ವೈರಲ್



**ಲಂಡನ್:** ಯುವಕನೊಬ್ಬ ಈಶಾನ್ಯ ಲಂಡನ್ ನ ಹೈನಾಲ್ಟ್ ಟ್ಯೂಬ್ ನಿಲ್ದಾಣದ ಬಳಿ ಹಲವಾರು ಪಾದಚಾರಿಗಳಿಗೆ ಮತ್ತು ಇಬ್ಬರು ಪೊಲೀಸ್ ಅಧಿಕಾರಿಗಳಿಗೆ ಚಾಕುವಿನಿಂದ ಇರಿದು ವಿಕೃತಿ ಮೆರೆದಿದ್ದಾನೆ. ಮಾಧ್ಯಮ ವರದಿಗಳ ಪ್ರಕಾರ, ವ್ಯಕ್ತಿಯೊಬ್ಬರು ಸಿಕ್ಕ ಸಿಕ್ಕವರ ಮೇಲೆ ಚೂರಿಯಿಂದ ದಾಳಿ ಮಾಡಿದ್ದಾರೆ. ಆತನ್ನು ಅಮನ್ ಎಂದು ಗುರುತಿಸಲಾಗಿದ್ದು, ಕೊನೆಗೂ ಆತನನ್ನು ಪೊಲೀಸರು ಬಂಧಿಸಿದ್ದಾರೆ . ಇನ್ನು ಈ ಘಟನೆಯಲ್ಲಿ ಹಲ್ಲೆಗೊಳಗಾದಂತವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

## ರಾಹುಲ್ ಗಾಂಧಿ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸುವಂತಹ AI ವಿಡಿಯೋ ವೈರಲ್



**ನವದೆಹಲಿ:** ಡೀಪ್ ಫೇಕ್ ಗಳು, ಎಡಿಟ್ ಮಾಡಿದ ಮತ್ತು ಎಐ–ಮ್ಯಾನಿಪುಲೇಟೆಡ್ ವೀಡಿಯೊಗಳು ಮತ್ತು ಫೋಟೋಗಳ ಯುಗದಲ್ಲಿ ರಾಜಕೀಯ ಮತ್ತು ರಾಜಕೀಯ ನಾಯಕರ ಕೃತಕ ಬುದ್ಧಿಮತ್ತೆಯ ಮೂಲಕ ರಚಿಸಲಾದ ವೀಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗುತ್ತಿದೆ.

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಭಾರತದ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸುವ ಧ್ವನಿ ಕೇಳಿಬರುತ್ತಿದೆ.

ಪ್ರಸ್ತುತ ನಡೆಯುತ್ತಿರುವ ಲೋಕಸಭಾ ಚುನಾವಣೆ 2024 ರ ಮಧ್ಯೆ, ಅಂತಹ ವೀಡಿಯೊ ತಪ್ಪು ಮಾಹಿತಿಗೆ ಮೂಲ ಕಾರಣವಾಗಬಹುದು ಮತ್ತು ವೆಬ್ ಬಳಕೆದಾರರಿಗೆ ದಾರಿತಪ್ಪಿಸುವ ವಿಷಯವಾಗಿದೆ. ಕೆಲವು ಕಾಂಗ್ರೆಸ್ ಬೆಂಬಲಿಗರು ಎಐ–ರಚಿಸಿದ ವೀಡಿಯೊವನ್ನು ಸಹ ಹಂಚಿಕೊಂಡಿದ್ದಾರೆ, ಇದು ರಾಹುಲ್ ಗಾಂಧಿಯವರ ವೀಡಿಯೊ ತುಣುಕುಗಳು ಮತ್ತು ಕೆಂಪು ಕೋಟೆಯ ನೋಟದೊಂದಿಗೆ ಬರುತ್ತದೆ.

**ರಾಹುಲ್ ಗಾಂಧಿ ನಕಲಿ ವಿಡಿಯೋ ವೈರಲ್:** ಒಬ್ಬ ಬಳಕೆದಾರರು ವೀಡಿಯೊವನ್ನು ಹಂಚಿಕೊಂಡಿದ್ದಾರೆ: ದಿನ ಶೀಘ್ರದಲ್ಲೇ ಜೂನ್ 4 ರಂದು ರಾಹುಲ್ ಗಾಂಧಿ ಪ್ರಧಾನಿಯಾಗಲಿದ್ದಾರೆ. ಜೂನ್ 4 ರಂದು 18 ನೇ ಲೋಕಸಭೆಯ ಫಲಿತಾಂಶಗಳನ್ನು ಘೋಷಿಸುವ ನಿರೀಕ್ಷೆಯಿರುವ ಲೋಕಸಭಾ ಚುನಾವಣೆ 2024 ರ ಮತ ಎಣಿಕೆಯ ದಿನವನ್ನು ಉಲ್ಲೇಖಿಸಲಾಗಿದೆ.

## X ಟಿವಿ ಆರಂಭಿಸಲಿರುವ ಎಲೋನ್ ಮಸ್ಕ್- ಪ್ರೋಮೋ ಬಿಡುಗಡೆ

**ದೆಹಲಿ:** ಟ್ವಿಟರ್ ಖರೀದಿಸಿದ ನಂತರ ಎಲೋನ್ ಮಸ್ಕ್ ಅವರು X ಟಿವಿಯ ಬಿಡುಗಡೆ ಮಾಡಲು ಸಿದ್ಧತೆ ನಡೆಸಿದ್ದಾರೆ. ಈ ಕುರಿತು X (ಟ್ವಿಟರ್)ನಲ್ಲಿ ಪ್ರೋಮೋವೊಂದನ್ನು ರಿಲೀಸ್ ಮಾಡಿದ್ದಾರೆ. 12–ಸೆಕೆಂಡ್‌ಗಳ ವಿಡಿಯೋ ಕ್ಲಿಪ್ ಅನ್ನು ಮಸ್ಕ್ ಹಂಚಿಕೊಂಡಿದ್ದಾರೆ. ಇದರಲ್ಲಿ X ನೆಟ್ವರ್ಕ್ ಲೋಗೋವನ್ನು ಮೊದಲ ಬಾರಿಗೆ ಪ್ರದರ್ಶಿಸಲಾಗಿದೆ. ಅದು ಹಳೆಯ ಕಾಲ ಟೆಲಿವಿಷನ್‌ಗಳ ರೀತಿಯಲ್ಲಿ ಫ ನೆಟ್ವರ್ಕ್ ಲೋಗೋ ಮಾಡಲಾಗಿದೆ. ಆದರೆ, ಯಾವಾಗ ಆರಂಭವಾಗುತ್ತೆ ಎನ್ನುವ ಕುರಿತು ಎಲೋನ್ ಮಸ್ಕ್ ಮಾಹಿತಿ ನೀಡಿಲ್ಲ. X ಮುಖ್ಯಸ್ಥೆ ಲಿಂಡಾ ಯಾಕರಿನೊ ಅವರು ಕಳೆದ ವಾರ ಫ ಟಿವಿ ಲಾಂಚ್ ಮಾಡುವ ಕುರಿತು ಸೂಚನೆ ನೀಡಿದ್ದರು. ಶೀಘ್ರದಲ್ಲೇ ನಾವು ಫ ಖಿಗಿ ಅಪ್ಲಿಕೇಶನ್ನೊಂದಿಗೆ ನಿಮ್ಮ ಸ್ಮಾರ್ಟ್ ಟಿವಿಗಳಿಗೆ ನೈಜ–ಸಮಯದ ವಿಷಯವನ್ನು ತರುತ್ತೇವೆ ಎಂದು ತಿಳಿಸಿದ್ದರು. ಫ ಖಿಗಿಯು ಟ್ರೆಂಡಿಂಗ್ ವಿಡಿಯೋ, ಎಐ ಪ್ರಸ್ತುತಿಯ ವಿಷಯಗಳು, ಉತ್ತಮ ವಿಡಿಯೋ ಹುಡುಕಾಟದ ಕಾರ್ಯಾಚರಣೆ, ಹೆಚ್ಚಿನ ಪ್ರಸಾರ ಸಾಮರ್ಥ್ಯ ಹೊಂದಿರಲಿದೆ ಎಂದು ಮಾಹಿತಿ ಲಿಂಡಾ ಟ್ವೀಟ್ ಮಾಡಿದ್ದರು.




## ಪನ್ನೂನ್ ಹತ್ಯೆ ಸಂಚು ಪ್ರಕರಣದಲ್ಲಿ ರಾ ಅಧಿಕಾರಿ ಕೈವಾಡ: ವರದಿ



**ವಾಷಿಂಗ್ಟನ್:** ಅಮೆರಿಕದಲ್ಲಿ ನೆಲೆ ನಿಂತಿರುವ ಖಲಿಸ್ತಾನಿ ಪ್ರತ್ಯೇಕತಾವಾದಿ ಗುರುಪತ್ವಂತ್ ಸಿಂಗ್ ಪನ್ನೂನ್ ಹತ್ಯೆಗೆ ಸಂಶೋಧನೆ ಮತ್ತು ವಿಶ್ಲೇಷಣೆ ವಿಭಾಗ (ಆರ್ ಎಡಬ್ಲ್ಯು) ಅಧಿಕಾರಿ ವಿಕ್ರಮ್ ಯಾದವ್, ಬಾಡಿಗೆ ಹಂತಕರಿಗೆ ಸೂಚನೆ ನೀಡಿದ್ದರು ಎಂದು ವಾಷಿಂಗ್ಟನ್ ಪೋಸ್ಟ್ ವರದಿ ಮಾಡಿದೆ.

ಪನ್ನೂನ್ ಅವರನ್ನು ಗುರಿ ಮಾಡಿದ ಕಾರ್ಯಾಚರಣೆಯನ್ನು ಆ ಸಮಯದಲ್ಲಿ ರಾ ಮುಖ್ಯಸ್ಥರಾಗಿದ್ದ ಸಮಂತ್ ಗೋಯಲ್ ಅನುಮೋದಿಸಿದ್ದರು ಎಂದು ಅಮೆರಿಕದ ಗುಪ್ತಚರ ಏಜೆನ್ಸಿಗಳು ಅಭಿಪ್ರಾಯಪಟ್ಟಿವೆ ಎಂದು ವರದಿಯಲ್ಲಿ ವಿವರಿಸಲಾಗಿದೆ.

ಕಳೆದ ವರ್ಷ ಪನ್ನೂನ್ ಪ್ರಕರಣ ಬೆಳಕಿಗೆ ಬಂದ ಬಳಿಕ ಯಾದವ್ ಅವರನ್ನು ಸಿಆರ್ ಪಿಎಫ್ ಗೆ ವಾಪಾಸು ವರ್ಗಾಯಿಸಲಾಗಿದೆ ಎಂದು ವರದಿಯಲ್ಲಿ ಪ್ರತಿಪಾದಿಸಲಾಗಿದೆ.

ಆದರೆ ಈ ವರದಿ ಬಗ್ಗೆ ಭಾರತ ಸರ್ಕಾರ ಇದುವರೆಗೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಭಾರತದ ಪ್ರಜೆ ನಿಖಿಲ್ ಗುಪ್ತಾ ಈ ಪ್ರಕರಣದಲ್ಲಿ ಶಾಮೀಲಾಗಿದ್ದಾರೆ ಎಂಬ ಸುಳಿವನ್ನು ಅಮೆರಿಕದ ಅಧಿಕಾರಿಗಳು ಕಳೆದ ವರ್ಷ ನೀಡಿದ್ದರು. ಭಾರತೀಯ ಅಧಿಕಾರಿಗಳ ಸೂಚನೆ ಮೇರೆಗೆ ಅವರು ಕಾರ್ಯ ನಿರ್ವಹಿಸಿದ್ದರು ಎಂದು ಆಪಾದಿಸಲಾಗಿತ್ತು.

ಝೆಕ್ ಮತ್ತು ಅಮೆರಿಕದ ಏಜೆನ್ಸಿಗಳು ಕಳೆದ ವರ್ಷ ಬಂಧಿಸಿದ ಬಳಿಕ ಗುಪ್ತಾ ಪರುಗ್ವೆಯ ಜೈಲಿನಲ್ಲಿದ್ದಾರೆ. ಆ ಬಳಿಕ ಭಾರತ ಈ ಬಗ್ಗೆ ತನಿಖೆ ನಡೆಸಲು ಉನ್ನತ ಮಟ್ಟದ ಸಮಿತಿಯನ್ನು ರಚಿಸಿತ್ತು.

## ಜೈ ಶ್ರೀರಾಮ್ ಘೋಷಣೆ ಕೂಗಿದ ಇಸ್ರೇಲ್ ಬೆಂಬಲಿಗರು!



**ವಾಷಿಂಗ್ಟನ್:** ಅಮೆರಿಕದ ಹಲವಾರು ವಿಶ್ವವಿದ್ಯಾಲಯಗಳ ಕ್ಯಾಂಪಸ್ಗಳಲ್ಲಿ ಪ್ಯಾಲೆಸ್ಟೀನ್ ಪರ ಪ್ರತಿಭಟನೆಗಳು ನಡೆಯುತ್ತಿದ್ದು, ಭಾರೀ ಚರ್ಚೆಗೆ ಗ್ರಾಸವಾಗಿದೆ. ಈ ನಡುವೆ ಲಾಸ್ ಏಂಜಲೀಸ್ನ ಕ್ಯಾಲಿಫೋರ್ನಿಯಾ ವಿಶ್ವವಿದ್ಯಾಲಯದಲ್ಲಿ ಇಸ್ರೇಲ್ ಬೆಂಬಲಿಗರು ಪ್ಯಾಲೆಸ್ಟೀನ್ ವಿರುದ್ಧ ಪ್ರತಿಭಟನೆ ನಡೆಸಿದ್ದು, ಮೆರವಣಿಗೆಯಲ್ಲಿ ಜೈ ಶ್ರೀರಾಮ್ ಎಂದು ಘೋಷಣೆ ಕೂಗಿರುವುದು ಗಮನಸೆಳೆದಿದೆ.

ಅಮೆರಿಕದ ರಾಷ್ಟ್ರೀಯವಾದಿಯೊಬ್ಬರು ಜೈ ಶ್ರೀರಾಮ್ ಎಂದು ಘೋಷಣೆ ಕೂಗಿರುವ ವೀಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಭಾರತದಲ್ಲಿ ಹಿಂದೂಗಳ ಧಾರ್ಮಿಕ ಮೆರವಣಿಗೆಗಳಲ್ಲಿ ಬಳಸಲಾಗುವ ಈ ಘೋಷಣೆಯನ್ನು ಭಾರತ ವಿರೋಧಿಗಳಿಗೆ ಪ್ರತಿಕ್ರಿಯೆಯಾಗಿ ಅಮೆರಿಕದಲ್ಲಿ ಬಳಸಲ್ಪಟ್ಟಿರುವುದು ಗಮನಾರ್ಹ ವಿಚಾರವಾಗಿದೆ.

ಕಳೆದ ವಾರ ಅಮೆರಿಕದ ಕ್ಯಾಂಪಸ್ಗಳಲ್ಲಿ ಭಾರೀ ಪ್ಯಾಲೆಸ್ಟೀನ್ ಪರ ಪ್ರತಿಭಟನೆಗಳು ನಡೆದಿವೆ. ಇದಕ್ಕೆ ಸಂಬಂಧಿಸಿದಂತೆ ಅನೇಕರನ್ನು ಬಂಧಿಸಲಾಗಿದೆ. ನ್ಯೂಯಾರ್ಕ್ನ ಕೊಲಂಬಿಯಾ ವಿಶ್ವವಿದ್ಯಾಲಯ ಒಂದರಲ್ಲೇ 100 ಕ್ಕೂ ಹೆಚ್ಚು ಪ್ರತಿಭಟನಾಕಾರರನ್ನು ಬಂಧಿಸಲಾಗಿದೆ.

## ಹಿಂದೂ ಮಹಾಸಾಗರ ಮತ್ತು ಕೆಂಪು ಸಮುದ್ರದಲ್ಲಿ ನಾಲ್ಕು ಹಡಗುಗಳ ಮೇಲೆ 'ಹೌತಿಗಳ' ದಾಳಿ



**ಗಾಜಾ:** ಗಾಝಾದಲ್ಲಿ ಇಸ್ರೇಲ್ನ ಮಿಲಿಟರಿ ಕ್ರಮಗಳ ವಿರುದ್ಧ ಪ್ಯಾಲೆಸ್ಟೀನಿಯನ್ನರೊಂದಿಗೆ ಒಗ್ಗಟ್ಟಿನಿಂದ ಅಂತರರಾಷ್ಟ್ರೀಯ ಹಡಗುಗಳ ವಿರುದ್ಧ ನಡೆಯುತ್ತಿರುವ ಅಭಿಯಾನದ ಭಾಗವಾಗಿ ಹಿಂದೂ ಮಹಾಸಾಗರದಲ್ಲಿ ಡ್ರೋನ್ ದಾಳಿಯಲ್ಲಿ ಎಂಎಸ್ಸಿ ಒರಿಯನ್ ಕಂಟೇನರ್ ಹಡಗನ್ನು ಗುರಿಯಾಗಿಸಿಕೊಂಡಿದ್ದೇವೆ ಎಂದು ಎಮೆನ್ನ ಹೌತಿಗಳು ಹೇಳಿದ್ದಾರೆ.

ಪೋರ್ಚುಗಲ್ ಧ್ವಜ ಹೊಂದಿರುವ ಎಂಎಸ್ಸಿ ಒರಿಯನ್ ಪೋರ್ಚುಗಲ್ನ ಸಿನೆಸ್ ಮತ್ತು ಒಮಾನ್ನ ಸಲಾಲಾ ಬಂದರುಗಳ ನಡುವೆ ಪ್ರಯಾಣಿಸುತ್ತಿದ್ದು, ಅದರ ನೋಂದಾಯಿತ ಮಾಲೀಕ ಜೋಡಿಯಾಕ್ ಮ್ಯಾರಿಟೈಮ್ ಎಂದು ಎಲ್ ಎಸ್‌ಇಜಿ ಅಂಕಿ ಅಂಶಗಳು ತಿಳಿಸಿವೆ. ರಾಶಿಚಕ್ರವು ಭಾಗಶಃ ಇಸ್ರೇಲಿ ಉದ್ಯಮಿ ಇಯಾಲ್ ಒಫರ್ ಒಡೆತನದಲ್ಲಿದೆ. ಇರಾನ್–ಅಲಿಪ್ತ ಹೌತಿ ಭಯೋತ್ಪಾದಕರು ನವೆಂಬರ್ನಿಂದ ಕೆಂಪು ಸಮುದ್ರ, ಬಾಬ್ ಅಲ್–ಮಂದಾಬ್ ಜಲಸಂಧಿ ಮತ್ತು ಅಡೆನ್ ಕೊಲ್ಲಿಯಲ್ಲಿ ಪದೇ ಪದೇ ಡ್ರೋನ್ ಮತ್ತು ಕ್ಷಿಪಣಿ ದಾಳಿಗಳನ್ನು ನಡೆಸಿದ್ದಾರೆ, ಇದು ಸಾಗಣೆದಾರರನ್ನು ದಕ್ಷಿಣ ಆಫ್ರಿಕಾದ ಸುತ್ತಲೂ ದೀರ್ಘ ಮತ್ತು ಹೆಚ್ಚು ದುಬಾರಿ ಪ್ರಯಾಣಗಳಿಗೆ ಸರಕುಗಳನ್ನು ಮರುಮಾರ್ಗಗೊಳಿಸಲು ಒತ್ತಾಯಿಸುತ್ತದೆ ಮತ್ತು ಇಸ್ರೇಲ್ –ಹಮಾಸ್ ಯುದ್ಧವು ಹರಡಬಹುದು ಮತ್ತು ಮಧ್ಯಪ್ರಾಚ್ಯವನ್ನು ಅಸ್ಥಿರಗೊಳಿಸಬಹುದು ಎಂಬ ಆತಂಕವನ್ನು ಹುಟ್ಟುಹಾಕಿದೆ.

**ದಾಳಿ ವ್ಯಾಪ್ತಿಯನ್ನು ವಿಸ್ತರಿಸಲಾಗುತ್ತಿದೆ:** ಇಸ್ರೇಲ್ ಸಂಬಂಧಿತ ಹಡಗುಗಳು ಹಿಂದೂ ಮಹಾಸಾಗರದ ಮೂಲಕ ಗುಡ್ ಹೋಪ್ ಕೇಪ್ ಕಡೆಗೆ ಹಾದುಹೋಗುವುದನ್ನು ತಡೆಯಲು ಗುಂಪು ತನ್ನ ದಾಳಿ ಪ್ರದೇಶವನ್ನು ವಿಸ್ತರಿಸುತ್ತಿದೆ ಎಂದು ಗುಂಪಿನ ನಾಯಕ ಮಾರ್ಚ್‌ನಲ್ಲಿ ಹೇಳಿದ್ದರು.

## ಭಾರತದ ಮೂವತ್ತು ವಿಮಾನ ನಿಲ್ದಾಣಗಳಿಗೆ ಬಾಂಬ್ ಬೆದರಿಕೆ ಕರೆ



**ದೆಹಲಿ:** ಭಾರತದ 30 ವಿಮಾನ ನಿಲ್ದಾಣಗಳಿಗೆ ಇಮೇಲ್ ಮೂಲಕ ಬಾಂಬ್ ಬೆದರಿಕೆ ಕರೆ ಬಂದಿದ್ದು, ಈ ಬಗ್ಗೆ ಏರ್ಪೋರ್ಟ್ ಸುತ್ತುಮುತ್ತ ಎಚ್ಚರಿಕೆ ವಹಿಸಲಾಗಿದ್ದು, ತೀವ್ರ ತಪಾಸಣೆ ನಡೆಯುತ್ತಿದೆ. ನಿನ್ನೆ ಸಂಜೆ ಅಧಿಕೃತ ಇಮೇಲ್ ವಿಳಾಸಕ್ಕೆ ಹಿಂದಿಯಲ್ಲಿ ಬರೆಯಲಾಗಿದ್ದ ಬೆದರಿಕೆ ಮೇಲ್ ಬಂದಿದ್ದು, ಎಲ್ಲಾ ನಿಲ್ದಾಣಗಳಲ್ಲಿ ಬಾಂಬ್ ಇಡಲಾಗಿದೆ. ಬಟನ್ ಒತ್ತುವ ಮೂಲಕ ನಿಲ್ದಾಣವನ್ನು ಸ್ಫೋಟಿಸಲಾಗುವುದು ಎಂದು ಮೇಲ್ನಲ್ಲಿ ತಿಳಿಸಲಾಗಿದೆ. ಇಮೇಲ್ ಪರಿಶೀಲಿಸಿದ ಅಧಿಕಾರಿಗಳು ಈ ವಿಚಾರವನ್ನು ಸಿಐಎಸ್‌ಎಫ್ ಮತ್ತು ಉತ್ತರ ಪ್ರದೇಶ ಭದ್ರತಾ ಅಧಿಕಾರಿಗಳಿಗೆ ತಿಳಿಸಿ ತುರ್ತು ಸಭೆ ನಡೆಸಿದ್ದಾರೆ. ನಂತರ ನಿಲ್ದಾಣದ ಆವರಣದಲ್ಲಿ ಎಚ್ಚರ ವಹಿಸಿದ್ದು, ಪರಿಶೀಲಿಸಿದ್ದಾರೆ. ತಡರಾತ್ರಿವರೆಗೆ ತಪಾಸಣೆ ಮಾಡಿದ್ದಾರೆ.

ಬೆದರಿಕೆ ಇಮೇಲ್ ಸಂಬಂಧಿಸಿದಂತೆ ತನಿಖೆ ನಡೆಯುತ್ತಿದ್ದು, ಇದುವರೆಗೆ ಬೆದರಿಕೆ ಇಮೇಲ್ ಕಳುಹಿಸಿದವರ ಕುರಿತು ಯಾವುದೇ ಮಾಹಿತಿ ಬಹಿರಂಗಗೊಂಡಿಲ್ಲ. ವಿಮಾನ ನಿಲ್ದಾಣದ ಹಿರಿಯ ಸಿಐಎಸ್ ಎಫ್ ಕಮಾಂಡೆಂಟ್ ಅಜಯ್ ಕುಮಾರ್ ಮಾತನಾಡಿದ್ದು, ವಿಮಾನ ನಿಲ್ದಾಣ ನಿರ್ದೇಶಕರಿಗೆ ಸೋಮವಾರದಂದು ಅಪರಿಚಿತ ಇಮೇಲ್ ಬಂದಿದೆ. ಅದರಲ್ಲಿ ದೇಶದ 30 ವಿಮಾನ ನಿಲ್ದಾಣಗಳನ್ನು ಸ್ಫೋಟಿಸುವ ಬೆದರಿಕೆ ಹಾಕಲಾಗಿದೆ. ಇದನ್ನು ಯಾರೋ ಮಾನಸಿಕ ಅಸ್ವಸ್ಥ ವ್ಯಕ್ತಿ ಮಾಡಿರಬೇಕು ಎಂದು ಮೇಲ್ನೋಟಕ್ಕೆ ಕಾಣುತ್ತಿದೆ ಎಂದು ಹೇಳಿದ್ದಾರೆ ಎಂಬ ಮಾಹಿತಿ ತಿಳಿದು ಬಂದಿದೆ.

ಬುಧವಾರ 1.5.2024
ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

## 'ದೋಣಿ' ಕಥೆಯ ಹಿಂದಿದೆ ಅನುಮಾನ

# ಅಮೃತಾ ಆತ್ಮಹತ್ಯೆ

ಇಡೀಕುಟುಂಬ ಮದುವೆಯ ಸಡಗರದಲ್ಲಿ ಸಂಭ್ರಮಿಸುತ್ತಿದ್ದರೆ, ಆ ಕುಟುಂಬಕ್ಕೆ ನೇಣು ಹಾಕಿಕೊಂಡು ಶಾಕ್ ನೀಡಿದ್ದರುಖ್ಯಾತ ಭೋಜಪುರಿ ನಟಿಅಮೃತಾ ಪಾಂಡೆ.ಮುಂಬೈನಲ್ಲಿ ವಾಸವಿದ್ದಅಮೃತಾ, ಮನೆಯಲ್ಲಿ ನಡೆಯುತ್ತಿದ್ದ ಮದುವೆ ಸಮಾರಂಭದಲ್ಲಿ ಪಾಲ್ಗೊಳ್ಳಲು ಭಾಗಲ್ಪುರಕ್ಕೆ ಬಂದಿದ್ದರು.ಈ ಸಮಯದಲ್ಲಿಅವರುಅಪಾಟ್ ರ್ಮೆಂಟ್‌ನಲ್ಲಿ ನೇಣು ಬಿಗಿದುಕೊಂಡುಆತ್ಮಹತ್ಯೆ ಮಾಡಿಕೊಂಡಿದ್ದರು.

ಸಾವಿಗೆ ಇಂಥದ್ದೇಕಾರಣಎಂದು ತಿಳಿದು ಬಂದಿಲ್ಲ. ಆದರೆ, ಸಾವಿಗೂ ಮುನ್ನಅವರು ವಾಟ್ಸಪ್ ಸ್ಟೇಟಸ್ ಹಾಕಿದ್ದು, ಅದುಅನುಮಾನ ಮೂಡಿಸುವಂತಿತ್ತು.ಸ್ಟೇಟಸ್ ಹಾಕಿ ಒಂದುಗಂಟೆ ನಂತರಅಮೃತಾ ಶವವಾಗಿ ಪತ್ತೆಯಾಗಿದ್ದರು.ಈ ವಾಟ್ಸ್‌ಅಪ್ ಸ್ಟೇಟಸ್ ನಲ್ಲಿದೋಣಿಯಕುರಿತಾದ ಬರಹವಿತ್ತು.

ವಾಟ್ಸಪ್ ಸ್ಟೇಟಸ್ ನಲ್ಲಿಅವರು ಅವನ ಜೀವನ 2 ದೋಣಿಯಲ್ಲಿ ನಡೆಯುತ್ತಿದೆ.ನಾನು ನನ್ನದೋಣಿಯನ್ನು ಮುಳುಗಿಸಿಕೊಳ್ಳುವ ಮೂಲಕ, ಅವನಿಗೆ ದೋಣಿಗೆ ಸುಗಮ ದಾರಿ ಮಾಡಿಕೊಡುವೆಎಂದು ಬರೆದುಕೊಂಡಿದ್ದರು.ಈ ದೋಣಿಯಅರ್ಥಅವರ ಪತಿಎಂದು ಹೇಳಲಾಗುತ್ತಿದೆ.ನಟಿಯ ಪತಿಗೆ ಮತ್ತೊಂದು ಸಂಬಂಧವಿತ್ತಾ?ಇದೇಕಾರಣಕ್ಕೆ ನಟಿಆತ್ಮಹತ್ಯೆ ಮಾಡಿಕೊಂಡಿದ್ದಾರೆಎನ್ನುವ ಸುತ್ತತನಿಖೆ ನಡೆಯುತ್ತಿದೆ.



## ಎಗ್ ಫ್ರೀಜಿಂಗ್ ವಿಡಿಯೋ ಹಂಚಿಕೊಂಡ ನಟಿ

# ಮೆಹ್ರೀನ್

ಬಾಲಿವುಡ್ ನಟಿ ಮೃಣಾಲ್‌ಠಾಕೂರ್‌ಇತ್ತೀಚೆಗೆಎಗ್ ಫ್ರೀಜ್ ಮಾಡಿ ಮಗು ಪಡೆಯುವ ಬಗ್ಗೆ ತಮ್ಮ ಪ್ಲ್ಯಾನ್‌ಅನ್ನು ತಿಳಿಸಿದ್ದರು. ಈ ಬೆನ್ನಲ್ಲೇತೆಲುಗು ನಟಿ ಮೆಹ್ರೀನ್ ಪಿರ್ಜಾದಾಕೂಡಎಗ್ ಫ್ರೀಜಿಂಗ್ ವಿಡಿಯೋ ಹಂಚಿಕೊಳ್ಳುವ ಮೂಲಕ ಸುದ್ದಿಯಲ್ಲಿದ್ದಾರೆ.

ನಟಿ ಮೆಹ್ರೀನ್ ಈಗ ಎಗ್ ಫ್ರೀಜಿಂಗ್ ಮಾಡಿಸಿದ್ದಾರೆ. ಹಂತ ಹಂತವಾಗಿತಾವು ಈ ಪ್ರತಿಕ್ರಿಯೆ ಒಳಗಾಗಿದ್ದು ಹೇಗೆ ಎಂದು ನಟಿ ವಿಡಿಯೋ ಮೂಲಕ ತೋರಿಸಿ ಕೊಟ್ಟಿದ್ದಾರೆ. 2 ವರ್ಷಗಳಿಂದ ಪ್ರಯತ್ನಿಸುತ್ತಿದ್ದೆ.ಈಗ ಎಗ್ ಫ್ರೀಜಿಂಗ್ ಪ್ರಕ್ರಿಯೆ ಮುಗಿದಿದ್ದಕ್ಕೆ ಬಹಳ ಸಂತೋಷವಾಗುತ್ತಿದೆ.ಆದರೆಇದು ನನ್ನ ವೈಯಕ್ತಿಕ ವಿಚಾರಅಲ್ಲವೇ?ಇದನ್ನುಎಲ್ಲರಿಗೂ ಹೇಳಬೇಕಾ?ಬೇಡ್ವಾ?ಎಂದು ಸಾಕ?ಟ್ಟ ಬಾರಿ ಆಲೋಚಿಸಿದ್ದೇನೆ. ನನ್ನಂತೆ ಸಾಕಷ್ಟು ಮಹಿಳೆಯರು ಇದ್ದಾರೆ.ಮದುವೆ, ಮಕ್ಕಳು ಮಾಡಿಕೊಳ್ಳುವ ಬಗ್ಗೆ ನಿರ್ಧಾರ ತೆಗೆದುಕೊಳ್ಳಲು ಸಾಧ್ಯವಾಗುತ್ತಿಲ್ಲ. ನಾನು ಮಾತ್ರ ಭವಿಷ್ಯಕ್ಕಾಗಿಇದು ಬಹಳ ಮುಖ್ಯಎಂದು ಭಾವಿಸಿದೆ. ಈ ಬಗ್ಗೆ ನಾವು ದೊಡ್ಡದಾಗಿ ಮಾತನಾಡುತ್ತಿಲ್ಲ. ಆದರೆತಂತ್ರಜ್ಞಾನದ ಸಹಾಯದಿಂದ ಒಳ್ಳೆಯ ನಿರ್ಧಾರ ತೆಗೆದುಕೊಳ್ಳುತ್ತಿದ್ದೇವೆ ಎಂದು ನಟಿ ಹೇಳಿದ್ದಾರೆ. ತಾಯಿ ಆಗಬೇಕು ಎನ್ನುವುದು ನನ್ನ ಕನಸು. ಆದರೆಅದು ಕೆಲ ವರ್ಷಗಳು ತಡವಾಗಬಹುದು.ಆ ಕಾರಣಕ್ಕೆಅದನ್ನು ಬಿಡೋಕೆ ಸಾಧ್ಯವಿಲ್ಲ. ಅದಕ್ಕೆ ಈಗ ಎಗ್ ಫ್ರೀಜಿಂಗ್ ಮಾಡಿದ್ದೇನೆ. ಆಸ್ಪತ್ರೆಅಂದರೆ ಭಯಪಡುವ ನನ್ನಂತಹವರಿಗೆಇದು ನಿಜಕ್ಕೂ ಸವಾಲೇ ಸರಿ.ಯಾಕೆಂದರೆಇಂಜೆಕ್ಷನ್‌ಕಾರಣಕ್ಕೆಆಸ್ಪತ್ರೆಗೆ ಹೋದ ಪ್ರತಿ ಬಾರಿ ನಾನು ತಲೆ ಸುತ್ತಿ ಬೀಳುತ್ತಿದ್ದೆ.ಆದರೆಎಗ್ ಫ್ರೀಜಿಂಗ್ ಮಾಡುವುದು ಸರಿನಾ? ಎಂದು ಕೇಳಿದರೆ, ಖಂಡಿತಾ ಹೌದುಎನ್ನುತ್ತೇನೆಎಂದು ಮಾತನಾಡುತ್ತೇನೆ. ಚಈ ಜರ್ನಿಯಲ್ಲಿ ನನ್ನ ಬೆಂಬಲಿಸಿ ನಿಂತಡಾ.ರಿಮ್ಮಿ ಮತ್ತುತಮ್ಮತಾಯಿಗೆ ಧನ್ಯವಾದಗಳು ಎಂದು ಮೆಹ್ರೀನ್ ಬರೆದುಕೊಂಡಿದ್ದಾರೆ. ಮಗುವಿನ ವಿಚಾರವಾಗಿ ನಟಿತೆಗೆದುಕೊಂಡ ನಿರ್ಧಾರಕ್ಕೆ ನೆಟ್ಟಿಗರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಅಂದಹಾಗೆ, ನಟ ಶಿವರಾಜ್‌ಕುಮಾರ್ ನಟನೆಯ 'ನೀ ಸಿಗುವವರೆಗೂ' ಸಿನಿಮಾದಲ್ಲಿ ಮೆಹ್ರೀನ್ ನಾಯಕಿಯಾಗಿ ಕಾಣಿಸಿಕೊಳ್ಳಲಿದ್ದಾರೆ.





## ಆಯೋಜಕರ ಯಡವಟ್ಟು

# 'ಗಜ' ಚಿತ್ರದ ನಟಿ ಬೇಸರ

ದರ್ಶನ್ ನಟನೆಯ 'ಗಜ' ಸಿನಿಮಾದ ಮೂಲಕ ಸ್ಯಾಂಡಲ್‌ವುಡ್‌ಗೆಎಂಟ್ರಿಕೊಟ್ಟ ಮಲಯಾಳಂ ಬ್ಯೂಟಿ ನವ್ಯಾ ನಾಯರ್ ಇತ್ತೀಚೆಗೆಕಾರ್ಯಕ್ರಮವೊಂದಕ್ಕೆಅತಿಥಿಯಾಗಿ ಆಗಮಿಸಿದ್ದರು.ಕಾರ್ಯಕ್ರಮದಆಯೋಜಕರು ನಟಿಯ ಫ್ಯಾಮಿಲಿ ಬಗ್ಗೆ ತಪ್ಪಾದ ಮಾಹಿತಿ ನೀಡಿದ್ದು ನವ್ಯಾ ಬೇಸರ ವ್ಯಕ್ತಪಡಿಸಿದ್ದಾರೆ. ನಿಮಗೆ ಒಂದು ವಿಚಾರವನ್ನು ಹೇಳಲು ಬಯಸುತ್ತೇನೆ. ನಾನಿಲ್ಲಿರುವ ಬುಕ್‌ಲೆಟ್‌ಅನ್ನು ನೋಡಿದೆ.ಅದರಲ್ಲಿ ನನಗೆ ಇಬ್ಬರೂ ಮಕ್ಕಳಿದ್ದಾರೆ ಎಂದು ಬರೆಯಲಾಗಿದೆ.ಈ ಬಗ್ಗೆ ನನ್ನಕುಟುಂಬ ಚಿಂತಿಸುವುದಿಲ್ಲವೇಎಂದು ನಟಿಆಯೋಜಕರಯಡವಟ್ಟಿಗೆಖಡಕ್ ಪ್ರಶ್ನಿಸಿದ್ದಾರೆ. ನನಗಿರುವುದುಒಬ್ಬನೇ ಮಗ.ನೀವು ಯಮಿಕಾಎಂದು ಮಗಳಿದ್ದಾಳೆ ಎಂದು ಬರೆದಿದ್ದೀರಿ.ಜನರು ನನ್ನತಪ್ಪು ತಿಳಿದುಕೊಳ್ಳುವುದಿಲ್ಲವೇ. ವಿಕಿಪಿಡಿಯಾದಲ್ಲಿ ಮಾಹಿತಿ ಲಭ್ಯವಿದೆ. ಈ ರೀತಿ ಬರೆಯುವಾಗ ವಿಚಾರಅರಿತು ಬರೆಯಬೇಕುಎಂದುಆಯೋಜಕರನ್ನು ನಟಿತರಾಟೆಗೆತೆಗೆದುಕೊಂಡಿದ್ದಾರೆ. ಅದಷ್ಟೇ ಅಲ್ಲ, ತಾವು ನಟಿಸದೇಇರುವ ಸಿನಿಮಾಗಳ ಹೆಸರು ಹಾಕಿರೋದ್ದಕ್ಕೆ ನಟಿ ಬೇಸರ ವ್ಯಕ್ತಪಡಿಸಿದ್ದಾರೆ. ಕನ್ನಡದಗಜ, ಬಾಸ್, ನಮ್ಮೆಜಮಾನ್ರು, ಭಾಗ್ಯದ ಬಳೆಗಾರ, ದೃಶ್ಯ 1, ದೃಶ್ಯ ಪಾರ್ಟ್ 2 ಸಿನಿಮಾಗಳಲ್ಲಿ ನವ್ಯಾ ನಟಿಸಿದ್ದಾರೆ.

# ಮುಂಬೈ ವಿರುದ್ಧ ರೋಚಕ ಜಯ

ಮುಂಬೈ ಇಂಡಿಯನ್ಸ್ ವಿರುದ್ಧ ಲಕ್ನೋ ಸೂಪರ್ ಜೈಂಟ್ಸ್ ರೋಚಕ 4 ವಿಕೆಟ್‌ಗಳ ಜಯ ಸಾಧಿಸಿ ಅಂಕ ಪಟ್ಟಿಯಲ್ಲಿ ಮೂರನೇ ಸ್ಥಾನಕ್ಕೆ ಜಿಗಿದಿದೆ.

ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಮುಂಬೈ 7 ವಿಕೆಟ್ ನಷ್ಟಕ್ಕೆ 144 ರನ್ ಗಳಿಸಿತು. ಸುಲಭ ಸವಾಲನ್ನು ಬೆನ್ನಟ್ಟಿದ ಲಕ್ನೋ ಇನ್ನೂ 4 ಎಸೆತ ಬಾಕಿ ಇರುವಂತೆಯೇ 6 ವಿಕೆಟ್ ನಷ್ಟಕ್ಕೆ 145 ರನ್ ಹೊಡೆದು ಜಯಗಳಿಸಿತು.

ಕೊನೆಯ 4 ಓವರ್‌ಗಳಲ್ಲಿ ಲಕ್ನೋ ತಂಡ ಗೆಲ್ಲಲು 23 ರನ್ ಬೇಕಿತ್ತು. 17 ಓವರ್ ಎಸೆದ ಬುಮ್ರಾ 1 ರನ್ ನೀಡುವ ಮೂಲಕ ಪಂದ್ಯಕ್ಕೆ ರೋಚಕ ತಿರುವು ನೀಡಿದರು.

ಜೆರಾಲ್ಡ್ ಕೋಟ್ಜಿ 18ನೇ ಓವರ್‌ನಲ್ಲಿ 9 ರನ್ ನೀಡಿ ಟರ್ನರ್ ಅವರನ್ನು ಬೌಲ್ಡ್ ಮಾಡಿದರು. ಕೊನೆಯ 12 ಎಸೆತಗಳಲ್ಲಿ 13 ರನ್ ಬೇಕಿತ್ತು. ಹಾರ್ದಿಕ್ ಎಸೆದ ಮೊದಲ ಬಾಲಿಗೆ ಬದೌನಿ ರನೌಟ್ ಆದರು. ಈ ಓವರ್‌ನಲ್ಲಿ 10 ರನ್ ಬರುವ ಮೂಲಕ ಪಂದ್ಯ ಮುಂಬೈಯಿಂದ ಜಾರಿತು. ಕೊನೆಯ ಓವರ್‌ನ ಮೊದಲ ಎಡು ಎಸೆತಗಳಲ್ಲಿ ಪೂರನ್ 3 ರನ್ ಗಳಿಸುವ ಮೂಲಕ ತಂಡಕ್ಕೆ ಗೆಲುವು ತಂದುಕೊಟ್ಟರು. ಲಕ್ನೋ ಪರ ಸ್ಟೊಯಿನೆಸ್ 62 ರನ್(45 ಎಸೆತ, 7 ಬೌಂಡರಿ, 2 ಸಿಕ್ಸ್), ಕೆಎಲ್ ರಾಹುಲ್ 28 ರನ್(22 ಎಸೆತ, 3 ಬೌಂಡರಿ, 1 ಸಿಕ್ಸರ್) ಸಿಡಿಸಿ ಔಟಾದರು. ಮುಂಬೈ ಪರ ಇಶನ್ ಕಿಶನ್ 32 ರನ್ (36 ಎಸೆತ, 3 ಬೌಂಡರಿ), ನೆಹಾಲ್ ವಧೇರಾ 46 ರನ್(41 ಎಸೆತ, 4 ಬೌಂಡರಿ, 2 ಸಿಕ್ಸರ್), ಟಿಮ್ ಡೇವಿಡ್ 35 ರನ್ ( 18 ಎಸೆತ, 3 ಬೌಂಡರಿ, 1 ಸಿಕ್ಸರ್) ಹೊಡೆದರು.






## ಮತ್ತೆ ರಾಯಣ್ಣ ಬ್ರಿಗೇಡ್

# ಆರಂಭಿಸುವ ಸುಳಿವು ನೀಡಿದ ಈಶ್ವರಪ್ಪ

**ಶಿವಮೊಗ್ಗ:** ಹಿಂದುಳಿದವರಿಗೆ, ಅತಿ ಹಿಂದುಳಿದವರಿಗೆನ್ಯಾಯಸಿಗಬೇಕು ಅಂತಸಂಗೊಳ್ಳಿ ರಾಯಣ್ಣಬ್ರಿಗೇಡ್‌ಪ್ರಾರಂಭಿಸಿದ್ದೆ.ಸಂಗೊಳ್ಳಿ ರಾಯಣ್ಣಬ್ರಿಗೇಡ್‌ನಿಲ್ಲಿಸಬೇಕು ಅಂತಮಾಜಿ ಮುಖ್ಯಮಂತ್ರಿಬಿಎಸ್ ಯಡಿಯೂರಪ್ಪಮತ್ತು ಕೇಂದ್ರಸಚಿವ ಅಮಿತ್ ಶಾ (ಂಟಣ ಖುಚು) ಹೇಳಿದರು. ಮರು ಮಾತನಾಡದೆ ನಿಲ್ಲಿಸಿದೆ.ಆ ಸಂಘಟನೆ ಈಗ ಇದ್ದಿದ್ದರೆ ಹಿಂದುಳಿದವರಿಗೆ ನ್ಯಾಯ ಸಿಗುತ್ತಿತ್ತೇನೋ.ನಾನು ಯಾವಾಗಲೂ ಹಿರಿಯರ ಮಾತು ಮೀರಿರಲಿಲ್ಲ ಹೀಗಾಗಿ ಕೈಬಿಟ್ಟೆ.ನಾನು ಆವಾಗಲೇ ಅವರ ಮಾತು ಮೀರಿದ್ದರೆ ಸರಿ ಹೋಗುತಿತ್ತು.ಚುನಾವಣೆ ಮುಗಿದ ನಂತರ ಹಿಂದುಳಿದವರ, ದಲಿತರ ರಾಜ್ಯ ಮಟ್ಟದ ಸಭೆ ಕರೆಯುತ್ತೇನೆ ಎಂದು ಮಾಜಿ ಸಚಿವ, ಶಿವಮೊಗ್ಗ ಲೋಕಸಭಾ ಕ್ಷೇತ್ರದ ಪಕ್ಷೇತರ ಅಭ್ಯರ್ಥಿ ಕೆಎಸ್ ಈಶ್ವರಪ್ಪ ಹೇಳಿದರು.

ಶಿವಮೊಗ್ಗದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಹಿಂದುಳಿದವರಿಗೆ, ದಲಿತರಿಗೆ ನ್ಯಾಯ ಕೊಡಿಸುವ ಕೆಲಸ ಮಾಡುತ್ತೇನೆ. ಬಿಜೆಪಿ ನನ್ನ ಮಾತೃ ಸಂಸ್ಥೆ, ಈ ಚುನಾವಣೆಯಲ್ಲಿ ಗೆದ್ದು ಮತ್ತೆ ಬಿಜೆಪಿಗೆ ಹೋಗುತ್ತೇನೆ. ಕ್ಷೇತ್ರದಲ್ಲಿ ನನಗೆ ದಿನದಿಂದ ದಿನಕ್ಕೆ ಬೆಂಬಲ ಹೆಚ್ಚಾಗುತ್ತಿದೆ.ಜನ ನಿರೀಕ್ಷೆಗೆ ಮೀರಿ ಬೆಂಬಲ ಕೊಡುತ್ತಿದ್ದಾರೆ ಎಂದು ತಿಳಿಸಿದರು.

ಬಗರ್ ಹುಕಂ ಜಮೀನು ಸಮಸ್ಯೆ ಇನ್ನೂ ಹಾಗೆ ಇದೆ. ಸಾವಿರಾರು ಸಂತ್ರಸ್ತರಿಗೆ ಈವರೆಗೂ ಹಕ್ಕುಪತ್ರ ಸಿಕ್ಕಿಲ್ಲ. ಮಲೆನಾಡು ರೈತ ಹೋರಾಟ ಸಮಿತಿ ನನಗೆ ಬೆಂಬಲ ನೀಡಿದೆ.ಇವರ ಹೋರಾಟಕ್ಕೆ ನಾನು ಸಹ ಸಾಥ್ ನೀಡುತ್ತೇನೆ. ಚುನಾವಣೆ ಬಳಿಕವೂ ನನ್ನ ಹೋರಾಟ ಮುಂದುವರಿಯುತ್ತೆ.ಚುನಾವಣೆ ಬಳಿಕ ರಾಜ್ಯಮಟ್ಟದ ಸಭೆ ಮಾಡುತ್ತೇನೆ ಎಂದರು.



**ಸಂಗೊಳ್ಳಿ ರಾಯಣ್ಣ ಬ್ರಿಗೇಡ್:** ಪಕ್ಷ ರಾಜಕಾರಣದಲ್ಲಿ ಅವರ ಅಸ್ತಿತ್ವ ಅಲುಗಾಡಿದಾಗ, ಬಿಜೆಪಿಗೆ ಹಿಂದುಳಿದ ವರ್ಗಗಳ ನಾಯಕರೊಬ್ಬರ ಅಗತ್ಯ ಉದ್ಭವಿಸಿದಾಗ, ಕಾಂಗ್ರೆಸ್‌ನಹಿಂದುಳಿದವರ್ಗಗಳ, ಮುಖ್ಯವಾಗಿ ಕುರುಬಸಮುದಾಯದಸಿದ್ದರಾಮಯ್ಯನವರಿಗೆಪರ್ಯಾಯನಾಯಕತ್ವಕ್ಕಾಗಿ ಈಶ್ವರಪ್ಪ ಕಂಡುಕೊಂಡ ದಾರಿ ರಾಯಣ್ಣ ಬ್ರಿಗೇಡ್. 2016ರ ಡಿಸೆಂಬರ್‌ನಲ್ಲಿಬೆಳಗಾವಿ ಜಿಲ್ಲೆಯ ಖಾನಾಪುರ ತಾಲೂಕಿನನಂದಗಡದಲ್ಲಿಮಾಜಿ ಸಚಿವ ಈಶ್ವರಪ್ಪಸಂಗೊಳ್ಳಿ ರಾಯಣ್ಣಬ್ರಿಗೇಡ್ ಆರಂಭಿಸಿದರು. 2018ರವಿಧಾನಸಭೆ ಚುನಾವಣೆಗೂಮುಂಚೆ ರಾಯಣ್ಣಬ್ರಿಗೇಡ್ ಆಂಭವಾಗಿದ್ದು, ಬಿಜೆಪಿಗೆಮಗ್ಗಲುಮುಳ್ಳಾಗಿತ್ತು.

ಈಗ ಮತ್ತೆ ಈಶ್ವರಪ್ಪನವರ ರಾಜಕೀಯ ಭವಿ?ಯ ಡೋಲಾಯಮಾನವಾಗಿರುವ ಸಂದರ್ಭದಲ್ಲಿ ಮತ್ತೆ ರಾಯಣ್ಣನ ಮೊರೆ ಹೋಗಿದ್ದಾರೆ. ಹೀಗಾಗಿ ಈಶ್ವರಪ್ಪ ಅವರು ರಾಯಣ್ಣ ಬ್ರಿಗೇಡ್‌ಗೆಮರುಜೀವನೀಡಲು ಯತ್ನಿಸುತ್ತಿದ್ದಾರೆ.

# ಅಪರಾಧ ಅನ್ನೋ ಥರ ಬಿಂಬಿಸಲು ಯತ್ನ

**ರಾಯಚೂರು:** ಪ್ರಜ್ವಲ್ ರೇವಣ್ಣ ಪ್ರಕರಣ ಚುನಾವಣೆಗೆ ಪರೋಕ್ಷವಾಗಿ ಸಣ್ಣ ಪ್ರಮಾಣದ ಪ್ರಭಾವ ಬೀರುತ್ತದೆ.ಆದರೆ ಕಾಂಗ್ರೆಸ್ ಇದನ್ನು ಇಡೀ ಎನ್‌ಡಿಎ ಅಪರಾಧ ಎಂಬ ಥರ ಬಿಂಬಿಸುವ ಪ್ರಯತ್ನ ಮಾಡುತ್ತಿದೆ ಎಂದು ಮಾಜಿ ಸಚಿವ ಸಿ.ಟಿ.ರವಿ ಹೇಳಿದ್ದಾರೆ.

ಪ್ರಜ್ವಲ್ ರೇವಣ್ಣ ಪ್ರಕರಣದ ಬಗ್ಗೆ ರಾಯಚೂರಿನ ಸಿಂಧನೂರಿನಲ್ಲಿ ಮಾತನಾಡಿದ ಅವರು, ಪ್ರಾಥಮಿಕ ತನಿಖೆ ನಂತರ ಸತ್ಯಾಸತ್ಯತೆ ಹೊರ ಬರುತ್ತದೆ.ಸರ್ಕಾರವೇ ಎಸ್‌ಐಟಿ ರಚನೆ ಮಾಡಿದೆ, ತನಿಖೆಯಾಗಲಿ.ಇದಕ್ಕೆ ಸಂಬಂಧಪಟ್ಟಂತೆ ಹೆಚ್‌ಡಿಕೆ ಹೇಳಿಕೆಯನ್ನು ಒಪ್ಪುತ್ತೇವೆ ಎಂದರು.

ಈ ನೆಲದ ಕಾನೂನು ಒಬ್ಬರಿಗೊಂದು ಇನ್ನೊಬ್ಬರಿಗೊಂದು ಇಲ್ಲ. ಎಲ್ಲರಿಗೂ ಒಂದೇ ರೀತಿ ಅಪ್ಲೈ ಆಗುತ್ತೆ.ತನಿಖೆಗೂ ಮುಂಚೆ ನಾವು ಯಾರನ್ನೂ ಅಪರಾಧಿ ಎಂದು ಘೋಷಣೆ ಮಾಡುವಂತಿಲ್ಲ. ತನಿಖೆ ನಂತರ ಸತ್ಯ ಏನು ಅನ್ನೋದು ಹೊರಬರುತ್ತೆ.



ದೂರುದಾರರ ದೂರಿನಲ್ಲಿನ ಹೇಳಿಕೆ ಪ್ರಕಾರ, ಇದು ನಾಲ್ಕೈದು ವರ್ಷದ ಹಿಂದಿನ ಘಟನೆ. ನಾಲ್ಕೈದು ವರ್ಷದ ಹಿಂದೆ ಜನತಾದಳ ಕಾಂಗ್ರೆಸ್ ಜೊತೆ ಇತ್ತು ಅನ್ನೋದು ಇವರು ಮರೆತಿದ್ದಾರೆ.ತನಿಖೆ ಆಗಲಿ, ಸತ್ಯ ಏನೆಂಬುದು ಹೊರಬರಲಿ ಎಂದು ಹೇಳಿದರು.

ಕಾಂಗ್ರೆಸ್‌ನವರಿಗೆ ಜಾಣಕುರುಡು ಜಾಣ ಕಿವುಡುಯಿದೆ.ಒಳ್ಳೆಯ ಸಂಗತಿ ಯಾವುದೂ ಕಾಂಗ್ರೆಸ್ ಕಣ್ಣಿಗೆ ಬೀಳಲ್ಲ. ಸುಳ್ಳು ಮತ್ತು ಕಾಂಗ್ರೆಸ್ ಒಂದೇ ನಾಣ್ಯದ ಎರಡು ಮುಖಗಳು.ಸುಳ್ಳಿನಿಂದಲೇ ಕಾಂಗ್ರೆಸ್ ಬದುಕಿದೆ.ಕಾಂಗ್ರೆಸ್‌ಗೆ ಸುಳ್ಳೇ ಆಕ್ಸಿಜನ್ ಇದ್ದಂಗೆ.ಸುಳ್ಳು ಇಲ್ಲದಿದ್ದರೆ ಕಾಂಗ್ರೆಸ್ ಸತ್ತು ಹೋಗುತ್ತದೆ.ಸುಳ್ಳನ್ನೇ ಉಸಿರಾಗಿಸಿಕೊಂಡು ಅವರು ಬದುಕಿದ್ದಾರೆ ಎಂದು ಹರಿಹಾಯ್ದಿದ್ದರು.

ಸಚಿವ ಶಿವರಾಜ್ ತಂಗಡಿಗಿಗೆ ಪ್ರಜಾಪ್ರಭುತ್ವದ ಅರ್ಥ ಗೊತ್ತಿಲ್ಲ. ಮೋದಿ ಮೋದಿ ಅಂದೋರಿಗೆ ಕಪಾಳಕ್ಕೆ ಹೊಡೀರಿ ಅಂತಾರೆ.ತಂಗಡಿಗಿಗೆ ಒಂದೊಂದು ಸಲ ತಾನು ಕಿಮ್ ಜಾಂಗ್ ಅನ್ನಿಸಿಬಿಡುತ್ತೆ. ಪ್ರಜಾಪ್ರಭುತ್ವದಲ್ಲಿ ಮತದಾರರೇ ಪ್ರಭುಗಳು.ಇದನ್ನು ತಂಗಡಗಿ ಮರೆತು ಬಿಟ್ಟಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com